♦ ಮಂಡ್ಯ ♦ ಮೈಸೂರು ♦ ಚಾಮರಾಜನಗರ ♦ ಹಾಸನ ♦ ರಾಮನಗರ ♦ ತುಮಕೂರು ♦ ಬೆಂಗಳೂರು ಗ್ರಾಮಾಂತರ ♦ ಬೆಂಗಳೂರು ನಗರ

E-mail:kayakayogi @gmail.com

website: www.kayakayogi.com

ಕಾಯಕ ಯೋಗಿ

ಸಂಪಾದಕರು:ಅರುಣಜ್ಯೋತಿ ಬಿ.ಕೆ. KAYAKA YOGI - Regional Daily ಪ್ರಾದೇಶಿಕ ದಿನಪತ್ರಿಕೆ

Connecting hearts in the cultural capital

ASK ಮೈಸೂರು

#askmysuru

RNI NO.KARKAN/2018/77805 | POST NO.KA/SK/MND/999/2022-2024 | ಮಂಡ್ಯ Mandya | ಸಂಪುಟ volume 07 | ಸಂಚಿಕೆ Issue 03 | ಗುರುವಾರ Thursday | 04-04-2024 | ಪುಟಗಳು Pages 06 | ಬೆಲೆ Rate 02 | ಸಂಪರ್ಕ 9980605484

ನನ್ನನ್ನು ರಾಷ್ಟ್ರಪತಿ, ಪ್ರಧಾನಮಂತ್ರಿ ಮಾಡ್ತೀನಿ ಅಂದ್ರೂ

ನಾನು ಬಿಜೆಪಿ ಕಡೆ ತಲೆ ಹಾಕಲ್ಲ: ಸಿ.ಎಂ

■ ಕಾಯಕಯೋಗಿ ಸುದ್ದಿ

ಮೈಸೂರು: ನನ್ನನ್ನು ರಾಷ್ಟ್ರಪತಿ, ಪ್ರಧಾನಮಂತ್ರಿ ಮಾಡ್ತೀನಿ ಅಂದ್ರೂ ನಾನು ಬಿಜೆಪಿ ಕಡೆ ತಲೆ ಹಾಕಲ್ಲ ಎಂದು ಮುಖ್ಯ ಮಂತ್ರಿ ಸಿದ್ದರಾಮಯ್ಯ ಅವರು ಸ್ಪಷ್ಟವಾಗಿ ನುಡಿದರು.

ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ನಡೆದ ಪರಿಶಿಷ್ಟ ಜಾತಿ, ವರ್ಗಗಳ ಕಾರ್ಯಕರ್ತರು ಮತ್ತು ಮುಖಂಡರ ಸಭೆಯಲ್ಲಿ ಲೋಕಸಭಾ ಅಭ್ಯರ್ಥಿ ಎಂ.ಲಕ್ಷ್ಮಣ್ ಪರ ಮತಯಾಚಿಸಿ ಮಾತನಾಡಿದರು.

ನಮಗೆ ಸೈದ್ಧಾಂತಿಕ ಸ್ಪಷ್ಟತೆ ಇದ್ದಾಗ ಮಾತ್ರ ರಾಜಕೀಯ ಶಕ್ತಿ ಬರುತ್ತದೆ. ಐಕ್ಯ-ಖಿಖಿಖ ಕಡೆ ತಲೆ ಹಾಕಬೇಡಿ.

ಶೂದ್ರರಿಗೆ-ದಲಿತರಿಗೆ-ಮಹಿಳೆಯರಿಗೆ ಖಿಖಿಖ ಗರ್ಭಗುಡಿಯೊಳಗೆ ಪ್ರವೇಶವನ್ನೇ ಕೊಡಲ್ಲ. ಮೋದಿ ಪ್ರಧಾನಿಯಾದರೆ ದೇಶ ತೊರೆಯುತ್ತೇನೆ ಎಂದಿದ್ದ ದೇವೇಗೌಡರು ಈಗ ಮೋದಿಗೂ ತಮಗೂ ಅವಿನಾಭಾವ ಸಂಬಂಧ ಇದೆ ಎನ್ನುತ್ತಿದ್ದಾರೆ. ರಾಜಕಾರಣಿಯಾದವರಿಗೆ ಸೈದ್ಧಾಂತಿಕ ಸ್ಪಷ್ಟತೆ ಇರಬೇಕು ಎಂದರು.





BJP ಮತ್ತು RSS ಸಾಮಾಜಿಕ ನ್ಯಾಯದ ವಿರೋಧಿ. ಹೀಗಾಗಿ ಮೀಸಲಾತಿಯನ್ನು ಇಷ್ಟ ಪಡುವುದಿಲ್ಲ. ಮೀಸಲಾತಿ ಎನ್ನುವುದು ಭಿಕ್ಷೆಯಲ್ಲ. ಅದು ಶೋಷಿತ ಜನ ಸಮುದಾಯಗಳ ಹಕ್ಕು ಎಲ್ಲಿಯವರೆಗೆ ಜಾತಿ ವ್ಯವಸ್ಥೆ ಇರುತ್ತದೋ ಅಲ್ಲಿಯವರೆಗೂ ಮೀಸಲಾತಿ ಇದ್ದೇ ಇರಬೇಕು ಎಂದರು

ಸ್ವಾತಂತ್ರ್ಯ ಪೂರ್ವದಲ್ಲಿ , ಬ್ರಿಟೀಷರಿಗೂ ಮೊದಲು ಓದುವ ಹಕ್ಕು ನಮಗೆ ಅಂದರೆ ಶೂದ್ರರಿಗೆ ಇತ್ತಾ ? ಮಹಿಳೆಯರಿಗೆ ಇತ್ತಾ? ಪತಿ ಮೃತಪಟ್ಟ ತಕ್ಷಣ ಪತ್ನಿ ಕೂಡ ಬೆಂಕಿಗೆ ಆಹುತಿ ಆಗಬೇಕಿತ್ತು. ಇಂಥಾ ಮನುಸ್ಮೃತಿ ಪ್ರೇರಿತ ಅಮಾನವೀಯ ಪದ್ಧತಿ ರದ್ದಾಗಿದ್ದು ನಮ್ಮ ಸಂವಿಧಾನದಿಂದ. ಹೀಗಾಗಿ ಈ ಸಂವಿಧಾನ ಬದಲಾಯಿಸಿ ಮತ್ತೆ ಮನುಸ್ಮೃತಿ ತರಬೇಕು ಎನ್ನುವುದು ಅವರ ಹುನ್ನಾರ. ಇದನ್ನು ಸರಿಯಾಗಿ ಅರ್ಥ ಮಾಡಿಕೊಳ್ಳಿ ಎಂದು ಕರೆ ನೀಡಿದರು.

ಶೂದ್ರರಿಗೆ, ದಲಿತರಿಗೆ ಮತ್ತು ಮಹಿಳೆಯರಿಗೆ ಗರ್ಭಗುಡಿಯೊಳಗೆ ಬಿಟ್ಟುಕೊಳ್ಳಲ್ಲ. ನಂಜೇಗೌಡರು ಅಂತ ಹಿರಿಯ ಬಿಜೆಪಿ ನಾಯಕರು ಮತ್ತು ಈಗಿನ ಬಿಜೆಪಿ ನಾಯಕ ಗೂಳಿಹಟ್ಟಿ ಶೇಖರ್ ಅವರು ಕೂಡ ತಮ್ಮನ್ನು RSS ಗರ್ಭಗುಡಿಯೊಳಗೆ ಬಿಟ್ಟುಕೊಳ್ಳಲ್ಲ ಅಂತ ಬಹಿರಂಗವಾಗಿ ಹೇಳಿದ್ದಾರೆ. ಇದು ಸತ್ಯ. ಹೀಗಾಗಿ ಶೂದ್ರರನ್ನು ಕೇವಲ ಬಳಸಿಕೊಳ್ತಾರೆ ಅಷ್ಟೆ ಆದ್ದರಿಂದ RSS ಕಡೆ ಶೂದ್ರರು, ದಲಿತರು, ಮಹಿಳೆಯರು ತಲೆ ಕೂಡ ಹಾಕಬಾರದು ಎಂದರು.

ಇಂಥಾ RSS ಜತೆ JDS ಸೇರಿಕೊಂಡಿದೆಯಲ್ಲಾ, ಇದನ್ನು ಟೀಕಿಸಬಾರದಾ? ದಲಿತರ ಜನಸಂಖ್ಯೆಗೆ ಅನುಗುಣವಾಗಿ ಬಜೆಟ್‌ನಲ್ಲಿ ಹಣ ಮೀಸಲಿಡುವ ಕಾನೂನನ್ನು ಜಾರಿಗೆ ತಂದಿದ್ದು ಕಾಂಗ್ರೆಸ್. ಅಭಿವೃದ್ಧಿ ಹಣದಲ್ಲಿ ಶೇ24.1% ಹಣ ಮೀಸಲಿಡಬೇಕು ಎನ್ನುವ ಕಾನೂನನ್ನು ಜಾರಿ ಮಾಡಿದ್ದು ನಮ್ಮ ಸರ್ಕಾರ. ಈ ಪ್ರಗತಿಪರ ಕಾನೂನನ್ನು ಇಡಿ ದೇಶದಲ್ಲಿ ಬಿಜೆಪಿಯ ಯಾವ ಸರ್ಕಾರವೂ ಜಾರಿ ಮಾಡಿಲ್ಲ. ಮಾಡಿರುವುದು ನಮ್ಮ ಕಾಂಗ್ರೆಸ್ ಸರ್ಕಾರ ಮಾತ್ರ. ಇದನ್ನೆಲ್ಲಾ ಜನ ಸಮುದಾಯ ತಿಳಿದುಕೊಳ್ಳಬೇಕು ಎಂದರು.

ಗುತ್ತಿಗೆಯಲ್ಲಿ ದಲಿತರಿಗೆ ಮೀಸಲಾತಿ ತಂದಿದ್ದು ನಮ್ಮ ಕಾಂಗ್ರೆಸ್ ಸರ್ಕಾರ. ಮಂಡಲ್ ವರದಿಯನ್ನು ವಿರೋಧಿಸಿದ್ದು, ಹಿಂದುಳಿದ ವರ್ಗಗಳಿಗೆ ಮೀಸಲಾತಿಯನ್ನು ವಿರೋಧಿಸಿದ್ದು ಇದೇ ಬಿಜೆಪಿ ತಾನೇ? SCP/ TSP ಕಾಯ್ದೆಯನ್ನು ಜಾರಿ ಮಾಡಿದ್ದು ಕಾಂಗ್ರೆಸ್ ಸರ್ಕಾರ. ಹೀಗಾಗಿ ನಿಮ್ಮನ್ನು ಭಾವನಾತ್ಮಕವಾಗಿ ಕೆರಳಿಸಿ, ನಿಮ್ಮ ಬದುಕಿಗೆ ಕೊಳ್ಳಿ ಇಡುವವರ ಜತೆ ಸೇರದೆ, ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ್ ಅವರನ್ನು ಗೆಲ್ಲಿಸಿ ಎಂದು ಕರೆ ನೀಡಿದರು.

ಸಮಾಜಕಲ್ಯಾಣ ಸಚಿವ ಹೆಚ್.ಸಿ.ಮಹದೇವಪ್ಪ, ಕೆಪಿಸಿಸಿ ಕಾರ್ಯಾಧ್ಯಕ್ಷರಾದ ಸಚ್ಚಿನ್ ಸೇಂಗ್ ಮತ್ತು ಲೋಕಸಭಾ ಅಭ್ಯರ್ಥಿ ಲಕ್ಷ್ಮಣ್ ಸೇರಿ ಹಲವು ನಾಯಕರು, ಕೆಪಿಸಿಸಿಯ ಎಸ್.ಸಿ/ಎಸ್.ಟಿ ವಿಭಾಗದ ಮುಖಂಡರು ಗಳು ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಬೈಕ್‌ಗೆ ಕಾರು ಡಿಕ್ಕಿ: ಸವಾರ ಸಾವು

ಹಲಗೂರು:ಕಾರೊಂದು ಬೈಕ್ ಗೆ ಡಿಕ್ಕಿ ಹೊಡೆದ ಪರಿಣಾಮ ಬೈಕ್ ಸವಾರ ಸ್ಥಳದಲ್ಲೇ ಮೃತಪಟ್ಟ ಘಟನೆ ಸಮೀಪದ ದಳವಾಯಿ ಕೋಡಿಹಳ್ಳಿ ಗ್ರಾಮದಲ್ಲಿ ಬುಧವಾರ ರಾತ್ರಿ ನಡೆದಿದೆ. ಸಮೀಪದ ಕೆಂಪಯ್ಯನದೊಡ್ಡಿ ಗ್ರಾಮದ ಮಹದೇವ (38) ಮೃತಪಟ್ಟ ವ್ಯಕ್ತಿ. ದಳವಾಯಿ ಕೋಡಿಹಳ್ಳಿ ಗ್ರಾಮದಲ್ಲಿ ಸಣ್ಣ ಹೋಟೆಲ್ ನಡೆಸುತ್ತಿದ್ದ ಈತ ತನ್ನ ದೈನಂದಿನ ಕೆಲಸ ಮುಗಿಸಿ ಸ್ವಗ್ರಾಮಕ್ಕೆ ಹಿಂದುರುಗುತ್ತಿದಾಗ ಹಲಗೂರು ಕಡೆಯಿಂದ ಕನಕಪುರ ಕಡೆಗೆ ಚಲಿಸುತ್ತಿದ್ದ ಕಾರು ಬೈಕ್ ಗೆ ಡಿಕ್ಕಿ ಹೊಡೆದಿದೆ. ಡಿಕ್ಕಿ ಹೊಡೆದ ರಭಸಕ್ಕೆ ತೀವ್ರ ರಕ್ತಸ್ರಾವ ಗೊಂಡ ಮಹದೇವ ಸ್ಥಳದಲ್ಲೇ ಮೃತಪಟ್ಟರು. ತೀವ್ರ ಗಾಯಗೊಂಡ ಹಿಂಬದಿ ಸವಾರ ನಂಜುಂಡ ನನ್ನು ಮಂಡ್ಯ ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆಗೆ ಸಾಗಿಸಲಾಗಿದೆ. ಅಪಘಾತ ನಡೆದ ನಂತರ ಚಾಲಕ ತನ್ನ ಕಾರಿನೊಂದಿಗೆ ಪರಾರಿಯಾಗಿದ್ದು, ಅಪಘಾತ ಸ್ಥಳದ ಸ್ವಲ್ಪ ದೂರದಲ್ಲಿ ಬಿದ್ದಿದ್ದ ಕಾರಿನ ನಂಬರ್ ಪ್ಲೇಟ್ ಆಧಾರದ ಮೇಲೆ ಪೊಲೀಸರು ಚಾಲಕನ ಪತ್ತೆಗೆ ಮುಂದಾಗಿದ್ದಾರೆ. ಈ ಸಂಬಂಧ ಹಲಗೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಚಾಮುಂಡೇಶ್ವರಿ ಕ್ಷೇತ್ರ ಸಿದ್ದು ಜಿಟಿಡಿ ಟಾಕ್ ವಾರ್

■ ಕಾಯಕಯೋಗಿ ಸುದ್ದಿ

ಮೈಸೂರು: ತನ್ನ ಫಲಿತಾಂಶದಿಂದಲೇ ದೇಶದ ಗಮನ ಸೆಳೆಯುವ ಚಾಮುಂಡೇಶ್ವರಿ ಕ್ಷೇತ್ರ ಲೋಕಸಭಾ ಚುನಾವಣೆಯಲ್ಲಿಯೇ ಅತಿಹೆಚ್ಚು ಮತದಾರರಿರುವ ಕ್ಷೇತ್ರವಾಗಿದ್ದು, ಇಲ್ಲಿ ಹೆಚ್ಚಿನ ಲೀಡ್ ಪಡೆಯುವ ನಿಟ್ಟಿನಲ್ಲಿ ಸಿಎಂ ಸಿದ್ದರಾಮಯ್ಯ ಹಾಗೂ ಜೆಡಿಎಸ್ ಶಾಸಕ ಜಿ.ಟಿ.ದೇವೇಗೌಡ ನಡುವೆ ಟಾಕಿಂಗ್ ವಾರ ಶುರುವಾಗಿದೆ.

ನಿನ್ನೆ ಖಾಸಗಿ ಹೋಟೆಲ್‌ನಲ್ಲಿ ಚಾಮುಂಡೇಶ್ವರಿ ಕ್ಷೇತ್ರದ ಕಾಂಗ್ರೆಸ್ ಮುಖಂಡರ ಸಭೆ ನಡೆಸಿದ ಸಿಎಂ ಸಿದ್ದರಾಮಯ್ಯ ಮಾತನಾಡಿ, ಚಾಮುಂಡೇಶ್ವರಿ ಕ್ಷೇತ್ರದಿಂದ ಜಿಟಿ ದೇವೇಗೌಡ ಮೂರು ಬಾರಿ ಎಂಎಲ್‌ಎ ಆಗಿದ್ದಾನೆ. ಮೂರು ಬಾರಿ ಗೆದ್ದು ಏನು ಕಡಿದು ಕಟ್ಟೆ ಹಾಕಿದ್ದಾನೆ ಹೇಳಲಿ. ಚಾಮುಂಡೇಶ್ವರಿ ಕ್ಷೇತ್ರದ ಪ್ರಮುಖರ ಸಭೆಯಲ್ಲಿ ಮಾತನಾಡಿದ ಅವರು, ಈ ಸಭೆ ಕರೆದಿರೋದು ಲೋಕಸಭೆಯಲ್ಲಿ ಚಾಮುಂಡೇಶ್ವರಿ ಕ್ಷೇತ್ರದಿಂದ ಹೆಚ್ಚಿನ ಮತ ನೀಡಲಿ. ಹಿಂದಿನ ಚುನಾವಣೆಯಲ್ಲಿ ಆಗಿರೋದರ ಬಗ್ಗೆ ಚರ್ಚೆ ಮಾಡೋ ಅಗತ್ಯ ಇಲ್ಲ. ನಾನು ಈ ಬಾರಿ ಒಕ್ಕಲಿಗರನ್ನೇ ಕ್ಯಾಂಡಿಡೇಟ್ ಮಾಡಬೇಕೆಂದು ತೀರ್ಮಾನ ಮಾಡಿದೆ.



ಈ ಚುನಾವಣೆ ನಮಗೆ ಒಂದು ಸವಾಲು, ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಕಾಂಗ್ರೆಸ್ ದುರ್ಬಲ ಅಲ್ಲ. ಈ ಹಿಂದೆ ನಮಗೆ ಸೋಲಾಗಿದ್ರೆ ಅದು ನಮ್ಮ ತಪ್ಪಿನಿಂದ ಹೊರತು ಜನ ತಿರಸ್ಕಾರ ಮಾಡಿದ್ದಾರೆ ಅನ್ನೋದು ಸರಿಯಲ್ಲ. ನನಗೆ ರಾಜಕೀಯವಾಗಿ ಜನ್ಮ ಕೊಟ್ಟ ಕ್ಷೇತ್ರ ಚಾಮುಂಡೇಶ್ವರಿ ಕ್ಷೇತ್ರ, ಇಡೀ ರಾಜ್ಯದಲ್ಲಿ ಕಾಂಗ್ರೆಸ್ ಪರವಾದ ವಾತಾವರಣ ಇದೆ. ಚಾಮುಂಡೇಶ್ವರಿ ಕ್ಷೇತ್ರದಿಂದ ಜಿ.ಟಿ.ದೇವೇಗೌಡ ಮೂರು ಬಾರಿ ಎಂಎಲ್‌ಎ ಆಗಿದ್ದಾನೆ. ಹುಣಸೂರಿನಲ್ಲಿ ಸೋತಿದ್ದ ಆ ಮೇಲೆ ಸತ್ಯನಾರಾಯಣ, ನನ್ನ ಮೇಲೆ, ಸಿದ್ದೇಗೌಡ ಮೇಲೆ ಒಮ್ಮೆ ಇಲ್ಲಿ ಗೆದ್ದಿದ್ದಾನೆ. ಮೂರು ಬಾರಿ ಗೆದ್ದು ಏನು ಕಡಿದು ಕಟ್ಟೆ ಹಾಕಿದ್ದಾನೆ ಹೇಳಲಿ ಎಂದು ಹೇಳಿದರು.

ಕಳೆದ ಬಾರಿ ಮೈತ್ರಿಯಾಗಿದ್ದ ವೇಳೆ ಒಬ್ಬರು ನಮಗೆ ಓಟ್ ಹಾಕಲಿಲ್ಲ. ಜೆಡಿಎಸ್ ನವರು ಬಿಜೆಪಿ ಮತ ಹಾಕಿರು. ಜೆಡಿಎಸ್ ನವರು ಬಿಜೆಪಿ ಅಭ್ಯರ್ಥಿ ಗೆದ್ದರು. 2018ರಲ್ಲಿ ನನ್ನ ಸೋಲಿಸಲಿಕ್ಕೆ ನಮ್ಮವರೇ ಹೆಚ್ಚಾದರು. ನಾನ್ ಕೆಲಸ ಮಾಡಿದರೂ ಯಾರಾವುದೂ ಕಾರಣಕ್ಕೋ ಯಾವುದೋ ದ್ವೇಷಕ್ಕೋ ನನ್ನನ್ನ ಸೋಲಿಸಿದ್ರು, ಇಷ್ಟೆಲ್ಲಾ ಅಭಿವೃದ್ಧಿ ಮಾಡಿ ಸೋಲಾಯಿತಲ್ಲ ಅನ್ನೋ ನೋವಿದೆ. ಚಾಮುಂಡೇಶ್ವರಿ ಕ್ಷೇತ್ರದ ಜನ ಮನಸ್ಸು ಮಾಡಿದ್ರೆ ಬಿಜೆಪಿ ಸೋಲಿಸೋದು ಕಷ್ಟ ಏನಿಲ್ಲ. ನೀವು ಮನಸ್ಸು ಮಾಡಿದ್ರೆ ನನಗೆ ಮರ್ಯಾದೆ ಬರುತ್ತೆ. ನೀವೆಲ್ಲರೂ ಮನಸ್ಸು ಮಾಡಬೇಕು ನಮ್ಮ ಅಭ್ಯರ್ಥಿ ಗೆಲ್ಲಬೇಕು ಎಂದು ಸಭೆಯಲ್ಲಿ ಸಿಎಂ ಸಿದ್ದರಾಮಯ್ಯ ಸೂಚಿಸಿದರು.

ಬಹಿರಂಗ ಚರ್ಚೆಗೆ ಬನ್ನಿ: ಜಿಟಿಡಿ ಸವಾಲು

ಮೈಸೂರು: ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಮೂರು ಬಾರಿ ಗೆದ್ದು ಏನು ಕಡಿದು ಕಟ್ಟೆ ಹಾಕಿದ್ದಾನೆ ಎಂದು ತಮ್ಮ ವಿರುದ್ಧ ವಾಗ್ಬಾಣ ನಡೆಸಿದ್ದ ಸಿಎಂ ಸಿದ್ದರಾಮಯ್ಯಗೆ ಶಾಸಕ ಜಿ.ಟಿ ದೇವೇಗೌಡ ತಿರುಗೇಟು ನೀಡಿದ್ದಾರೆ.

ಈ ಕುರಿತು ಮೈಸೂರಿನಲ್ಲಿ ಮಾತನಾಡಿದ ಶಾಸಕ ಜಿ.ಟಿ ದೇವೇಗೌಡ, ಚಾಮುಂಡೇಶ್ವರಿ ಕ್ಷೇತ್ರದ ಅಭಿವೃದ್ಧಿಗೆ ಸಿಎಂ ಸಿದ್ದರಾಮಯ್ಯ ಏನು ಮಾಡಲಿಲ್ಲ. ನಾನು ಎಷ್ಟು ಕಟ್ಟೆ ಕಟ್ಟಿದ್ದೇನೆ ತೋರಿಸುತ್ತೇನೆ. ಇವರು ಎಷ್ಟು ಕಟ್ಟೆ ಕಟ್ಟಿದ್ದಾರೆಂದು ತೋರಿಸಲಿ ಎಂದು ಸಿಎಂ ಸಿದ್ದರಾಮಯ್ಯಗೆ ಸವಾಲು ಹಾಕಿದರು.

ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಹೆಸರಿಗೆ ಮಾತ್ರ ನಾನು ಶಾಸಕ. ಯತೀಂದ್ರ ನಮ್ಮ ಕ್ಷೇತ್ರದಲ್ಲಿ ಕಮಿಷನ್ ದಂಧೆ ನಡೆಸುತ್ತಿದ್ದಾರೆ. ಗುತ್ತಿಗೆದಾರರು ಸಿಎಂ ಪುತ್ರನಿಗೆ ಕಮಿಷನ್ ಕೊಡಬೇಕು. ಕಾಂಗ್ರೆಸ್ ಸರ್ಕಾರ 60 ಪರ್ಸೆಂಟ್ ಕಮಿಷನ್ ಸರ್ಕಾರ. ಜಿಟಿಡಿ ಏನು ಕಡಿದು ಕಟ್ಟೆ ಹಾಕಿದ್ದಾನೆಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ. ಎಷ್ಟು ದಿನ ನೀವು ಸಿಎಂ ಆಗಿರುತ್ತೀರಿ. ನಿಮ್ಮ ಬಗ್ಗೆ ನಾನು ಗೌರವ ಇಟ್ಟುಕೊಂಡಿದ್ದೇನೆ. ಚಾಮುಂಡೇಶ್ವರಿ ಕ್ಷೇತ್ರಕ್ಕೆ ನೀವೇನು ಮಾಡಿದ್ದೀರಿ ಒಬ್ಬ ಅಧಿಕಾರಿಯನ್ನ ಬಿಟ್ಟಿದ್ದೀರಾ. ತಮಗೆ ಬೇಕಾಗಿರುವ ಅಧಿಕಾರಿಗಳನ್ನ ಹಾಕಿಕೊಂಡಿದ್ದಾರೆ ವರ್ಗಾವಣೆ ಧಂಧೆಯಾಗಿದೆ. ವರುಣಾದಲ್ಲಿ ನೀವೇನು ಸುಮ್ಮನೆ ಗೆಲ್ಲಲಿಲ್ಲ ಎಂದು ವಾಗ್ದಾಳಿ ನಡೆಸಿದರು.

ಬಿಜೆಪಿಯಿಂದ ಅಪಪ್ರಚಾರ

ಮರಳು ದಂಧೆ ಸಾಬೀತುಪಡಿಸಿದರೇ ನಾಮಪತ್ರವೇ ಸಲ್ಲಿಸಲ್ಲ

■ ಕಾಯಕಯೋಗಿ ಸುದ್ದಿ

ಚಾಮರಾಜನಗರ: ಗೋ ಬ್ಯಾಕ್ ಸುನಿಲ್ ಬೋಸ್ ಎಂದು ಪೋಸ್ಟರ್ ಅಂಟಿಸಿರುವುದು ಬಿಜೆಪಿಯವರು, ಅವರೇ ಅಪಪ್ರಚಾರ ಮಾಡುತ್ತಿದ್ದಾರೆ ಎಂದು ಕಾಂಗ್ರೆಸ್ ಅಭ್ಯರ್ಥಿ ಸುನೀಲ್ ಬೋಸ್ ಹೇಳಿದರು.

ಚಾಮರಾಜನಗರದಲ್ಲಿ ಸುದ್ದಿ ಗಾರರೊಂದಿಗೆ ಅವರು ಮಾತನಾಡಿ, ಗೋ ಬ್ಯಾಕ್ ಅಂಥಾ ಯಾಕೆ ಹಾಕಿದ್ದಾರೆ, ನಾನು ಹೊರಗಿ ನವನಾ? ಮರಳು ಮಾಫಿಯಾ ಕೇಸ್ ಕೋರ್ಟ್‌ನಲ್ಲಿ ವಜಾ ಆಗಿದೆ. ಕ್ಲೀನ್ ಚಿಟ್ ಕೊಡಲಾಗಿದೆ. ಬಿಜೆಪಿಯವರಿಗೆ ಸವಾಲು ಹಾಕುತ್ತೇನೆ, ನನ್ನ ವಿರುದ್ಧ ಮರಳು ದಂಧೆ ಆರೋಪ ಸಾಬೀತು ಮಾಡಿದರೇ ನಾನು ನಾಮಪತ್ರವನ್ನೇ ಸಲ್ಲಿಸುವುದಿಲ್ಲ ಎಂದರು. ಗೋ ಬ್ಯಾಕ್ ಬರೆದವರ ವಿರುದ್ಧ ದೂರು ಕೊಡ್ತೀನಿ. ಚುನಾವಣಾಧಿಕಾರಿಗಳಿಗೆ ದೂರು ಕೊಡಲಾಗುವುದು. ಮಾಧ್ಯಮವರು ಹೇಳಿದ ಮೇಲೆ ಗೋ ಬ್ಯಾಕ್ ವಿಚಾರ ಗಮನಕ್ಕೆ ಬಂದಿದೆ, ಬಿಜೆಪಿಯವರು ಈ ಅಪಪ್ರಚಾರ ಮಾಡಿದ್ದಾರೆ ಎಂದು ಕಿಡಿಕಾರಿದರು. ಕರ್ನಾಟಕದಲ್ಲಿ ಮೋದಿ ಹವಾ ಇಲ್ಲಾ, ಕಾಂಗ್ರೆಸ್ ಈ ಬಾರಿ ಜಯ ಗಳಿಸಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.



ಮಾರಿ ಹಬ್ಬದ ಜಾತ್ರೆ ವೇಳೆ ಪೊಲೀಸ್ ಸಿಬ್ಬಂದಿ ಮೇಲೆ ಹಲ್ಲೆ

ಇಬ್ಬರು ಯುವಕರ ಬಂಧನ

■ ಕಾಯಕಯೋಗಿ ಸುದ್ದಿ



ನಂಜನಗೂಡು : ಮಾರಿ ಹಬ್ಬದ ಜಾತ್ರೆ ವೇಳೆ ಜಗಳವಾಡುತ್ತಿದ್ದ ಎರಡು ಗುಂಪುಗಳ ಯುವಕರನ್ನು ಸಮಾಧಾನ ಪಡಿಸಲು ಹೋದ ಪೊಲೀಸ್ ಪೇದೆ ಮೇಲೆ ಇಬ್ಬರು ಯುವಕರು ಹಲ್ಲೆ ನಡೆಸಿದ ಘಟನೆ ನಂಜನಗೂಡು ತಾಲ್ಲೂಕಿನ ಹುಲ್ಲಹಳ್ಳಿ ಹೋಬಳಿಯ ಹಾಡ್ಯ ಗ್ರಾಮದಲ್ಲಿ ನಡೆದಿದೆ. ಘಟನೆ ಸಂಬಂಧ ಹಲ್ಲೆ ನಡೆಸಿದ ಸಂತೋಷ್ ಹಾಗೂ ಆನಂದ ಎಂಬ ಯುವಕರನ್ನು ಹುಲ್ಲಹಳ್ಳಿ ಠಾಣೆಯ ಪೊಲೀಸರು ಇಂದು ಬುಧವಾರ ಮಧ್ಯಾಹ್ನ 1 ಗಂಟೆಯ ಸಮಯದಲ್ಲಿ ಬಂಧಿಸಿದ್ದಾರೆ.



ಹಲ್ಲೆಗೆ ಕುಮ್ಮಕ್ಕು ನೀಡಿದ ಇತರರ ಮೇಲೂ ಹುಲ್ಲಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಗ್ರಾಮದಲ್ಲಿ ಸಡಗರ ಮತ್ತು ಸಂಭ್ರಮದಿಂದ ನಡೆಯುತ್ತಿದ್ದ ಮಾರಿ ಹಬ್ಬದ ಜಾತ್ರೆ ವೇಳೆ ಕಾಲಭೈರವೇಶ್ವರ ದೇವಸ್ಥಾನದ ಮುಂದೆ ಹುಲ್ಲಹಳ್ಳಿ ಠಾಣೆ ಪೇದೆ ಕುಮಾರ್ ಎಂಬುವರು ಕರ್ತವ್ಯ ನಿರ್ವಹಿಸುತ್ತಿದ್ದರು. ಈ ವೇಳೆ ಎರಡು ಗುಂಪುಗಳ ಯುವಕರು ಕ್ಷುಲ್ಲಕ ಕಾರಣಕ್ಕೆ ಗಲಾಟೆ ಮಾಡಿಕೊಂಡಿದ್ದಾರೆ.

6ನೇ ಪುಟಕ್ಕೆ

ಸುಮಲತಾರ ಮೇಲೆ ವಿಶ್ವಾಸ ಇದೆ: ಮಾಜಿ ಸಿಎಂ ಎಚ್.ಡಿ.ಕುಮಾರಸ್ವಾಮಿ

■ ಕಾಯಕಯೋಗಿ ಸುದ್ದಿ

ಮೈಸೂರು: ನಾನು ಸುಮಲತಾ ಅವರ ಮನೆಗೆ ಹೋದಾಗ ಸಹೋದರನ ರೀತಿ ನೋಡಿದ್ದಾರೆ. ಇಂದು ಮಂಡ್ಯದಲ್ಲಿ ಅವರ ಹಿತೈಷಿಗಳ ಸಭೆ ನಡೆದು ತೀರ್ಮಾ ನಿಸಲಿದ್ದಾರೆ. ಸಭೆಯಲ್ಲಿ ಅಂತಿಮ ನಿರ್ಣಯ ಮಾಡಲಿದ್ದಾರೆ. ಅವರ ನಿರ್ಣಯವನ್ನು ಕುತೂಹಲದಿಂದ ಕಾಯುತ್ತಿದ್ದಾರೆ.

ಜಿಲ್ಲೆಯ ಅಭಿವೃದ್ಧಿ ದೃಷ್ಟಿಯಿಂದ ಅವರು ನಿರ್ಧಾರ ಮಾಡುತ್ತಾರೆ. ಅವರ ಮನೆಗೆ ಹೋಗಿದ್ದ ವೇಳೆ ಅತ್ಯಂತ ಅಭಿಮಾನ, ವಿಶ್ವಾಸದಿಂದ ಬರವಾಡಿಕೊಂಡರು. ಭಿನ್ನಾಭಿಪ್ರಾಯ ಏನೇ ಇದ್ದರೂ ಸಹೋದರನಂತೆ ಭಾವಿಸಿದ್ದರು. ಅವರು ನನ್ನನ್ನು ಬೆಂಬಲಿಸಬಹುದು. ನನಗೆ ಅವರ ಮೇಲೆ ವಿಶ್ವಾಸವಿದೆ.ಸಿದ್ದರಾಮಯ್ಯ ಅವರ ಜೀವನದಲ್ಲಿ ಜಾ.ದಳ ಕಾರ್ಯಕರ್ತರು, ದೇವೇಗೌಡರ ಭಜನೆ ಮಾಡಿಕೊಂಡು ಬಂದವರು.ಅವರ ಭಜನೆಯ ವಾಸನೆ ದೂರ ಹೋಗಿಲ್ಲ. ಹೀಗಾಗಿ ನಾನು ಏನು ಮಾಡೋದಕ್ಕೆ ಆಗುತ್ತೆ.ನಿನ್ನೆ ಅವರ ಹೇಳಿಕೆಗಳನ್ನು ಗಮನಿಸಿದ್ದೇನೆ. ಸಿಎಂ ಹುದ್ದೆಯ ಜತೆಗೆ ಜ್ಯೋತಿಷಿ ಆಗಿದ್ದಾರೆ. ಜ್ಯೋತಿಷ್ಯ ಹೇಳುವುದನ್ನೂ ಅವರು ಕಲಿತಿದ್ದಾರೆ. ನಾನು ಮೈಸೂರಿನಲ್ಲಿ ಮೈತ್ರಿ ಧರ್ಮ ಪಾಲಿಸಿದ್ದೇನೆ. ನಾನು ಮೈತ್ರಿ ಧರ್ಮ ಪಾಲಿಸದಿದ್ದರೆ ಒಂದೂ ಸ್ಥಾನ ಗೆಲ್ಲುತ್ತಿರಲಿಲ್ಲ.ಬೆಂಗಳೂರು ಗ್ರಾಮಾಂತರದಲ್ಲಿ ನಾವು ಪ್ರಾಮಾಣಿಕ ಕೆಲಸ ಮಾಡಿದ್ದೇವೆ. ನಾವು ಕೆಲಸ ಮಾಡಿದ್ದರೆ ಡಿ.ಕೆ.ಸುರೇಶ್ ಸೋಲುತ್ತಿದ್

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ–2 | 04–04–2024

ಮಂಡ್ಯ

ಬಿಜೆಪಿ ಪಕ್ಷ ಸೋಲಿಸಲು ದೇಶ ಉಳಿಸಿ ಸಂಕಲ್ಪ ಯಾತ್ರೆ

■ ಕಾಯಕಯೋಗಿ ಸುದ್ದಿ

ಮಂಡ್ಯ : ದೇಶದಲ್ಲಿ ಅಧಿಕಾರದಲ್ಲಿರುವ ಸಂವಿಧಾನ ವಿರೋಧಿ, ಧರ್ಮಾಂಧ, ಸುಲಿಗೆಕೋರ ಬಿಜೆಪಿಯನ್ನು ಸೋಲಿಸುವುದು, ಬಣ್ಣ ಬಣ್ಣದ ಕನಸುಗಳ ಮಹಾಪೂರ ಹರಿಸಿ ಅಧಿಕಾರಕ್ಕೆ ಬಂದ ಮೋದಿ ಸರ್ಕಾರ ದೇಶದ ಪರಿಸ್ಥಿತಿಯನ್ನು ಅಧೋಗತಿಗೆ ತಂದಿಟ್ಟಿದೆ. ಆದ್ದರಿಂದ ಕರ್ನಾಟಕದಲ್ಲಿ ಅನೇಕ ಜನ ಚಳವಳಿಗಳು, ಸಂಘಟನೆಗಳು, ವೇದಿಕೆಗಳು ಒಗ್ಗೂಡಿ ಸಂವಿಧಾನ ವಿರೋಧಿ ಬಿಜೆಪಿ ಪಕ್ಷವನ್ನು ಸೋಲಿಸುವುದಕ್ಕಾಗಿ ದೇಶ ಉಳಿಸಿ ಸಂಕಲ್ಪ ಯಾತ್ರೆಯನ್ನು ಹಮ್ಮಿಕೊಂಡಿದ್ದೇವೆ ಎಂದು ಅಮ್‌ಆದ್ಮಿ ಪಕ್ಷದ ರಾಜ್ಯ ಉಪಾಧ್ಯಕ್ಷ ಡಾ.ರಮೇಶ್ ಬೆಲ್ಲಂಕೊಂಡ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿಜೆಪಿ ತನ್ನ ದುರಾಡಳಿತದಿಂದ ಜನಸಾಮಾನ್ಯರ ಬದುಕನ್ನು ಪಾತಾಳಕ್ಕೆ ತುಳಿದಿದೆ. ಬೆಲೆ ಏರಿಕೆ, ಕೃಷಿಬಿಕ್ಕಟ್ಟು, ನಿರುದ್ಯೋಗ, ಭ್ರಷ್ಟಾಚಾರ, ಕಂಪನಿಗಳ ಲೂಟಿ, ಸಾಮಾನ್ಯರ ಸುಲಿಗೆ, ಕರ್ನಾಟಕಕ್ಕೆ ಅನ್ಯಾಯ, ಹೆಚ್ಚಿರುವ ಹಿಂಸೆ, ದಮನ, ದೌರ್ಜನ್ಯ, ಧಾರ್ಮಿಕ ದ್ವೇಷ ಇವೆಲ್ಲವೂ ಈ ಸರ್ಕಾರದ ಬಳುವಳಿಗಳಾಗಿವೆ ಎಂದು ಕಿಡಿಕಾರಿದರು. ಬಿಜೆಪಿ ಪಕ್ಷವು ಇಸ್‌ಬಾರ್ ಚಾರ್ ಸೌ ಪಾರ್ ಎಂಬ ಹುಸಿ ಪ್ರಚಾರದಲ್ಲಿ ತೊಡಗಿದೆ. ಅವರು ಏನೇ ಹೇಳಿ ದರೂ ಜನರು ತೀರ್ಮಾನಿಸಿದ್ದಾರೆ. ಇಸ್ ಬಾರ್ ಬಿಜೆಪಿ ಕಿ ಹಾರ್ ಬಿಜೆಪಿ 400 ಮುಟ್ಟುವುದಿರಲಿ 200 ತಲುಪುವುದೂ ಕಷ್ಟವಿದೆ. ಜನಸಾಮಾನ್ಯರನ್ನು ಸಂಕಷ್ಟಗಳ ಕೂಪಕ್ಕೆ ತಳ್ಳಿರುವ ಬಿಜೆಪಿಗೆ ಜನ ಸೂಕ್ತ ಪಾಠ ಕಲಿಸಲಿದ್ದಾರೆ ಎಂದರು.ಸಿಪಿಐಎಂ ಕಾರ್ಯದರ್ಶಿ ಕೃಷ್ಣೇಗೌಡ ಮಾತನಾಡಿ, ಕರ್ನಾಟಕದ ಸಮಸ್ತ ಜನತೆ ಸಂಘಟನೆಗಳ ಆಶ್ರಯದಲ್ಲಿ ಏ.1ರಿಂದ ಜಾಲತಿ ಪಡೆದಿರುವ ದೇಶ ಉಳಿಸಿ ಸಂಕಲ್ಪಯಾತ್ರೆ ಮೂರು ಮಾರ್ಗಗಳಲ್ಲಿ ಮೂರು ಮಾರ್ಗಗಳಲ್ಲಿ ಚಲಿಸಿ ರಾಜ್ಯದ ಎಲ್ಲಾ ಜಿಲ್ಲೆಗಳನ್ನು ಹಾಯ್ದು ಏ.ಸರಂಯ ಬೆಳಗಾವಿ ತಲುಪಲಿದೆ. ಅಲ್ಲಿ ದೇಶ ಉಳಿಸಿ ಸಂಕಲ್ಪ ಸಮಾವೇಶ ಜರುಗಲಿದೆ ಎಂದು ಹೇಳಿದರು.ಗೋಷ್ಠಿಯಲ್ಲಿ ರೈತಸಂಘದ ಜಿಲ್ಲಾಧ್ಯಕ್ಷ ಕೆಂಪೂಗೌಡ, ದಸಂಸ ಮುಖಂಡ ಗುರು ಪ್ರಸಾದ್ ಕೆರಗೋಡು, ವಕೀಲ ಬಿ.ಟಿ.ವಿಶ್ವನಾಥ್, ಪೂರ್ಣಿಮ, ಸಿದ್ದರಾಜು, ಶಿಲ್ಪ, ನಾಗರಾಜು ಇದ್ದರು.

ಕಾಂಗ್ರೆಸ್ ಅಭ್ಯರ್ಥಿ ಬೆಂಬಲಿಸಲು ಪುಟ್ಟಮಾದು ಕರೆ


ಮಂಡ್ಯ : ಸಂವಿಧಾನ ಬದಲಾವಣೆಗೆ ಹುನ್ನಾರ ನಡೆಸಿರುವ ಕೋಮುವಾದಿ ಬಿಜೆಪಿ ಹಾಗೂ ಜಾತಿವಾದಿ ಜೆಡಿಎಸ್ ಪಕ್ಷಗಳನ್ನು ತಿರಸ್ಕರಿಸಿ ಮಂಡ್ಯ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸ್ಟಾರ್‌ಚಂದ್ರು ಅವರನ್ನು ಬೆಂಬಲಿಸಲಾಗುವುದು ಎಂದು ಕರ್ನಾಟಕ ಪ್ರಾಂತ ಕೃಷಿ ಕೂಲಿಕಾರರ ಸಂಘದ ರಾಜ್ಯಾಧ್ಯಕ್ಷ ಎಂ.ಪುಟ್ಟಮಾದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬೆಲೆ ನಿಯಂತ್ರಿಸುವುದಕ್ಕೆ ಬದಲಾಗಿ ಬೆಲೆ ನಿಯಂತ್ರಣ ಕಾನೂನನ್ನು ಕಿತ್ತೆಸೆದು ರಾಜ್ಯದ ಜನತೆಗೆ ಹೆಜ್ಜಿನ ಅಕ್ಕಿ ಕೊಡದೆ ಕುಲಿಕಾರರಿಗೆ, ಮಕ್ಕಳಿಗೆ ನಿತ್ಯದ ಊಟ ಕೂಡ ಕಷ್ಟಕರವಾದಂತೆ ಮಾಡಿದ, ಪಡಿತರ ಚೀಟಿಯಲ್ಲಿ ಜೀವನಾವಶ್ಯಕ ವಸ್ತುಗಳನ್ನು ಹಗ್ಗದ ಬೆಲೆಗೆ ಒದಗಿಸಲು ನಿರಾಕರಿಸಿದ ಬಿಜೆಪಿಯನ್ನು ಸೋಲಿಸಲು ನಿರ್ಧರಿಸಿದ್ದೇವೆ ಎಂದು ಹೇಳಿದರು.

ಗೋಷ್ಠಿಯಲ್ಲಿ ಸಂಘದ ಪದಾಧಿಕಾರಿಗಳಾದ ಹನುಮೇಶ್, ಶಿವಮಲ್ಲಯ್ಯ, ಅಮಾಸಯ್ಯ, ರಾಜು, ಶುಭಾವತಿ, ರಾಮಣ್ಣ ಇದ್ದರು.

ಚುನಾವಣೆಯಲ್ಲಿ ಬಿಜೆಪಿಗೆ ಜನ ತಕ್ಕ ಪಾಠ ಕಲಿಸಲಿದ್ದಾರೆ

■ ಕಾಯಕಯೋಗಿ ಸುದ್ದಿ



ಮದ್ದೂರು: ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ರಾಜ್ಯಕ್ಕೆ ಅನ್ಯವಾಗುತ್ತಿದ್ದು, ರಾಜ್ಯದ ಜನರು ಲೋಕಸಭಾ ಚುನಾವಣೆಯಲ್ಲಿ ಬಿಜೆಪಿಗೆ ತಕ್ಕ ಪಾಠ ಕಲಿಸಲಿದ್ದಾರೆ ಎಂದು ಗೃಹ ಸಚಿವ ಜಿ. ಪರಮೇಶ್ವರ್ ಕೇಂದ್ರ ಸರ್ಕಾರಕ್ಕೆ ಎಚ್ಚರಿಕೆ ನೀಡಿದರು.

ಬೆಂಗಳೂರಿನಿಂದ ಮೈಸೂರಿಗೆ ಚುನಾವಣಾ ಪ್ರಚಾರಕ್ಕೆ ಹೋಗುವ ಮಾರ್ಗ ಮಧ್ಯೆ ಬುಧವಾರ ಜೆಪಂ ಮಾಜಿ ಅಧ್ಯಕ್ಷ ಕಂಠಿ ಸುರೇಶ್ ಅವರಿಂದ ಅಭಿನಂದನೆ ಸ್ವೀಕರಿಸಿ ಸುದ್ದಿಗಾರರೊಂದಿಗೆ ಬಾಧ್ಯವಾರ ಮಾತನಾಡಿದು.

ಕೇಂದ್ರ ಗೃಹ ಸಚಿವ ಅಭಿಷಾ ಅವರಿಗೆ ರಾಜ್ಯದಲ್ಲಿ ಮತ ಕೇಳುವ ಯಾವುದೇ ರೀತಿಯ ನೈತಿಕತೆ ಉಳಿಸಿಕೊಂಡಿಲ್ಲ. ಎನ್ ಡಿ ಆರ್ ಎಫ್ ನಲ್ಲಿ ಕೊಡಬೇಕಾದ ಬರದ ಹಣವನ್ನು 1 ರೂ. ಕೊಟ್ಟಿಲ್ಲ. ಜೊತೆಗೆ ಜಿಎಸ್‌ಟಿ ರಾಜ್ಯದ ಪಾಲನ್ನು ಸಮರ್ಪಕವಾಗಿ ನೀಡದ ಇವರಿಗೆ ರಾಜ್ಯದಲ್ಲಿ ಮತ ಕೇಳುವ ಯಾವುದೇ ನೈತಿಕತೆ ಇಲ್ಲ ಎಂದು ಕಿಡಿಕಾರಿದರು.

ರಾಜ್ಯದಲ್ಲಿ ತೀವ್ರ ಬರಗಾಲವಿದ್ದರೂ ಎನ್‌ಡಿಆರ್‌ಎಫ್ ವತಿಯಿಂದ ನೀಡಬೇಕಾಗಿರುವ ಅನುದಾನವನ್ನು ನೀಡಿಲ್ಲ ಜೊತೆಗೆ ದೇಶದಲ್ಲೇ ಅತಿ ಹೆಚ್ಚು ಜಿಎಸ್‌ಟಿ ಪಾಲನ್ನು ನೀಡುವ ನಮ್ಮ ರಾಜ್ಯಕ್ಕೆ ಸರಿಯಾದ ಹಣವನ್ನು ನೀಡದೆ ಕೇಂದ್ರ ಸರ್ಕಾರ ವಂಚಿಸುತ್ತಿದೆ ಎಂದರು. ರಾಜ್ಯಕ್ಕೆ ಹಿಂದೆ ಜಿಎಸ್‌ಟಿ ಪಾಲನ್ನು 1.42 ಲಕ್ಷ ಕೋಟಿ ಕೊಡಲಾಗುತ್ತಿತ್ತು. ಈಗ 4.5 ಲಕ್ಷ ಕೋಟಿ ನೀಡಲಾಗುತ್ತಿದೆ ಅದಕ್ಕೆ ತಕ್ಕಂತೆ ಜಿಎಸ್ ಟಿ ಪಾಲು ನೀಡಬೇಕು ಆದರೆ ಅಮಿತ್ ಶಾ ರವರು ರಾಜ್ಯದ ಜನರಿಗೆ ಸುಳ್ಳು ಹೇಳಿದ್ದಾರೆ ಎಂದರು.

ಹಿಂದೆ ರಾಜ್ಯದಿಂದ 1. 25 ಕ್ಷ ಕೋಟಿ ಮಾತ್ರ ಜಿಎಸ್ಟಿ ಪಾಲು ಹೋಗುತ್ತಿತ್ತು ಇಂದು ನಾಕು ಲಕ್ಷ ಕೋಟಿ ಜಿಎಸ್‌ಟಿ ಪಾಲನ್ನು ರಾಜ್ಯದ ವತಿಯಿಂದ ಕೊಡಲಾಗುತ್ತಿದ್ದರು ಜಿಎಸ್‌ಟಿ ಫಲನ ಕೊಡದೆ ತಪ್ಪು ಮಾಹಿತಿ ಬಿತ್ತಿರುವ ಅಮಿತ್ ಶಾ ಅವರ ನಡೆ ಸರಿಯಿಲ್ಲ ಎಂದು ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ಲೋಕಸಭಾ ಚುನಾವಣೆಯಲ್ಲಿ ರಾಜ್ಯದಲ್ಲಿ ಸುಮಾರು 20ಕ್ಕೂ ಹೆಚ್ಚು ಸ್ಥಾನಗಳನ್ನ ನಾವು ಈಗಾಗಲೇ ಗೆದ್ದಾಗಿದೆ ಕಾಂಗ್ರೆಸ್ ಸರ್ಕಾರ ಜನರಿಗೆ ಜನಪರವಾದ ಯೋಜನೆಗಳನ್ನು ನೀಡುವ ಮೂಲಕ ಸಮಾಜ ಕಟ್ಟಕಡೆಯ ವ್ಯಕ್ತಿಗೂ ಅನುಕೂಲ ವನ್ನು ಕಲ್ಪಿಸಿರುವುದರಿಂದ ರಾಜ್ಯದ ಜನರು ಕಾಂಗ್ರೆಸ್ ಪಕ್ಷವನ್ನು ಬೆಂಬಲ ನೀಡಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಮಂಡ್ಯದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸ್ಟಾರ್ ಚಂದ್ರುರವರು ನೂರಕ್ಕೆ ನೂರರಷ್ಟು ಗೆಲ್ಲುವುದು ಖಚಿತವಾಗಿದ್ದು, ಕುಮಾರಸ್ವಾಮಿ ರವರು ಜಿಲ್ಲೆಗೆ ಯಾವುದೇ ಕೊಡುಗೆಯನ್ನು ನೀಡಿಲ್ಲ ಸುಮಾರು 15 ವರ್ಷಗಳಿಂದ ಜಿಲ್ಲೆಯನ್ನ ಜನರನ್ನ ಮತ ಬ್ಯಾಂಕ್ ಮಾಡಿಕೊಂಡಿದ್ದಾರೆ ಹೊರತು ಯಾವುದೇ ಅಭಿವೃದ್ಧಿಯನ್ನು ಮಾಡಿಲ್ಲ. ಆದ್ದರಿಂದ ಈ ಬಾರಿ ಅವರ ಸೋಲು ಕಟ್ಟಿಟ್ಟ ಬುತ್ತಿಯಾಗಿದ್ದು ಅವರ ಗೆಲುವು ಕೇವಲ ಭ್ರಮೆಯಾಗಿದೆ ಎಂದು ದೇವಡಿ ಮಾಡಿದರು.

ಎಚ್. ಡಿ. ದೇವೇಗೌಡರವರನ್ನ ಪ್ರಧಾನಿ ಮಾಡಿದ್ದು ಕಾಂಗ್ರೆಸ್ ಪಕ್ಷ, ಎಚ್.ಡಿ.ಕುಮಾರ ಸ್ವಾಮಿ ಅವರನ್ನ ಮುಖ್ಯಮಂತ್ರಿ ಮಾಡಿದ್ದು ಕಾಂಗ್ರೆಸ್ ಪಕ್ಷವಾಗಿದ್ದು ಕಾಂಗ್ರೆಸ್ ಪಕ್ಷ ಅವರಿಗೆ ಯಾವುದೇ ರೀತಿಯ ದ್ರೋಹವನ್ನ ಮಾಡಿಲ್ಲ ಜೊತೆಗೆ ಕಾಂಗ್ರೆಸ್ ಪಕ್ಷಕ್ಕೆ ದೆಬಲ ನೀಡಿದ ಯಾವುದೇ ಪಕ್ಷಗಳನ್ನ ಗೌರವಹಿತವಾಗಿ ನಡೆಸಿಕೊಂಡು ಬಂದಿದೆ ಕಾಂಗ್ರೆಸ್ ದ್ರೋಹ ಮಾಡಿದೆ ಎಂಬುದು ಸತ್ಯಕ್ಕೆ ದೂರವಾದ ಸಂಗತಿ ಎಂದು ತಿಳಿಸಿದರು.

ದಲಿತರಿಗೆ ಕಾಂಗ್ರೆಸ್ ಎಂದು ಕೂಡ ಅನ್ಯಾಯ ಮಾಡಿಲ್ಲ ಅವರಿಗೆ ಒಳ್ಳೆಯದನ್ನೇ ಮಾಡಿಕೊಂಡು ಬರುತ್ತಿದೆ ದಲಿತರ ಪರವಾಗಿ ಕಾಂಗ್ರೆಸ್ ಸರ್ಕಾರವಿದ್ದು ವಿರೋಧಿಗಳು ಹೇಳುವ ಹೇಳಿಕೆಗಳನ್ನ ಗಂಭೀರವಾಗಿ ತೆಗೆದುಕೊಳ್ಳಬಾರದೆಂದು ತಿಳಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಜಕೀಯ ನಿವೃತ್ತಿ ಘೋಷಣೆ ಮಾಡಿರಬಹುದು, ಆದರೆ ಅವರ ರಾಜಕೀಯ ಅನುಭವ ಮುಂದಿನ ತಲೆ ಮಾರಿಗೂ ಬೇಕಾಗಿದೆ. ಮುಂದೆಯೂ ಅವರ ಸಲಹೆ ಸಹಕಾರ ಅನಿವಾರ್ಯವಾಗಿದೆ ಎಂದರು.

ಸ್ಟಾರ್‌ಚಂದ್ರು ಗ್ಯಾರಂಟಿ ಯೋಜನೆಯ ಜಿಲ್ಲಾ ಉಪಾಧ್ಯಕ್ಷ ರಾಜೇಂದ್ರ, ಜೆಪಂ ಮಾಜಿ ಅಧ್ಯಕ್ಷ ಕಂಠಿ ಸುರೇಶ್, ಮುಖಂಡರಾದ ಸ್ವಾರಾಜ್ ಕಂಠಿ, ಮನು ಇದ್ದರು.

ದಿ.ಜಿ.ಮಾದೇಗೌಡ–ದಿ.ಅಂಬರೀಶ್ ಸಮಾಧಿಗೆ ಎಚ್ಡಿಕೆ ಪುಷ್ಪನಮನ





■ ಕಾಯಕಯೋಗಿ ಸುದ್ದಿ

ಭಾರತೀನಗರ: ಮಂಡ್ಯ ಲೋಕಸಭಾ ಕ್ಷೇತ್ರದ ಬಿಜೆಪಿ ಜೆಡಿಎಸ್ ಮೈತ್ರಿ ಅಭ್ಯರ್ಥಿ ಹೆಚ್.ಡಿ.ಕುಮಾರಸ್ವಾಮಿ ಅವರು ನಾಮ ಪತ್ರ ಸಲ್ಲಿಸುವ ಮುನ್ನಾದಿನವಾದ ಬುಧವಾರ ಸಮೀಪದ ಹನುಮಂತನಗರದ ಶ್ರೀಆತ್ಮಲಿಂಗೇಶ್ವರ ಕ್ಷೇತ್ರದ ಶಾಂತಿಧಾಮದಲ್ಲಿರುವ ಪಿಂಯ ಮುತ್ತಜ್ಜಿ, ಕಾವೇರಿ ಹೋರಾಟಗಾರ ದಿ.ಜಿ.ಮಾದೇಗೌಡ ಅವರ ಸಮಾಧಿಗೆ ಪುಷ್ಪನಮನ ಸಲ್ಲಿಸಿದರು.

ನಂತರ ಅಂಬಿ ಅವರ ಹುಟ್ಟೂರು ದೊಡ್ಡರಸಿನಕೆರೆಯಲ್ಲಿ ದಿ.ಅಂಬರೀಶ್ ಅವರ ಸಮಾಧಿ ಬಳಿ ತೆರಳಿ ಅಲ್ಲಿಯೂ ಕೂಡ ಪುಷ್ಪ ನಮನ ಸಲ್ಲಿಸಿದರು.

ನಂತರ ಮಂಡ್ಯ ಲೋಕಸಭಾ ಕ್ಷೇತ್ರದ ಬಿಜೆಪಿ ಜೆಡಿಎಸ್ ಮೈತ್ರಿ ಅಭ್ಯರ್ಥಿ ಹೆಚ್.ಡಿ. ಕುಮಾರಸ್ವಾಮಿ ಅವರು ಮಾತನಾಡಿ, ಮಂಡ್ಯ ಜಿಲ್ಲೆ ನನ್ನ ಕರ್ಮಭೂಮಿಯಾಗಿದೆ. ನಾನು ಹೊರಗಿನವನಲ್ಲ, ಮಂಡ್ಯ ಜಿಲ್ಲೆಯ ಮಗನಿದ್ದಂತೆ. ಎಂದೂ ನಿಮ್ಮ ಸೇವೆಗೆ ಸದಾ ಬದ್ಧನಾಗಿರುತ್ತೇನೆಂದು ಭರವಸೆ ನೀಡಿದರು.

ಈಗಾಗಲೇ ನನ್ನ ಮೇಲೆ ಬಹಳಷ್ಟು ಆರೋಪಗಳನ್ನು ಹೊರಿಸಲಾಗಿದೆ. ಚನ್ನಪಟ್ಟಣ, ರಾಮನಗರ ಎಷ್ಟು ಮುಖ್ಯವೋ ಮಂಡ್ಯ ಜಿಲ್ಲೆ ಕೂಡ ಅಷ್ಟೇ ಮುಖ್ಯ ಹಾಗಾಗಿ ನಾನು ಮುಖ್ಯಮಂತ್ರಿಯಾಗಿದ್ದ ಸಂದರ್ಭ 3 ಸಾವಿರ ಕೋಟಿಗೂ ಹೆಚ್ಚು ಅನುದಾನ ನೀಡಿದ್ದೆ ಎಂದು ಹೇಳಿದರು.

ಜಿಲ್ಲೆಯ ಯಶಸ್ವಿ ಜನಾಯಕರಾಗಿ ಜನಮಾನಸಲ್ಲಿ ಉಳಿದಿರುವ ದಿ.ಕೆ.ವಿ.ಶಂಕರೇಗೌಡರು, ಜಿ.ಮಾದೇಗೌಡರು, ಹೆಚ್.ಕೆ.ವೀರಣ್ಣ ಗೌಡರು, ಅಂಬರೀಶ್, ಅಕ್ಕಿಯಾರಾಗಿದ್ದ ಎಸ್.ಡಿ.ಜಯರಾಮು, ಕೆ.ಎಸ್.ಪುಟ್ಟಣ್ಣಯ್ಯ ಇವರುಗಳ ಆದರ್ಶವನ್ನು ನಾವೆಂದೂ ಮರೆಯುವುದಿಲ್ಲ. ಅವರು ನಿಮ್ಮ ಮೇಲೆ ಇಟ್ಟಿದ್ದ ಪ್ರೀತಿಯನ್ನು ನಾನು ಮುಂದುವರೆಸಿಕೊಂಡು ಹೋಗಲು ಇಚ್ಚಿಸಿದ್ದೇನೆ. ಹಾಗಾಗಿ ಈ ನಿಮ್ಮ ಮನೆಮಗನನ್ನು ಎಂದಿಗೂ ಕೈಬಿಡಬೇಡಿ ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಮಾಜಿ ಸಚಿವ ಡಿ.ಸಿ. ತಮ್ಮಣ್ಣ, ಬಿಜೆಪಿ ಮುಖಂಡ ಎಸ್.ಪಿ.ಸ್ವಾಮಿ, ರಾಜ್ಯ ಪ್ರಧಾನ ಕಾರ್ಯದರ್ಶಿ ಕೆಸ್ತೂರು ಬಿಳಿಯಪ್ಪ, ಸ್ವಾಮಿಗೌಡ, ತಾಲ್ಲೂಕು ಘಟಕದ ಅಧ್ಯಕ್ಷ ಚಿಕ್ಕತಿಮ್ಮೇಗೌಡ, ಅಣ್ಣೂರು ಸವಿನ್, ಗುರುದೇವರಹಳ್ಳಿ ಅರವಿಂದ್, ಡಿಸಿಸಿ ಬ್ಯಾಂಕ್ ಮಾಜಿ ನಿರ್ದೇಶಕ ಹೊನ್ನೇಗೌಡ, ಬಿಜೆಪಿ ಮುಖಂಡರಾದ ಮಳವಳ್ಳಿ ಅಶೋಕ್ ಕುಮಾರ್, ಇಂದ್ರೇಶ್ ಸೇರಿದಂತೆ ಹಲವರಿದ್ದರು.

ಎಚ್.ಡಿ.ಕುಮಾರಸ್ವಾಮಿರಿಗೆ ಹೆಚ್ಚಿನ ಮತಗಳ ಅಂತರದಿಂದ ಗೆಲ್ಲಿಸಲು ಅನ್ನದಾನಿ ಮನವಿ

■ ಕಾಯಕಯೋಗಿ ಸುದ್ದಿ

ಮಂಡ್ಯ : ಬಹು ವರ್ಷಗಳಿಂದಲೂ ಸಮಸ್ಯೆಯಾಗಿಯೇ ಉಳಿದಿರುವ ಕಾವೇರಿ ನೀರಿನ ಹಂಚಿಕೆಯನ್ನು ಪರಿಹರಿಸಲು ಎಚ್.ಡಿ.ಕುಮಾರಸ್ವಾಮಿ ಅವರು ಕೇಂದ್ರದಲ್ಲಿ ಮಂತ್ರಿಯಾಗಲೇಬೇಕು. ಅದಕ್ಕಾಗಿ ದಲಿತರು ಹೆಚ್.ಡಿ.ಕುಮಾರಸ್ವಾಮಿ ಅವರಿಗೆ ಮತ ನೀಡುವ ಮೂಲಕ ಬಹುಮತಗಳ ಅಂತರದಿಂದ ಗೆಲ್ಲಿಸಬೇಕೆಂದು ಮಾಜಿ ಶಾಸಕ ಕೆ.ಅನ್ನದಾನಿ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷದ ನಾಯಕರು ದಲಿತರನ್ನು ಮತ ಬ್ಯಾಂಕಾಗಿ ಇಟ್ಟುಕೊಂಡಿದ್ದಾರೆಯೇ ಹೊರತು, ಇದುವರೆಗೂ ನ್ಯಾಯ ದೊರಕಿಸಿಕೊಟ್ಟಿಲ್ಲ. ಡಾ.ಬಿ.ಆರ್.ಅಂಬೇಡ್ಕರ್ ಅವರು ರಚಿಸಿದ ಸಂವಿಧಾನವನ್ನು ಸುಮಾರು 60 ವರ್ಷ ದೇಶವನ್ನಾಳಿದ ಕಾಂಗ್ರೆಸ್ 98 ಬಾರಿ ಸಂವಿಧಾನವನ್ನು ತಿದ್ದುಪಡಿ ಮಾಡಿದೆ ಎಂದರು.

ನಾಳೆ ನಾಮಪತ್ರ ಸಲ್ಲಿಕೆ

ಮಂಡ್ಯ ಲೋಕಸಭಾ ಕ್ಷೇತ್ರದ ಜಾ.ದಳ–ಬಿಜೆಪಿ ಮೈತ್ರಿ ಅಭ್ಯರ್ಥಿಯಾಗಿ ಎಚ್.ಡಿ.ಕುಮಾರಸ್ವಾಮಿ ಅವರು ಮಾ.4ರಂದು ಗುರುವಾರ ಬೆಳಿಗ್ಗೆ 10.30 ಗಂಟೆಗೆ ನಾಮಪತ್ರ ಸಲ್ಲಿಸುತ್ತಿದ್ದು, ಪ.ಜಾತಿ, ಪಂಗಡದ ಎಲ್ಲರೂ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಬೆಂಬಲ ನೀಡುವಂತೆ ಕೋರಿದರು.

ಗೋಷ್ಠಿಯಲ್ಲಿ ಜಿಲ್ಲಾ ಜಾ.ದಳ ಪ.ಜಾತಿ ವರ್ಗದ ಅಧ್ಯಕ್ಷ ಸಾತನೂರು ಜಯರಾಮು, ಬಿಜೆಪಿ ಪ.ಜಾತಿ ವರ್ಗದ ಅಧ್ಯಕ್ಷ ನಿತ್ಯಾನಂದ, ಮುಖಂಡರಾದ ವೈರಮುಡಿ, ಪಾಪಯ್ಯ, ನರಸಿಂಹಯ್ಯ, ಬೊಮ್ಮರಾಜು, ಕಾಂತರಾಜು, ಭದ್ರಾಚಲಮೂರ್ತಿ, ಶಂಕರ್ ಇದ್ದರು.

E-mail:kayakayoginews@gmail.com

ಎಸ್ಟೇಟ್‌ನಲ್ಲಿ ಹೆಬ್ಬಾವು ಪತ್ತೆ



■ ಕಾಯಕಯೋಗಿ ಸುದ್ದಿ

ಹಲಗೂರು: ಸಮೀಪದ ಮುತ್ತತ್ತಿ ರಸ್ತೆಯಲ್ಲಿ ಸಿಗುವ ಕರಲಕಟ್ಟೆ ಗ್ರಾಮದ ಬಳಿ ಇರುವ ಗೀತಾ ಲೋಕೇಶ್ ರವರ ಎಸ್ಟೇಟ್ ನಲ್ಲಿ ಆರು ಅಡಿ ಹೆಬ್ಬಾವು ಪತ್ತೆ.

ಬುಧವಾರ ಬೆಳಿಗ್ಗೆ ತೋಟವನ್ನು ನೋಡಿಕೊಳ್ಳುತ್ತಿರುವ ಬಸವರಾಜು ಎಂಬುವರಿಗೆ ಕಾಣಿಸಿಕೊಂಡಿದ್ದು ತಕ್ಷಣ ಅರಣ್ಯ ಇಲಾಖೆಯವರಿಗೆ ಹಾಗೂ ಹಾವು ಸಂರಕ್ಷಣೆ ಮಾಡುವ ಜಗದೀಶ್ ಎಂಬುವರಿಗೆ ಮಾಹಿತಿ ನೀಡಿದ ತಕ್ಷಣ ಸ್ಥಳಕ್ಕೆ ಬಂದ ಸಿಬ್ಬಂದಿ ಹಾಗೂ ಜಗದೀಶ್ ಹೆಬ್ಬಾವನ್ನು ಹಿಡಿದು ಮುತ್ತತ್ತಿ ಕಾವೇರಿ ನದಿಯ ದಡದಲ್ಲಿ ಬಿಡಲಾಗಿದೆ.

ಇದೇ ಎಸ್ಟೇಟಿಗೆ ಕಳೆದ ಮೂರು ತಿಂಗಳ ಹಿಂದೆ ಹೆಬ್ಬಾವು ಒಂದು ಕಾಣಿಸಿಕೊಂಡಿದ್ದು ಅದನ್ನು ಸಹ ಹಿಡಿದು ಅರಣ್ಯ ಪ್ರದೇಶಕ್ಕೆ ಬಿಡಲಾಗಿತ್ತು ಇದೆ ಎರಡನೇ ಬಾರಿ ನಮ್ಮ ಸ್ಥಳಕ್ಕೆ ಬಂದಿರುವುದು ಎಂದು ಕಲಕಟ್ಟೆ ಗ್ರಾಮದ ವಾಸಿ ತಿಮ್ಮೇಗೌಡ ತಿಳಿಸಿದರು.ಹಲಗೂರಿನಲ್ಲಿ ಹಾವು ಸಂರಕ್ಷಣಾ ಉರಗ ಪ್ರೇಮಿ ಜಗದೀಶ್ ಮಾತನಾಡಿ ಬೇಸಿಗೆ ಕಾಲ ಇರುವುದರಿಂದ ಹಾವುಗಳು ನೀರಿನ ಸೆಳವನ್ನು ಹುಡುಕಿಕೊಂಡು ಬರುತ್ತವೆ ಆದುದರಿಂದ ಅವುಗಳನ್ನು ಕಂಡ ತಕ್ಷಣ ನಮಗೆ ಮಾಹಿತಿ ನೀಡಿದರೆ ನಾವು ಅದನ್ನು ರಕ್ಷಿಸಿ ಕಾಡಿಗೆ ಬಿಡುತ್ತೇವೆ ಹಾವುಗಳನ್ನು ಸಾಯಿಸಲು ಹೋಗಬೇಡಿ ಎಂದು ಮನವಿ ಮಾಡಿದರು. ಈ ಸಂದರ್ಭದಲ್ಲಿ ಅರಣ್ಯ ಇಲಾಖೆಯ ಸಿದ್ದರಾಮ ಪೂಜಾರಿ . ತ್ರೇಯಂಸ, ಶಿವಣ್ಣ ಮತ್ತು ಇತರರು ಇದ್ದರು

5 ನಾಮಪತ್ರ ಸಲ್ಲಿಕೆ

ಮಂಡ್ಯ : ಮಂಡ್ಯ ಲೋಕಸಭಾ ಸಾರ್ವತ್ರಿಕ ಚುನಾವಣೆ 2024 ಕ್ಕೆ ಸಂಬಂಧಿಸಿದಂತೆ ನಾಮಪತ್ರ ಸಲ್ಲಿಸಲು 5 ನೇ ದಿನವಾದ ಇಂದು (03–04–2024) 7 ಅಭ್ಯರ್ಥಿಗಳಿಂದ ಒಟ್ಟು 9 ನಾಮಪತ್ರ ಸಲ್ಲಿಕೆಯಾಗಿರುತ್ತದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಡಾ. ಕುಮಾರ ಅವರು ತಿಳಿಸಿದ್ದಾರೆ. ಪಕ್ಷೇತರ ಅಭ್ಯರ್ಥಿಯಾಗಿ ಅರುಣ್ ಕುಮಾರ್. ಟಿ.ವಿ – 1 ನಾಮಪತ್ರ ಲೋಕ ಶಕ್ತಿ ಪಕ್ಷದ ಅಭ್ಯರ್ಥಿಯಾಗಿ ಎನ್. ಬಸವರಾಜು – 01 ನಾಮಪತ್ರ ಪಕ್ಷೇತರ ಅಭ್ಯರ್ಥಿಯಾಗಿ ಲೋಲ – 01 ನಾಮಪತ್

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ–3 | 04–04–2024

ಮೈಸೂರು

ಎಲಚಗೆರೆ ಚೆಕ್ ಪೋಸ್ಟ್ ನಲ್ಲಿ ಹೈ ಅಲರ್ಟ್ ಆದ ಅಧಿಕಾರಿಗಳು; 8.50 ಲಕ್ಷ ರೂ. ವಶಕ್ಕೆ

■ ಕಾಯಕಯೋಗಿ ಸುದ್ದಿ

ನಂಜನಗೂಡು: ಚಾಮರಾಜನಗರ ಲೋಕಸಭಾ ಚುನಾವಣೆಯ ಹಿನ್ನೆಲೆ ನಂಜನಗೂಡಿನ ಚೆಕ್ ಪೋಸ್ಟ್ ಗಳಲ್ಲಿ ನಂಜನಗೂಡು ವಿಧಾನಸಭಾ ಕ್ಷೇತ್ರದ ಚುನಾವಣಾ ಅಧಿಕಾರಿ ಜಗನ್ನಾಥ್ ಮೂರ್ತಿ ಮತ್ತು ತಹಶೀಲ್ದಾರ್ ಶಿವಕುಮಾರ್ ಕಾಸ್ನೂರು ನೇತೃತ್ವದಲ್ಲಿ ಚೆಕ್ ಪೋಸ್ಟ್ ಗಳಲ್ಲಿ ಅಧಿಕಾರಿಗಳು ಹೈ ಅಲರ್ಟ್ ಆಗಿದ್ದಾರೆ. ನಂಜನಗೂಡು ತಾಲ್ಲೂಕಿನ ಮೈಸೂರು ಊಟಿ ರಾಷ್ಟ್ರೀಯ ಹೆದ್ದಾರಿಯ ಎಲಚಗೆರೆ ಗ್ರಾಮದ ಚೆಕ್ ಪೋಸ್ಟ್ ನಲ್ಲಿ ವಾಹನಗಳನ್ನು ತಪಾಸಣೆ ಮಾಡಿದಾಗ ಕಾರಿ ನಲ್ಲಿ ಬರೋಬರಿ 8. 50ಲಕ್ಷ ಹಣ ಜಪ್ತಿ ಮಾಡಲಾಗಿದೆ. ತಾಲ್ಲೂಕು ಚುನಾವಣಾ ಅಧಿಕಾರಿ ಜಗನ್ನಾಥ್ ಮೂರ್ತಿ ಹಾಗೂ ನಂಜನಗೂಡಿನ ತಹಶೀಲ್ದಾರ್ ಶಿವಕುಮಾರ್ ಕಾಸ್ನೂರು ನೇತೃತ್ವದಲ್ಲಿ ಪರಿಶೀಲನೆ ಮಾಡಿದಾಗ ಅನುಮತಿ ಮತ್ತು ದಾಖಲಾತಿ ಇಲ್ಲದೆ ಹಾಸಿಗೆ ಕಂಪನಿಯ ಹೆಸರಿನಲ್ಲಿ ಹಣ ರವಾನೆ ಮಾಡಲಾಗುತ್ತಿತ್ತು. ಹಣ ಜಪ್ತಿಯ ವಿಚಾರವನ್ನು ಮುಖ್ಯ



ಚುನಾವಣಾ ಅಧಿಕಾರಿ ಮತ್ತು ಚಾಮರಾಜನಗರ ಜಿಲ್ಲಾಧಿಕಾರಿಗಳಾದ ಶಿಲ್ಪಾ ನಾಗ್ ಅವರ ಗಮನಕ್ಕೆ ತರಲಾಗಿದೆ. ಮೈಸೂರಿನ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಾಯತ್ರಿ ಮತ್ತು ಚುನಾವಣಾ ಸಮತಿಯ ಜವಾಬ್ದಾರಿಗೆ ಜಪ್ತಿಯಾದ ಹಣವನ್ನು ರವಾನೆ ಮಾಡಿ ತನಿಖೆ ಮಾಡಲಾಗುತ್ತಿದೆ. ಸ್ಪಷ್ಟ ಮಾಹಿತಿ ಯನ್ನು ಆಧರಿಸಿ ಪ್ರಕರಣ ದಾಖಲಿಸಲಾಗುವುದು ಎಂದು ಚುನಾವಣಾ ಅಧಿಕಾರಿ ಜಗನ್ನಾಥ್ ಮೂರ್ತಿ ತಿಳಿಸಿದರು.

ವ್ಯಕ್ತಿ ನಾಪತ್ತೆ

ಮೈಸೂರು: ಮೈಸೂರಿನ ಜನತಾ ನಗರದ ವಾಸಿಯಾದ ಲಿಂಗಯ್ಯ ಬಿನ್ ಲೇಟ್ ಮಲ್ಲೇಗೌಡ ಎಂಬುವವರ ಮಗನಾದ ಮಲ್ಲೇಶ ಎಂಬುವವರು ಕುಂಬ್ಳ ಮಠ ಗ್ರಾಮದಲ್ಲಿ ಗ್ಯಾಸ್ ಮತ್ತು ಸೋಲಾರ್ ಫಿಟಿಂಗ್ ಕೆಲಸ ಮಾಡಿಕೊಂಡು ವಾಸವಾಗಿದ್ದು, ಮಾ.10 ರಂದು ಬೆಳಿಗ್ಗೆ 8 ಗಂಟೆಗೆ ಎಂದಿನಂತೆ ಕೆಲಸಕ್ಕೆಂದು ಮನೆಯಿಂದ ಹೋದವನು ಮನೆಗೆ ವಾಪಸ್ ಬಂದಿಲ್ಲದ ಕಾರಣ ವರುಣಾ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಕಾಣೆಯಾಗಿರುವ ವ್ಯಕ್ತಿಯ ಚಹರೆ: ದುಂಡು ಮುಖ, ದೃಢಕಾಯ ಶರೀರ, ಗೋಧಿ ಬಣ್ಣ, 5.5 ಅಡಿ ಎತ್ತರ. ಬಲಗೈನಲ್ಲಿ ಲಿಂಗರಾಜು, ಮಾಲಮ್ಮ ಶಿಲ್ಪ ಎಂದು ಹಸಿರು ಹಚ್ಚೆ ಹಾಕಿಸಿಕೊಂಡಿರುತ್ತಾನೆ. ಮನೆಯಿಂದ ಹೋಗುವಾಗ ಕೆಂಪು ಬಣ್ಣದ ಶರ್ಟ್ ಮತ್ತು ಕಪ್ಪು ಬಣ್ಣದ ಪ್ಯಾಂಟ್ ಧರಿಸಿದ್ದು, ವ್ಯಕ್ತಿಯ ದೂ.ಸಂ:9663526639 ಆಗಿದೆ.

ಕಾಣೆಯಾದ ವ್ಯಕ್ತಿಯ ಬಗ್ಗೆ ಮಾಹಿತಿ ತಿಳಿದು ಬಂದಲ್ಲಿ ಮೈಸೂರು ಜಿಲ್ಲೆಯ ಪೊಲೀಸ್ ಅಧೀಕ್ಷಕರ ದೂ. ಸಂ: 0821–2520040 ಅಥವಾ ಮೈಸೂರು ಜಿಲ್ಲಾ ಕಂಟ್ರೋಲ್ ರೂಂ.ನ ದೂ.ಸಂ: 0821–2594411, 9480805052 ಅಥವಾ ವರುಣಾ ಪೊಲೀಸ್ ಠಾಣಾ ಪಿ.ಎಸ್.ಐ ದೂ.ಸಂ: 0821–2444800 ಸಂಪರ್ಕಿಸಬಹುದು ಎಂದು ವರುಣಾ ಪೊಲೀಸ್ ಠಾಣೆಯ ಸ್ಟೇಷನ್ ಹೌಸ್ ಆಫಿಸರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿದ್ಯುತ್ ವ್ಯತ್ಯಯ

ಮೈಸೂರು: ಹೂಟಗಳ್ಳಿ ಉಪವಿಭಾಗ ವ್ಯಾಪಿಯ ಬೋಗಾದಿ ವಿದ್ಯುತ್ ವಿತರಣಾ ಕೇಂದ್ರದಿಂದ ಹೊರ ಹೊಮ್ಮುವ ಬಾಪೂಜಿ ವಿದ್ಯುತ್ ಮಾರ್ಗದಲ್ಲಿ ತುರ್ತು ನಿರ್ವಹಣಾ ಕೆಲಸದ ನಿಮಿತ್ತ ಏ.04 ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 5 ಗಂಟೆಯ ವರೆಗೆ ಜ್ಞಾನಗಂಗಾ ಲೇಔಟ್, ಬಾಪೂಜಿ ಲೇಔಟ್, ಬ್ಯಾಂಕ್ ಕಾಲೋನಿ, ರೈಲ್ವೆ ಲೇಔಟ್, ಎಂ.ಎಂಜಿ ಗ್ರೀನ್ ಸಿಟಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ. ಹಾಗಾಗಿ ಸಾರ್ವಜನಿಕರು ಸಹಕರಿಸಬೇಕೆಂದು ಪಿ.ಏ ಮೊಹಲ್ಲಾ ವಿಭಾಗದ, ಕಾರ್ಯನಿರ್ವಾಹಕ ಇಂಜಿನಿಯರ್(ಏ), ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

450 ಸ್ಥಾನ ಖಚಿತ: ಬಿ.ವೈ.ವಿಜಯೇಂದ್ರ

■ ಕಾಯಕಯೋಗಿ ಸುದ್ದಿ

ಮೈಸೂರು: ದೇಶದ ಎಲ್ಲೆಡೆ ಮೈತ್ರಿ ಪರ ಅಲೆ ಇದೆ. 28 ಕ್ಷೇತ್ರದಲ್ಲೂ ಗೆಲ್ಲುತ್ತೇವೆ. ದೇಶದಲ್ಲಿ ಬಿಜೆಪಿಗೆ 450 ಸ್ಥಾನ ದೊರೆಯಲಿದ್ದು ಪ್ರಧಾನಿ ನರೇಂದ್ರ ಮೋದಿ ಅವರು ಮತ್ತೊಮ್ಮೆ ಅಧಿಕಾರ ಹಿಡಿಯುವುದನ್ನು ಯಾರಿಂದಲೂ ತಪ್ಪಿಸಲು ಸಾಧ್ಯವಿಲ್ಲ ಎಂದು ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದರು.

ಮೈಸೂರು ರಾಜವಂಶಸ್ಥರು ಈ ಭಾಗದ ಎಲ್ಲ ಸಮುದಾಯಗಳಿಗೆ ಅಪಾರ ಕೊಡುಗೆ ನೀಡಿದ್ದಾರೆ.

ಸಮಾಜಕ್ಕೆ ಅವರು ನೀಡಿದ ಕೊಡುಗೆಯನ್ನು ಪರಿಗಣಿಸಿ ಈ ಬಾರಿ ಚುನಾವಣೆಯಲ್ಲಿ ಯದುವೀರ ಅವರನ್ನು ಗೆಲ್ಲಿಸಬೇಕು ಎಂದು ಮನವಿ ಮಾಡಿದರು.

ಜೆಡಿಎಸ್ ಕೋರ್ ಕಮಿಟಿ ಅಧ್ಯಕ್ಷ ಜಿ.ಟಿ. ದೇವೇಗೌಡ ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಜೆಡಿಎಸ್, ಬಿಜೆಪಿ ಎಲ್ಲಿದೆ ಎನ್ನುತ್ತಿದ್ದರು. ಹೆಚ್ಚಿನ ಸಂಖ್ಯೆಯಲ್ಲಿ ಮೆರವಣಿಗೆಯಲ್ಲಿ



ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದಿಂದ ಸ್ಪರ್ಧಿಸಲು ಬಿಜೆಪಿ ನನಗೆ ಈ ಬಾರಿ ಅವಕಾಶ ನೀಡಿದೆ. ಕಳೆದ ಹತ್ತು ವರ್ಷಗಳಿಂದ ಪ್ರಧಾನಿ ನರೇಂದ್ರ ಮೋದಿ ಅವರು ದೇಶದ ಅಭಿವೃದ್ಧಿಗೆ ನೆರವಾಗಿದ್ದಾರೆ. ಜನರು ನನಗೂ ಒಂದು ಅವಕಾಶ ನೀಡಿದರೆ ಕೇಂದ್ರ ಮತ್ತು ರಾಜ್ಯ ಸರ್ಕಾರದ ಕೊಡಿಯಾಗಿ ಕೆಲಸ ಮಾಡುತ್ತೇನೆ. ಕ್ಷೇತ್ರದ ಅಭಿವೃದ್ಧಿಗೆ ದುಡಿಯುತ್ತೇನೆ. ಮುಖ್ಯವಾಗಿ ಕೃಷಿ, ಪ್ರವಾಸೋದ್ಯ ಹಾಗೂ ಮೈಸೂರು ಮತ್ತು ಕೊಡಗಿನ ಪರಂಪರೆ ಉಳಿಸಲು ಪ್ರಯತ್ನಿಸುತ್ತೇನೆ.

–ಯದುವೀರ್, ಬಿಜೆಪಿ ಅಭ್ಯರ್ಥಿ.

ಸೇರಿರುವ ಜನರೇ ಅದಕ್ಕೆ ಪ್ರತ್ಯುತ್ತರವಾಗಿದೆ. ಯದುವೀರ ಐದು ಲಕ್ಷಕ್ಕೂ ಹೆಚ್ಚು ಮತಗಳಿಂದ ಗೆಲ್ಲುತ್ತಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಎಚ್‌ಡಿಡಿಗೆ ಬೆಳೆಸೋದು ಗೊತ್ತು, ತುಳಿವ ಅಭ್ಯಾಸವಿಲ್ಲ: ಪ್ರತಾಪಸಿಂಹ

ಮೈಸೂರು: ಹೆಚ್.ಡಿ ದೇವೇಗೌಡರು ಪ್ರತಾಪ್ ಸಿಂಹಗೆ ಟಿಕೆಟ್ ಕೈತಪ್ಪಿಸಿದರು ಎಂದು ಹೇಳಿಕೆ ನೀಡಿದ್ದ ಸಚಿವ ಕೆ.ವೆಂಕಟೇಶ್‌ಗೆ ಸ್ವತಃ ಸಂಸದ ಪ್ರತಾಪ್ ಸಿಂಹ ಟಾಂಗ್ ಕೊಟ್ಟಿದ್ದಾರೆ.

ಈ ಕುರಿತು ಮಾತನಾಡಿದ ಸಂಸದ ಪ್ರತಾಪ್ ಸಿಂಹ, ನನಗೆ ಟಿಕೆಟ್ ಕೊಡಿಸಲು ಹೆಚ್.ಡಿ ದೇವೇಗೌಡರು ಪ್ರಯತ್ನಿಸಿದರು. ದೇವೇಗೌಡರಿಗೆ ನಾಯಕರನ್ನ ಬೆಳೆಸಿ ಗೊತ್ತು. ದೇವೇಗೌಡರಿಗೆ ಯಾರನ್ನೂ ತುಳಿದು ಅಭ್ಯಾಸವಿಲ್ಲ. ಅನ್ನ ತಿನ್ನುವ ಬಾಯಲ್ಲಿ ಏನೇನೋ ಮಾತನಾಡಬೇಡಿ ಎಂದು ಕಿಡಿಕಾರಿದರು. ನಿಮ್ಮನ್ನು ರಾಜಕೀಯವಾಗಿ ಬೆಳೆಸಿದ್ದು ದೇವೇಗೌಡರು. ದೇವೇಗೌಡರ ವಿರುದ್ಧ ಇಲ್ಲಸಲ್ಲದ ಆರೋಪ ಮಾಡಬೇಡಿ ಎಂದು ಸಂಸದ ಪ್ರತಾಪ್ ಸಿಂಹ ತಿರುಗೇಟು ನೀಡಿದರು. ಕಾಂಗ್ರೆಸ್ ನವರು ಮೊದಲು ಒಳ್ಳೆಯ ಒಕ್ಕಲಿಗರಿಗೆ ಟಿಕೆಟ್ ಕೊಡಲಿ. ನಾಳೆ ಇನ್ನು ಒಂದು ದಿನ ಅವಕಾಶ ಇದೆ. ಈಗಲಾದ್ರು ನಿಮಗೆ ಅಭ್ಯರ್ಥಿ ಬದಲಾಯಿಸಲು ಅವಕಾಶ ಇದೆ. ಅದನ್ನು ಬೇಕಾದ್ರೆ ಬಳಸಿಕೊಳ್ಳಿ. ಒಕ್ಕಲಿಗರನ್ನೆಲ್ಲ ಇಷ್ಟು ದಿನ ತುಚ್ಛವಾಗಿ ಬೈಯ್ದು ಹೊಲಸು ಬಾಯಿಯ ಪಟ್ಟಿ ನಿಮ್ಮ ಅಭ್ಯರ್ಥಿ. ಒಕ್ಕಲಿಗರು ಎಂದರೆ ಅವರಿಗೆ ನೇರವಂತಿಕೆ. ಗಡಸು ಸ್ವಭಾವ ಇರುತ್ತೆ ನಿಮ್ಮ ಅಭ್ಯರ್ಥಿಗೆ ಈ ಯಾವುದಾದರು ಒಂದು ಲಕ್ಷಣ ಇದೆಯಾ.? ಮೊದಲು ಅಭ್ಯರ್ಥಿ ಬದಲಾಯಿಸಿ ಆಮೇಲೆ ಗೆಲ್ಲುವುದಕ್ಕೆ ಒಕ್ಕಲಿಗರ ಕಾರ್ಡ್ ಪ್ಲೇ ಮಾಡುವಿರಂತೆ ಎಂದು ಕಿಡಿಕಾರಿದರು. ಚುನಾವಣೆ ಗೆಲ್ಲಲು ಮೊದಲು ಒಳ್ಳೆಯ ಅಭ್ಯರ್ಥಿ ಇರಬೇಕು. ನಿಮ್ಮ ಅಭ್ಯರ್ಥಿ ಈಗ ನಾನು ಒಕ್ಕಲಿಗ ಅಂತ ಪ್ರಮಾಣ ಪತ್ರ ಹಿಡಿದುಕೊಂಡು ಬಂದಿದ್ದಾನೆ. ಆ ಪ್ರಮಾಣ ಪತ್ರ ಯಾವುದು. ಯಾವುದೋ ಕೆ.ಎಸ್.ಪಿ.ಯು ಅಲ್ಲಿ ಇಲ್ಲಿ ಸಿಗುತ್ತಿತ್ತಲ್ಲ ಆ ಪ್ರಮಾಣ ಪತ್ರನಾ..? ಎಂದು ವ್ಯಂಗ್ಯವಾಡಿದ್ದಾರೆ.

ನನ್ನ ಕುಟುಂಬದ ಮೇಲೆ ಸಾಮಾಜಿಕ ಜಾಲತಾಣಗಳಲ್ಲಿ ಇಲ್ಲಸಲ್ಲದ ಆರೋಪ: ಚೌತಿ ಮಲ್ಲಣ್ಣ ಖಂಡನೆ

■ ಕಾಯಕಯೋಗಿ ಸುದ್ದಿ

ಪಿರಿಯಾಪಟ್ಟಣ: ತಾಲ್ಲೂಕಿನ ನೇರಳಕುಪ್ಪೆ ಗ್ರಾಮದ ನಿವಾಸಿಯಾದ ನವೀನ್ ರವರು ಹಲವು ವೇದಿಕೆಗಳಲ್ಲಿ ಸಾಮಾಜಿಕ ಮಾಧ್ಯಮಗಳ ಮುಖಾಂತರ ನನ್ನ ಬಗ್ಗೆ ಹಾಗೂ ನನ್ನ ಕುಟುಂಬದ ಬಗ್ಗೆ ಯಾವುದೇ ಆಧಾರ ಇಲ್ಲದೆ ವೈಯಕ್ತಿಕವಾಗಿ ನಿಂದನೆಯ ಮಾತನ್ನಾಡಿರುವದನ್ನು ನಾನು ಖಂಡಿಸುತ್ತೇನೆ ಎಂದು ಚೌತಿ ಗ್ರಾಮದ ದಲಿತ ಮುಖಂಡ ಚೌತಿ ಮಲ್ಲಣ್ಣ ತಿಳಿಸಿದ್ದಾರೆ. ಪಟ್ಟಣದ ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ್ದು, ನಾನು ದಲಿತ ಸಮಾಜಕ್ಕೆ ಸೇರಿದ ನನ್ನ ಹಾಗೂ ನನ್ನ ಕುಟುಂಬದ ಬಗ್ಗೆ ಸಾರ್ವಜನಿಕವಾಗಿ ಅವಮಾನಕರ ರೀತಿಯಲ್ಲಿ ಮಾತನಾಡಿ ತೋಜೋವಧೆ ಮಾಡಲು ಯತ್ನಿಸಿದ್ದಾನೆ.

ದಿನಾಂಕ 3/ 03.2024 ಭಾನುವಾರದಂದು ವೈಯಕ್ತಿಕ ಕಾರ್ಯ ನಿಮಿತ್ತ ತಾಲ್ಲೂಕು ಕಛೇರಿ ಬಳಿ ತರಳಿದ ಸಂದರ್ಭದಲ್ಲಿ ನೇರಳೇಕುಪ್ಪೆ ನವೀನ್ ಕಾಣಿಸಲಾಗಿ ನನ್ನ ಬಗ್ಗೆ ಸುಳ್ಳು ಆರೋಪ ಮಾಡಿರುವುದನ್ನು ಪ್ರಶ್ನಿಸಿದ ಸಂದರ್ಭದಲ್ಲಿಯೂ ನನ್ನನ್ನು ಅವಾಚ್ಯ ಶಬ್ದಗಳಿಂದ ನಿಂದಿಸಿ ನನ್ನ ಮೇಲೆ ಹಲ್ಲೆ ಮಾಡಲು ಸಹ ಯತ್ನಿಸಿರುತ್ತಾನೆ.

ಮುಂದುವರೆದು ಈತನ ಎಲ್ಲಾ ಸಂದರ್ಭದಲ್ಲಿಯೂ ಮಾನ್ಯ ಸಚಿವರಾದ ಶ್ರೀ ಕೆ. ವೆಂಕಟೇಶ್ ಹಾಗೂ ಅವರ ಪುತ್ರ ಶ್ರೀ ನತಿನ್ ವೆಂಕಟೇಶ್ ರವರ ಕುಮ್ಮಕ್ಕಿನಿಂದ ಇವನ ಮೇಲೆ ದ್ವೇಷ ಸಾಧಿಸುತ್ತಿದ್ದಾರೆಂದು ಆರೋಪಿಸಿಕೊಂಡು ಬರುತ್ತಿದ್ದಾನೆ. ಆದರೆ ಈ ಮೂಲಕ ನಾನು ಸ್ಪಷ್ಟವಾಗಿ ಹೇಳುವುದೇನೆಂದರೇ ಈ ಘಟನೆಗಳಿಗೂ ಮಾನ್ಯ ಸಚಿವ ಹಾಗೂ ಅವರ ಮಗನಿಗೂ ಯಾವುದೇ ಸಂಬಂಧವಿರುವಿಲ್ಲ ನನ್ನ ಮೇಲೆ ಮಾಡಲಾದ ಕುಟುಂಬ ನಿಂದನೆ, ಜಾತಿ ನಿಂದನೆ ಹಾಗೂ ಹಲ್ಲೆಯ ವಿರುದ್ಧ ನಾನು



ನೇರಳೆಕುಪ್ಪೆ ನವೀನ್ ವಿರುದ್ಧ ಹೋರಾಟ ಮಾಡುತ್ತಿದ್ದೇನೆ. ತಾಲ್ಲೂಕಿನಲ್ಲಿ ಪ್ರತಿ ದಿನ ಒಂದಲ್ಲಾ ಒಂದು ರೀತಿಯಲ್ಲಿ ಅಶಾಂತಿಯನ್ನು ಉಂಟುಮಾಡು ತ್ತಿರುವ ಜನಗಳ ಮಧ್ಯೆ ಗಲಭೆಗೆ ಕಾರಣವಾಗುತ್ತಿರುವ, ದಲಿತ ಸಮುದಾಯದ ವಿರುದ್ಧ ಕೇಳು ಮಟ್ಟದಲ್ಲಿ ವಾಚಾತನಾಡುತ್ತಿರುವ ರೌಡಿ ಶೀಟರ್ ನೇರಳೆಕುಪ್ಪೆ ನವೀನ್ ವಿರುದ್ಧ ನಾನು ಈಗಾಗಲೇ ಪಿರಿಯಾಪಟ್ಟಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದು ಈತನಿಗೆ ಕಾನೂನು ರೀತಿಯಲ್ಲಿ ಕಠಿಣ ಶಿಕ್ಷೆಗೆ ಒಳಪಡಿಸಿ ನಮ್ಮ ಕುಟುಂಬಕ್ಕೆ ನ್ಯಾಯ ಒದಗಿಸಬೇಕೆಂದು ತಿಮ್ಮಗಳ ಮೂಲಕ ಮನವಿ ಮಾಡುತ್ತಿದ್ದೇನೆ ಎಂದರು. ಗೋಷ್ಠಿಯಲ್ಲಿ ವಾಚಾತನಾಡುತ್ತಿರುವ ರೌಡಿ ಶೀಟರ್ ನೇರಳೆಕುಪ್ಪೆ ನವೀನ್ ವಿರುದ್ಧ ನಾನು ಚಿನ್ನಬಸವ, ಗೋವಿಂದ ಟಿಡಿ, ಶೆಲ್‌ರ್ ಟಿ ಎ, ಗೋವಿಂದರಾಜು, ಅಹಾಜರಿದ್ದರು.

ಖೇಲೋ ಇಂಡಿಯಾ: ಏ15–16ರಂದು ಕ್ರೀಡಾ ಪಟುಗಳ ಆಯ್ಕೆ

■ ಕಾಯಕಯೋಗಿ ಸುದ್ದಿ

ಮೈಸೂರು: ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಬೆಂಗಳೂರಿನ ವಿದ್ಯಾನಗರದ ಖೇಲೋ ಇಂಡಿಯಾ ರಾಜ್ಯ ಉತ್ಕೃಷ್ಟತಾ ಕೇಂದ್ರಕ್ಕೆ ಅಥ್ಲೆಟಿಕ್ಸ್, ಶೂಟಿಂಗ್, ಈಜು ಕ್ರೀಡೆಗಳಲ್ಲಿ ಪ್ರತಿಭಾನ್ವಿತರಾಗಿರುವ ಕ್ರೀಡಾ ಪಟುಗಳನ್ನು ಆಯ್ಕೆ ಮಾಡುವ ಸಲುವಾಗಿ ಏಪ್ರಿಲ್ 15 ಹಾಗೂ ಏಪ್ರಿಲ್ 16 ರಂದು ಬೆಂಗಳೂರಿನ ವಿದ್ಯಾನಗರದಲ್ಲಿರುವ ಶ್ರೀ ಜಯಪ್ರಕಾಶ್ ನಾರಾಯಣ ರಾಷ್ಟ್ರೀಯ ಯುವ ತರಬೇತಿ ಕೇಂದ್ರ ಕ್ರೀಡಾ ಶಾಲೆಯಲ್ಲಿ ಆಯ್ಕೆ ಪ್ರಕ್ರಿಯೆ ನಡೆಯಲಿದೆ. ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸಲು ಆಸಕ್ತಿಯುಳ್ಳವರು ಪ್ರಸಕ್ತ 2023–24ನೇ ಸಾಲಿನಲ್ಲಿ 10ನೇ ತರಗತಿಯನ್ನು ಅಭ್ಯಸಿಸುತ್ತಿದ್ದು, 2024–25ನೇ ಸಾಲಿಗೆ ಪ್ರಥಮ ಪದವಿ ಪೂರ್ವ ಕೋರ್ಸ್ (ಪ್ರಥಮ ಪಿಯುಸಿ) ಗೆ ಪ್ರವೇಶ ಪಡೆಯುವ ಅರ್ಹತೆಯುಳ್ಳವರಾಗಿರಬೇಕು. ಅಂತರಾಷ್ಟ್ರೀಯ ಕ್ರೀಡಾಪಟುಗಳಿಗೆ 2 ವರ್ಷಗಳ ವಯೋಮಿತಿಯನ್ನು ಸಡಿಸಿಗೊಳಿಸಲಾಗು ವುದು. ತಜ್ಞರ ಸಮಿತಿ ಶಿಫಾರಸ್ಸಿನ ಅನ್ವಯ ಗರಿಷ್ಠ ವಯೋಮಿತಿಯನ್ನು ಸಾಮರ್ಥ್ಯದ ಆಧಾರದ ಮೇಲೆ ನಿಗಧಿಪಡಿಸಲಾಗುವುದು. ಪಾಸ್‌ಪೋರ್ಟ್ ಅಳತೆಯ ಇತ್ತೀಚಿನ ಭಾವಚಿತ್ರವೊಂದಿಗೆ ಸ್ವ–ವಿವರದ ಅರ್ಜಿಯನ್ನು ಆಯ್ಕೆ ಸಂದರ್ಭದಲ್ಲಿ ಸಲ್ಲಿಸಬೇಕು. ಕರ್ನಾಟಕದಲ್ಲಿ ಜನಿಸಿದ ಹಾಗೂ ವಾಸಿಸುತ್ತಿರುವವರಿಗೆ ಆದ್ಯತೆ ನೀಡಲಾಗುವುದು. ಆಧಾರದ ಕಾರ್ಡ್ ನಕಲು ಪ್ರತಿ ಹಾಗೂ ಮೂಲ ಪ್ರತಿಯನ್ನು ಕಡ್ಡಾಯವಾಗಿ ಸಲ್ಲಿಸಬೇಕು. ಕನಿಷ್ಠ ಪಕ್ಷ ರಾಜ್ಯಮಟ್ಟದ ಅಧಿಕೃತ ಕ್ರೀಡಾಕೂಟದಲ್ಲಿ (ರಾಜ್ಯ ಅಥ್ಲೆಟಿಕ್ಸ್ ಹಾಗೂ ಈಜು ಸಂಸ್ಥೆ ರಾಜ್ಯ ಶಾಲಾ ಕ್ರೀಡಾಕೂಟ, ವಿಶ್ವವಿದ್ಯಾನಿಲಯ ಸಂಘಟಿಸುವ ಕ್ರೀಡಾಕೂಟ) ಪದಕ ಪಡೆದಿರಬೇಕು. ಕಳೆದ ಹಾಗೂ ಪ್ರಸ್ತುತ ಸಾಲಿನ ಕ್ರೀಡಾಕೂಟದ ಸ್ಪರ್ಧೆಗಳಲ್ಲಿ ಭಾಗವಹಿಸಿರಬೇಕು. ಆಸಕ್ತ ಅರ್ಹ ಕ್ರೀಡಾಪಟುಗಳು ನೇರವಾಗಿ ಆಯ್ಕೆಯಲ್ಲಿ ಭಾಗವಹಿಸಬಹುದಾಗಿರುತ್ತದೆ.

ಜೆಡಿಎಸ್ ವರಿಷ್ಠರ ಎನ್‌ಡಿಎ ಮೈತ್ರಿಕೂಟ ತೀರ್ಮಾನಕ್ಕೆ ಬದ್ಧ: ಮಂಜುನಾಥ್

■ ಕಾಯಕಯೋಗಿ ಸುದ್ದಿ

ಹನೂರು: ಮಾಜಿ ಪ್ರಧಾನ ಮಂತ್ರಿ ದೇವೇಗೌಡರು ಹಾಗೂ ಮಾಜಿ ಮುಖ್ಯಮಂತ್ರಿ ಎಚ್.ಡಿ ಕುಮಾರಸ್ವಾಮಿ ಜೆಡಿಎಸ್ ವರಿಷ್ಠರು ಈಗಾಗಲೇ ಎನ್‌ಡಿಎ ಮೈತ್ರಿಕೂಟ ಬಗ್ಗೆ ತೀರ್ಮಾನ ಮಾಡಲಾಗಿದ್ದು ಇದಕ್ಕೆ ಬದ್ಧನಾಗಿರುತ್ತೇನೆ ಎಂದು ಶಾಸಕರಾದ ಎ.ಆರ್ ಮಂಜುನಾಥ್ ತಿಳಿಸಿದರು.

ಹನೂರು ಪಟ್ಟಣದ ಆರ್.ಎಸ್ ದೊಡ್ಡಿಯ ಗೌರಿಶಂಕರ ಕಲ್ಯಾಣ ಮಂಟಪದಲ್ಲಿ ಏರ್ಪಡಿಸಲಾಗಿದ್ದ ಜೆಡಿಎಸ್ ಮುಖಂಡರು ಹಾಗೂ ಕಾರ್ಯಕರ್ತರ ಸಭೆಯಲ್ಲಿ ಅವರು ಮಾತನಾಡಿದ.

ಈ ಹಿಂದೆ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಮತ್ತು ಜೆಡಿಎಸ್ ಮೈತ್ರಿ ಇತ್ತು ಆದೇ ಪರಿಸ್ಥಿತಿ ಇದೀಗ ನಿರ್ಮಾಣ ವಾಗಿದ್ದು ಸಂದಿಗ್ಧ ಪರಿಸ್ಥಿತಿ ಎದುರಾಗಿದೆ



ರಾಜ್ಯಮಟ್ಟದಲ್ಲಿ ದೊಡ್ಡವರು ಈಗಾಗಲೇ ಮೈತ್ರಿ ಬಗ್ಗೆ ತೀರ್ಮಾನ ಮಾಡಲಾಗಿದೆ ಹೀಗಾಗಿ ಕಾರ್ಯಕರ್ತರ ಅಭಿಪ್ರಾಯ ಸಂಗ್ರಹಿಸಿ ರವಾನಿಸಬೇಕಾಗಿದೆ ಹೀಗಾಗಿ ಜೆಡಿಎಸ್ ಮುಖಂಡರು ಹಾಗೂ ಕಾರ್ಯಕರ್ತರೇ ನಮಗೆ ಶ್ರೀರಕ್ಷೆಯಾಗಿದ್ದು, ನಿಮ್ಮಗಳ ತೀರ್ಮಾನವೇ ನನ್ನ ತೀರ್ಮಾನ ಎಂದರಲ್ಲದೆ ಹೈಕಮಾಂಡ್ ಮೈತ್ರಿ ತೀರ್ಮಾನಕ್ಕೆ ನಾನು ಬದ್ಧನಾಗಿದ್ದೇನೆ ಎಂದು ತಿಳಿಸಿದರು.

ಕಾಂಗ್ರೆಸ್ ಮತ್ತು ಬಿಜೆಪಿ ಎರಡು ಪಕ್ಷಗಳಿಂದ ಜೆಡಿಎಸ್ ಗೆಕೈಜೋಡಿಸಿ ನನ್ನನ್ನು ಶಾಸಕರಾಗಿ ಆಯ್ಕೆ ಮಾಡಿದ್ದೀರಾ ಹೀಗಾಗಿ ನಿಮ್ಮಗಳ ಋಣ ತೀರಿಸಲು ನಾನು ಪ್ರಾಮಾಣಿಕವಾಗಿ ಶ್ರಮಿಸಲಾಗುವುದು ಮುಂಬರುವ ಸ್ಥಳೀಯ ಚುನಾವಣೆ ಬಗ್ಗೆ ಯೋಚಿಸಬೇಕಾಗಿದ್ದು ಗ್ರಾಮ ಪಂಚಾಯಿತಿ ಮಟ್ಟದ ಚುನಾ

website: www.kayakayogi.com
ಕಾಯಕಯೋಗಿ
KAYAKA YOGI - Regional Daily
ಪುಟ–4
04–04–2024
ತುಮಕೂರು–ಚಾಮರಾಜನಗರ

ಚಾಮರಾಜನಗರದಲ್ಲಿ ಸಿಎಂ ಸಿದ್ದರಾಮಯ್ಯ ಭರ್ಜರಿ ರೋಡ್ ಶೋ: ಮೋದಿ, ಶಾ ವಿರುದ್ಧ ವಾಗ್ದಾಳಿ

■ ಕಾಯಕಯೋಗಿ ಸುದ್ದಿ

ಚಾಮರಾಜನಗರ: ಚಾಮರಾಜನಗರ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಸುನೀಲ್ ಬೋಸ್ ನಾಮಪತ್ರ ಸಲ್ಲಿಕೆಗೂ ಮುನ್ನ ಸಿಎಂ ಸಿದ್ದರಾಮಯ್ಯ ನಗರದಲ್ಲಿ ಭರ್ಜರಿ ರೋಡ್ ಶೋ ನಡೆಸಿದರು.

ಚಾಮರಾಜನಗರದ ಭುವನೇಶ್ವರಿ ವೃತ್ತದಿಂದ ಬಿ.ರಾಚಯ್ಯ ಜೋಡಿರಸ್ತೆಯಲ್ಲಿ ರೋಡ್ ಶೋ ನಡೆಸಿದ ಸಿದ್ದರಾಮಯ್ಯ ಕೇಂದ್ರ ಸರ್ಕಾರ ಹಾಗೂ ಪ್ರಧಾನಿ ಮೋದಿ, ಗೃಹ ಸಚಿವ ಅಮಿತ್ ಶಾ ವಿರುದ್ಧ ವಾಗ್ದಾಳಿ ನಡೆಸಿದರು.

ನರೇಂದ್ರ ಮೋದಿ ಕೇವಲ ಸುಳ್ಳುಗಳನ್ನೇ ಹೇಳಲಿದ್ದು ಸಾಧನೆ ಏನು ಮಾಡಿಲ್ಲ. ಗೃಹ ಸಚಿವ ಅಮಿತ್ ಶಾ ಅವರು ಚಿನ್ನಪಟ್ಟಣಕ್ಕೆ ಬಂದು ರಾಜ್ಯದ ಸರ್ಕಾರದ ವಿರುದ್ಧ ಸುಳ್ಳಿನ ಸರಮಾಲೆಯನ್ನೇ ಹೇಳಿದ್ದಾರೆ.

ಬರ ಪರಿಹಾರಕ್ಕಾಗಿ ಆರಂಭದಲ್ಲೇ ಮನವಿ ಸಲ್ಲಿಸಿ 3.5 ತಿಂಗಳದಾದರೂ ಹಣ ಬಿಡುಗಡೆ ಮಾಡದೇ ಈಗ ಮನವಿಯನ್ನೇ ಕೊಟ್ಟಿಲ್ಲ ಎಂದು ಸುಳ್ಳು ಹೇಳ್ತಾರೆ ಎಂದು ಹಿಂದಿಯಲ್ಲೇ ಡೈಲಾಗ್ ಹೊಡೆದು ಕಿಡಿಕಾರಿದರು.

ರಾಜ್ಯ, ದೇಶದ ತುಂಬಾ ಕಾಂಗ್ರೆಸ್ ಅಲೆ ಎದ್ದಿದೆ, ಚಾಮರಾಜನಗರದಲ್ಲಿ ಕಾಂಗ್ರೆಸ್ ಹುರುಪು ನೋಡುತ್ತಿದ್ದರೇ 3 ಲಕ್ಷ ಮತಗಳ ಅಂತರದಲ್ಲಿ ಗೆಲ್ಲುವ ಲಕ್ಷಣ ಇದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ನಾವು ನುಡಿದಂತೆ ನಡೆದ ಸರ್ಕಾರವಾಗಿದ್ದು ಕೊಟ್ಟ ಭರವಸೆ ಈಡೇರಿಸಿದ್ದೇವೆ. ಬಿಜೆಪಿಯವನ್ನು ಸೋಲಿಸಿ ಕಿತ್ತೊಗೆಯಬೇಕು ಎಂದು ಕರೆ ನೀಡಿದರು. ಡಿಸಿಎಂ ಡಿ.ಕೆ.ಶಿವಕುಮಾರ್, ಸಚಿವರಾದ ಮಾಹದೇವಪ್ಪ, ಸತೀಶ್ ಜಾರಕಿಹೊಳಿ, ಪರಮೇಶ್ವರ್, ವೆಂಕಟೇಶ್ ಹಾಗೂ ಅಭ್ಯರ್ಥಿ ಸುನೀಲ್ ಬೋಸ್, ಶಾಸಕರುಗಳಾದ ಎ ಆರ್ ಕೃಷ್ಣಮೂರ್ತಿ, ಪುಟ್ಟರಂಗಶೆಟ್ಟಿ, ಗಣೇಶ್ ಪ್ರಸಾದ್, ದರ್ಶನ್ ಧ್ರುವನಾರಾಯಣ್, ಅನಿಲ್ ಚಿಕ್ಕಮಾದು, ಮಾಜಿ ಶಾಸಕ ಆರ್ ನರೇಂದ್ರ ಇದ್ದರು.

ಸುನೀಲ್ ಬೋಸ್ ನನ್ನ ಮಗನಿದ್ದಂತೆ: ಡಿ.ಕೆ.ಶಿವಕುಮಾರ್

■ ಕಾಯಕಯೋಗಿ ಸುದ್ದಿ



ಚಾಮರಾಜನಗರ: ಸುನೀಲ್ ಬೋಸ್ ಅವರನ್ನು 3 ಲಕ್ಷ ಮತಗಳ ಅಂತರದಿಂದ ಚಾಮರಾಜನಗರದ ಜನತೆ ಗೆಲ್ಲಿಸಬೇಕು. ಸಂಸತ್ತಿಗೆ ಮಹದೇವಪ್ಪ ಅವರನ್ನು ಕಳುಹಿಸಿ ಎರಡನೇ ಅಂಬೇಡ್ಕರರನ್ನಾಗಿ ಮಾಡಬೇಕು ಎನ್ನುವ ಆಸೆ ಇತ್ತು ಆದರೆ ಅವರು ಒಪ್ಪಲಿಲ್ಲ. ಕ್ಷೇತ್ರದ ಮತದಾರರು ಮಲ್ಲಿಕಾರ್ಜುನ ಖರ್ಗೆ ಅವರು ಮತ್ತು ಕಾಂಗ್ರೆಸ್ ಪಕ್ಷವನ್ನು ಬಲಪಡಿಸಬೇಕು ಎಂದು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ತಿಳಿಸಿದರು.

ಚಾಮರಾಜನಗರ ಮೀಸಲು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸುನೀಲ್ ಬೋಸ್ ನಾಮ ಪತ್ರಿಕೆ ಸಲ್ಲಿಕೆಯ ನಂತರ ಮಾತನಾಡಿದ ಅವರು ಸುನೀಲ್ ಬೋಸ್ ನನ್ನ ಮಗನಿದ್ದಂತೆ, ಅವರನ್ನು ಸಂಸತ್ತಿಗೆ ಕಳುಹಿಸಬೇಕು. ಧ್ರುವನಾರಾಯಣ ಅವರ ಕನಸನ್ನು ನನಸು ಮಾಡಲು ನಾವು ಸುನೀಲ್ ಜೊತೆ ನಿಂತಿದ್ದೇವೆ. ಸಿದ್ದರಾಮಯ್ಯ ಅವರು ಚಾಮರಾಜನಗರದ ಮನೆ ಮಗ ಇದ್ದಂತೆ. ಅವರ ಮೇಲೆ ನಂಬಿಕೆ ಇಟ್ಟು ಮತ ನೀಡಬೇಕು. ಅವರ ಬೆಂಬಲಕ್ಕೆ ಮತದಾರರು ನಿಲ್ಲಬೇಕು.

ಕೊರೋನಾ ಸಮಯದಲ್ಲಿ ಆಕ್ಸಿಜನ್ ಇಲ್ಲದೆ ಜನ ಸತ್ತರೂ ರಕ್ಷಣೆಗೆ ಯಾವ ಬಿಜೆಪಿಯವರು ಬರಲಿಲ್ಲ. ಸಹಾಯವನ್ನು ಮಾಡಲಿಲ್ಲ. ನಿಮ್ಮ ಸಹಾಯಕ್ಕೆ ಬಂದ ಕಾಂಗ್ರೆಸ್ ಪಕ್ಷವನ್ನು ಎಂದಿಗೂ ಮರೆಯಬಾರದು.

ಕಮಲ ಕೆರೆಯಲ್ಲಿ ಇದ್ದರೆ ಚೆಂದ, ತೆನೆ ಹೊಲದಲ್ಲಿ ಇದ್ದರೆ ಚೆಂದ, ದಾನ, ಧರ್ಮ ಮಾಡುವ ಕೈ ಅಧಿಕಾರದಲ್ಲಿ ಇದ್ದರೆ ಚೆಂದ. ಕೊಟ್ಟ ಮಾತನ್ನು ನಾವು ಉಳಿಸಿಕೊಂಡು ಐದು ಗ್ಯಾರಂಟಿಗಳನ್ನು ಜಾರಿಗೆ ತಂದಿದ್ದೇವೆ. ಐದು ಬೆರಳು ಸೇರಿ ಕೈ ಗಟ್ಟಿಯಾಯಿತು. ಐದು ಗ್ಯಾರಂಟಿಗಳು ಸೇರಿ ಈ ಕೈ ಗಟ್ಟಿಯಾಯಿತು.

ಉಚಿತ ಅಕ್ಕಿ, ಬಸ್ ಪ್ರಯಾಣ, 2 ಸಾವಿರ ಗೃಹಲಕ್ಷ್ಮಿ ಹಣ ಸೇರಿದಂತೆ ಎಲ್ಲ ಯೋಜನೆಗಳು ಮನೆಗೆ ತಲುಪುತ್ತಿವೆ. ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ಸರ್ಕಾರ ಅಧಿಕಾರಕ್ಕೆ ಬಂದ ಮೊದಲನೇ ದಿನವೇ ಗ್ಯಾರಂಟಿ ಜಾರಿಗೆ ತೀರ್ಮಾನ ಮಾಡಿದೆವು. ಇಂತಹ ನಿರ್ಧಾರವನ್ನು ಮೋದಿಯವರು ಮಾಡಿದ್ದಾರೆಯೇ? 15 ಲಕ್ಷ ಎಲ್ಲಿ, ಚಚ್ಚೀದಿನ್ ಎಲ್ಲಿ. 2 ಕೋಟಿ ಉದ್ಯೋಗ ಎಲ್ಲಿ ಮಾನ್ಯ ಮೋದಿಯವರೇ?. ಅವರಿಂದ ಏನೂ ಆಗಲಿಲ್ಲ. ಹಾಲಿ ಸಂಸದರಾದ ಶ್ರೀನಿವಾಸ ಪ್ರಸಾದ್ ಅವರು ಸುನೀಲ್ ಬೋಸ್ ಅವರಿಗೆ ಆಶೀರ್ವಾದ ಮಾಡಿ ಕಳುಹಿಸಿದ್ದಾರೆ. ಈಗ ಜನರು ಆಶೀರ್ವಾದ ಮಾಡಬೇಕು ಎಂದು ಮನವಿ ಮಾಡುತ್ತೇನೆ. ಶ್ರೀನಿವಾಸ್ ಪ್ರಸಾದ್ ಅವರ ಬೆಂಬಲದ ಜೊತೆಗೆ ಅವರ ಎಲ್ಲಾ ಹಿತೈಷಿಗಳ, ಬೆಂಬಲಿಗರ ಶಕ್ತಿಯನ್ನು ನಮಗೆ ನೀಡಿದ್ದಾರೆ ಎಂದರು.

ಈ ವೇಳೆ ಸಚಿವರು, ಶಾಸಕರುಗಳು, ಮಾಜಿ ಶಾಸಕರುಗಳು ಮುಖಂಡರು ಹಾಜರಿದ್ದರು.

ಲೋಕಸಭಾ ಸಾರ್ವತ್ರಿಕ ಚುನಾವಣೆ : ವೀಕ್ಷಕರ ನೇಮಕ

■ ಕಾಯಕಯೋಗಿ ಸುದ್ದಿ

ಚಾಮರಾಜನಗರ:– ಲೋಕಸಭಾ ಸಾರ್ವತ್ರಿಕ ಚುನಾವಣೆಗೆ ಚಾಮರಾಜನಗರ ಲೋಕಸಭಾ ಕ್ಷೇತ್ರ ವ್ಯಾಪ್ತಿಗೆ ಒಳಪಡುವ 8 ವಿಧಾನಸಭಾ ಕ್ಷೇತ್ರಗಳಿಗೆ ಸಂಬಂಧಿಸಿದಂತೆ ಭಾರತ ಚುನಾವಣಾ ಆಯೋಗದಿಂದ ವೆಚ್ಚ ವೀಕ್ಷಕರು, ಸಾಮಾನ್ಯ ವೀಕ್ಷಕರು ಹಾಗೂ ಪೊಲೀಸ್ ವೀಕ್ಷಕರು ನೇಮಕವಾಗಿದ್ದಾರೆ.

ಹೆಚ್.ಡಿ. ಕೋಟೆ, ನಂಜನಗೂಡು, ವರುಣ, ಟಿ. ನರಸೀಪುರ, ಹನೂರು, ಕೊಳ್ಳೇಗಾಲ, ಚಾಮರಾಜನಗರ ಹಾಗೂ ಗುಂಡ್ಲುಪೇಟೆ ವಿಧಾನಸಭಾ ಕ್ಷೇತ್ರಗಳಿಗೆ ವೆಚ್ಚ ವೀಕ್ಷಕರಾಗಿ ಎಂ. ಮೋಹನ್ ಬಾಬು, ಐ.ಆರ್.ಎಸ್ (ಮೊ.ಸಂ 9481687450) (ಇ–ಮೇಲ್ eochnagar 2024@gmail.com) ಅವರನ್ನು ನೇಮಕ ಮಾಡಲಾಗಿದೆ.

ಸಿದ್ದು ಬಳಿಕ ಗಡಿಜಿಲ್ಲೆಯಲ್ಲಿ ವಿಜಯೇಂದ್ರ ರೋಡ್ ಶೋ

ಕಾಂಗ್ರೆಸ್ ಬ್ಯಾಟರಿ ಡೌನ್ ಆಗಿದೆ ಎಂದು ಲೇವಡಿ

■ ಕಾಯಕಯೋಗಿ ಸುದ್ದಿ



ಚಾಮರಾಜನಗರ: ಚಾಮರಾಜನಗರದಲ್ಲಿ ಇಂದು ಸಿದ್ದರಾಮಯ್ಯ ರೋಡ್ ಶೋ ನಡೆಸಿದ ಬಳಿಕ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಭರ್ಜರಿ ರೋಡ್ ಶೋ ನಡೆಸಿದರು.

ಚಾಮರಾಜನಗರದ ಚಾಮರಾಜೇಶ್ವರ ದೇಗುಲ ಮುಂಭಾಗದಿಂದ ಜಿಲ್ಲಾಡಳಿತದ ಭವನದ ತನಕ ವಿಜಯೇಂದ್ರ ರೋಡ್ ಶೋ ನಡೆಸಿದರು. ಇವರಿಗೆ, ಬಿಜೆಪಿ ಮುಖಂಡರಾದ ಅರವಿಂದ ಲಿಂಬಾವಳಿ, ಡಿ.ವಿ.ಸದಾನಂದಗೌಡ, ಎಸ್.ಎ.ರಾಮದಾಸ್,

ಎನ್.ಮಹೇಶ್, ಜೆಡಿಎಸ್ ಮುಖಂಡರಾದ ಜಿ.ಟಿ.ದೇವೇಗೌಡ, ಎಂ.ಆರ್.ಮಂಜುನಾಥ್, ಅಶ್ವಿನ್ ಇದ್ದರು.

ಕಾಂಗ್ರೆಸ್ ಬ್ಯಾಟರಿ ಡೌನ್ : ರೋಡ್ ಶೋ ನಲ್ಲಿ ವಿಜಯೇಂದ್ರ ಮಾತನಾಡಿ, ಬಿಜೆಪಿ– ಜೆಡಿಎಸ್ ಮೈತ್ರಿಯಾದ ಬಳಿಕ ಕಾಂಗ್ರೆಸ್ ಬ್ಯಾಟರಿ ಡೌನ್ ಆಗಿದೆ, ಕಾಂಗ್ರೆಸ್ ಪಕ್ಷದ ಮುಖಂಡರು ಗಾಬರಿಯಾಗಿ ಉಸಿರಾಡಲು ಕಷ್ಟ ಪಡುತ್ತಿದ್ದಾರೆ, ಬಾಲರಾಜು ಅವರನ್ನು ಲಕ್ಷ ಮತಗಳಿಂದ ಅಂತರ ಗೆಲ್ಲಿಸಿ ಎಂದು ಕರೆ ನೀಡಿದರು.

ಚಾಮರಾಜನಗರ ಲೋಕಸಭಾ ಕ್ಷೇತ್ರದಲ್ಲಿ ದುಡ್ಡಿನ ಅಹಂಕಾರ, ಹಣದ ಮದದಿಂದ ಗೆಲ್ಲುತ್ತೇವೆ ಎಂಬ ಭ್ರಮೆಯಲ್ಲಿದ್ದಾರೆ, 1 ಲಕ್ಷ ಅಂತರದಿಂದ ಗೆಲ್ಲಿಸಿ ದಲಿತ ವಿರೋಧಿ, ಅಂಬೇಡ್ಕರ್ ವಿರೋಧಿ ಕಾಂಗ್ರೆಸ್ ಸರ್ಕಾರಕ್ಕೆ ತಕ್ಕ ಉತ್ತರ ಕೊಡಿ ಎಂದರು.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಬಂದಾಗಲೆಲ್ಲಾ ಬರಗಾಲ ಆವರಿಸುತ್ತದೆ, ಯಡಿಯೂರಪ್ಪ ಅಧಿಕಾರ ಸ್ವೀಕರಿಸಿದ್ದ ವೇಳೆ ಕೆರೆ–ಕಟ್ಟೆಗಳು ಕೋಡಿ ಬಿದ್ದು ಪ್ರವಾಹ ಸ್ಥಿತಿ ಎದುರಾಗಿತ್ತು,

ಜನರು ಕಾಂಗ್ರೆಸ್ ವಿರುದ್ಧ ಶಾಪ ಹಾಕುತ್ತಿದ್ದಾರೆ, ರೈತರ ಸಮಸ್ಯೆ ಪರಿಹರಿಸುವ ಬದಲು ಕೇಂದ್ರದತ್ತ ಬೊಟ್ಟು ಮಾಡುತ್ತಿದ್ದಾರೆ, ಸಿದ್ದರಾಮಯ್ಯ ಅವರನ್ನು ಜನರು ಗೆಲ್ಲಿಸಿದ್ದಾರೆ, ರಾಜ್ಯ ಸರ್ಕಾರಕ್ಕೆ ಜನರ ಬಗ್ಗೆ ಕಾಳಜಿ ಇಲ್ಲವೇ, ರಾಜ್ಯದಲ್ಲಿ 800 ಮಂದಿ ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ, ದಲಿತರ ವಿರೋಧಿ, ರೈತ ವಿರೋಧಿ ಕಾಂಗ್ರೆಸ್ ಸರ್ಕಾರಕ್ಕೆ ತಕ್ಕ ಉತ್ತರವನ್ನು ಚಾಮರಾಜನಗರ ಲೋಕಸಭಾ ಕ್ಷೇತ್ರದ ಚುನಾವಣೆಯಲ್ಲಿ ಕೊಡಬೇಕು ಎಂದರು.

ಇವೆಲ್ಲಾ ಶಾಸಕರುಗಳಾದ ಎ ಆರ್ ಮಂಜುನಾಥ್, ಜಿ ಟಿ ದೇವೇಗೌಡ, ಬಿಜೆಪಿ ರಾಜ್ಯಾಧ್ಯಕ್ಷ ಎನ್ ಮಹೇಶ್ ಬಿಜೆಪಿ ಜಿಲ್ಲಾಧ್ಯಕ್ಷ ನಿರಂಜನ್ ಕುಮಾರ್ ಸೇರಿದಂತೆ ಇನ್ನಿತರರು ಹಾಜರಿದ್ದರು.

ಲೋಕಸಭಾ ಸಾರ್ವತ್ರಿಕ ಚುನಾವಣೆ : 12 ನಾಮಪತ್ರಗಳ ಸಲ್ಲಿಕೆ

ಚಾಮರಾಜನಗರ:– ಲೋಕಸಭಾ ಸಾರ್ವತ್ರಿಕ ಚುನಾವಣೆಗೆ ನಾಮಪತ್ರ ಸಲ್ಲಿಸಲು ಐದನೇ ದಿನವಾದ ಇಂದು ಐದು ಅಭ್ಯರ್ಥಿಗಳಿಂದ 12 ನಾಮಪತ್ರಗಳು ಸಲ್ಲಿಕೆಯಾಗಿವೆ.



22–ಚಾಮರಾಜನಗರ (ಪ.ಜಾ) ಲೋಕಸಭಾ ಕ್ಷೇತ್ರದಿಂದ 2024ರ ಸಾರ್ವತ್ರಿಕ ಚುನಾವಣೆಗೆ ಇಂಡಿಯನ್ ನ್ಯಾಷನಲ್ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿ ಸುನೀಲ್ ಬೋಸ್ ಅವರು ನಾಲ್ಕು ನಾಮಪತ್ರಗಳು ಹಾಗೂ ಭಾರತೀಯ ಜನತಾ ಪಾರ್ಟಿ ಅಭ್ಯರ್ಥಿಯಾಗಿ ಎಸ್. ಬಾಲರಾಜು ಅವರು ಮೂರು ನಾಮಪತ್ರಗಳನ್ನು ಸಲ್ಲಿಸಿದ್ದಾರೆ. ಪಕ್ಷೇತರ ಅಭ್ಯರ್ಥಿಗಳಾಗಿ ಬಿ.ಲ್ಲಯ್ಯ ಎಂಬುವವರು ಮೂರು ನಾಮಪತ್ರ ಹಾಗೂ ಹೆಚ್.ಕೆ. ಸ್ವಾಮಿ ಮತ್ತು ಸಣ್ಣಸ್ವಾಮಿ ಎಂಬುವವರು ತಲಾ ಒಂದು ನಾಮಪತ್ರಗಳು ಸಲ್ಲಿಸಿದ್ದಾರೆ. ಒಟ್ಟಾರೆ ಇದುವರೆಗೆ ಹದಿನಾರು ಅಭ್ಯರ್ಥಿಗಳಿಂದ 26 ನಾಮಪತ್ರಗಳು ಸಲ್ಲಿಕೆಯಾಗಿವೆ. ನಾಮಪತ್ರದೊಂದಿಗೆ ಸಲ್ಲಿಸಿರುವ ಅಫಿಡವಿಟ್ ಪ್ರತಿಯನ್ನು ಭಾರತ ಚುನಾವಣಾ ಆಯೋಗದ ವೆಬ್‌ಸೈಟ್ https://affidavit.eci.gov.in ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡಲಾಗಿದೆ ಮತ್ತು ಚುನಾವಣಾಧಿಕಾರಿಗಳ ಕಾರ್ಯಾಲಯದ ಸೂಚನಾ ಫಲಕದಲ್ಲಿ ನಾಮಪತ್ರದ ನಕಲು ಪ್ರತಿ ಮತ್ತು ಅಫಿಡವಿಟ್ ಅನ್ನು ಪ್ರಚುರ ಪಡಿಸಲಾಗಿದೆ ಎಂದು ಚುನಾವಣಾಧಿಕಾರಿಗಳು ಹಾಗೂ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದ್ದಾರೆ.

ಸಂತೇಮರಹಳ್ಳಿ, ಗುಂಡ್ಲುಪೇಟೆ ಐ.ಬಿ. ಸರ್ಕಲ್ ಚೆಕ್‌ಪೋಸ್ಟ್ ಬಳಿ ದಾಖಲೆ ಇಲ್ಲದ 1,59,770 ರೂ. ಹಣ ವಶ

■ ಕಾಯಕಯೋಗಿ ಸುದ್ದಿ

ಚಾಮರಾಜನಗರ:– ಲೋಕಸಭಾ ಸಾರ್ವತ್ರಿಕ ಚುನಾವಣಾ ಸಂಬಂಧ ಕಾರ್ಯನಿರ್ವಹಿಸುತ್ತಿರುವ ಚಾಮರಾಜನಗರ ವಿಧಾನಸಭಾ ಕ್ಷೇತ್ರವ್ಯಾಪ್ತಿಯ ಸಂತೇಮರಹಳ್ಳಿ ಹಾಗೂ ಗುಂಡ್ಲುಪೇಟೆ ವಿಧಾನಸಭಾ ಕ್ಷೇತ್ರವ್ಯಾಪ್ತಿಯ ಚೆಕ್‌ಪೋಸ್ಟ್ ಗಳಲ್ಲಿ ದಾಖಲೆಗಳಲ್ಲದ ಸಾಗಾಣಿಕೆ ಮಾಡುತ್ತಿದ್ದ ಒಟ್ಟು 1,59,770 ರೂ. ಗಳನ್ನು ಎಸ್.ಎಫ್.ಟಿ ತಂಡದ ಅಧಿಕಾರಿಗಳು ವಶಕ್ಕೆ ಪಡೆದಿದ್ದಾರೆ.

ಸಂತೇಮರಹಳ್ಳಿ ಚೆಕ್‌ಪೋಸ್ಟ್ ನಲ್ಲಿ ಬೆಳಿಗ್ಗೆ 11.15 ಗಂಟೆ ಸಮಯದಲ್ಲಿ ಮೈಸೂರಿನಿಂದ ಬರುತ್ತಿದ್ದ ಕೆಎ–10 ಎಂ 7377 ಸಂಖ್ಯೆಯ ವಾಹನದಲ್ಲಿ ದೋಸಾರಾಂ ಬಿನ್ ಉಮಾರಾಂ ಎಂಬುವವರಿಂದ ದಾಖಲೆ ಇಲ್ಲದೆ ಸಾಗಿಸುತ್ತಿದ್ದ 56,000 (ಐವತ್ತಾರು ಸಾವಿರ ರೂ.) ರೂ. ಗಳನ್ನು ಎಸ್.ಎಫ್.ಟಿ ತಂಡದ ಅಧಿಕಾರಿ ಮಂಜುನಾಥ್ ತಂಡದವರು ಜಪ್ತಿ ಮಾಡಿದ್ದಾರೆ.

ಗುಂಡ್ಲುಪೇಟೆ ಐ.ಬಿ. ಸರ್ಕಲ್ ಬಳಿ ಇರುವ ಚೆಕ್‌ಪೋಸ್ಟ್ ನಲ್ಲಿ ನಿನ್ನೆ (ಏಪ್ರಿಲ್ 1ರಂದು) ರಾತ್ರಿ 10.30 ಗಂಟೆ ಸಮಯದಲ್ಲಿ ಕೇರಳದಿಂದ ಬರುತ್ತಿದ್ದ ಕೆಎ–09 ಎಂ.ಎ 7165 ಸಂಖ್ಯೆಯ (ಸ್ಕೋಡಾ ರಪಿಡ್ ಕಾರು) ವಾಹನದಲ್ಲಿ ಪ್ರಸಾದ್ ಬಿನ್ ಮಹದೇವ ಎಂಬುವವರಿಂದ ದಾಖಲೆ ಇಲ್ಲದೆ ಸಾಗಿಸುತ್ತಿದ್ದ 1,03,770 (ಒಂದು ಲಕ್ಷದ ಮೂರು ಸಾವಿರದ ಏಳುನೂರ ಎಪ್ಪತ್ತು ರೂ.) ರೂ. ಗಳನ್ನು ಎಸ್.ಎಫ್.ಟಿ ತಂಡದ ಅಧಿಕಾರಿ ಎಂ. ಪ್ರಭುಸ್ವಾಮಿ ತಂಡದವರು ಜಪ್ತಿ ಮಾಡಿದ್ದಾರೆ.

ಹಣ ಸಾಗಣೆ ಮಾಡುತ್ತಿದ್ದ ಬಗ್ಗೆ ವಿಚಾರಣೆ ಮಾಡಿದ ವೇಳೆ ಸ್ಪಷ್ಟ, ಸಮಂಜಸ ಉತ್ತರ ದೊರೆಯದ ಹಿನ್ನೆಲೆಯಲ್ಲಿ ಹಣ ವಶಕ್ಕೆ ಪಡೆದು ಆಯಾ ವಿಧಾನಸಭಾ ಕ್ಷೇತ್ರವ್ಯಾಪ್ತಿಯ ಉಪ ವಿಜಾಸಗೆಗಳಲ್ಲಿ ಇರಿಸಲಾಗಿದೆ. ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳಾದ ಶಿಲ್ಪಾ ನಾಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪಡಸಲತ್ತ ಗ್ರಾಮಸ್ಥರ ಮನವೊಲಿಸುವಲ್ಲಿ ಯಶಸ್ವಿಯಾದ ಅಧಿಕಾರಿಗಳು

■ ಕಾಯಕಯೋಗಿ ಸುದ್ದಿ



ಚಾಮರಾಜನಗರ: ಹನೂರು ತಾಲೂಕಿನ ಮಲೆ ಮಾದೇಶ್ವರ ಬೆಟ್ಟ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಪಡಸಲತ್ತ ಗ್ರಾಮಸ್ಥರನ್ನು ಮನವೊಲಿಸುವಲ್ಲಿ ಅಧಿಕಾರಿಗಳು ಯಶಸ್ವಿಯಾಗಿದ್ದು ಲೋಕಸಭಾ ಚುನಾವಣೆಯಲ್ಲಿ ಮತದಾನ ಮಾಡುವುದಾಗಿ ಭರವಸೆ ನೀಡಿದ್ದಾರೆ.

ಪಡಸಲತ್ತ ಗ್ರಾಮಕ್ಕೆ ಸಮರ್ಪಕ ಮೂಲಭೂತ ಸೌಲಭ್ಯಗಳಲ್ಲದೆ ನಾವು ಕಾಡು ಪ್ರಾಣಿಗಳಂತೆ ಜೀವನ ನಡೆಸುತ್ತಿದ್ದೇವೆ ನಮಗೆ ಮೂಲಭೂತ ಸೌಲಭ್ಯ ಕಲ್ಪಿಸುವವರೆಗೂ ನಾವು ಮತದಾನ ಬಹಿಷ್ಕಾರ ಮಾಡುವುದಾಗಿ ಗ್ರಾಮಸ್ಥರು ಪ್ರತಿಭಟನೆ ನಡೆಸಿದ್ದರು.

ಅಧಿಕಾರಿಗಳ ಭೇಟಿಯ ವೇಳೆ ಗ್ರಾಮಸ್ಥರು ಮಾತನಾಡಿ ಕೊಕ್ಕರೆ ಹಳ್ಳ ಕ್ಯಾಂಪ್ ನಿಂದ ಪಡಿಸಲನತ್ತ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ಸುಮಾರು 10 ಕಿ.ಮೀ ರಸ್ತೆ ದುರಸ್ತಿಗೊಂಡು ದ್ವಿಚಕ್ರ ವಾಹನಗಳು ಸಹ ಹೋಗಲು ಸಾಧ್ಯವಾಗುತ್ತಿಲ್ಲ ಇದರಿಂದ ನಮಗೆ ತೀವ್ರ ತೊಂದರೆಯಾಗಿದ್ದು, ಜೀವನವೇ ನರಕವಾಗಿದೆ. ಗ್ರಾಮದಲ್ಲಿ ಯಾರಿಗಾದರೂ ಆನಾರೋಗ್ಯ ಕಾಣಿಸಿಕೊಂಡರೆ ಡೋಲಿ ಮೂಲಕ ಈ ರಸ್ತೆಯಲ್ಲಿ ಹೊತ್ತುಕೊಂಡು ಹೋಗಬೇಕು, ಧೀನ ದಯಾಳ ಉಪಾಧ್ಯಾಯ ಯೋಜನೆಯಡಿ ಮನೆಮನೆಗೆ ಸೋಲಾರ್ ವ್ಯವಸ್ಥೆ ಕಲ್ಪಿಸಲಾಗಿದೆ ,ಆದರೆ ನಿರ್ವಹಣೆ ಕೊರತೆಯಿಂದ ಸೋಲಾರ್ ದುರಸ್ತಿಗೊಂಡು ತೊಂದರೆ ಅನುಭವಿಸುತ್ತಿದ್ದೇವೆ ಸೋಲಾರ್ ದುರಸ್ತಿ ಪಡಿಸಬೇಕು. ಗ್ರಾಮಕ್ಕೆ ಶಾಶ್ವತ ವಿದ್ಯುತ್ ವ್ಯವಸ್ಥೆ ಕಲ್ಪಿಸಬೇಕು. ಸರ್ಕಾರದ ಮತಿಯಿಂದ ನೀಡುವ ಪಡಿತರವನ್ನು ಸುಮಾರು 10 ಕಿ.ಮೀ ದೂರಿ ತಲೆಯ ಮೇಲೆ ಒತ್ತು ಸಾಗಬೇಕಿದೆ. ಈ ಬಿಂದೆ ಅರಣ್ಯ ಇಲಾಖೆ ಮತಿಯಿಂದ ನೀಡಲಾಗಿದ್ದ ಜನವನ ಜೀಪ್ ವ್ಯವಸ್ಥೆ ಕಲ್ಪಿಸಬೇಕು.ಗ್ರಾಮದಲ್ಲಿರುವ ಅಂಗನವಾಡಿ ಕೇಂದ್ರ ಬೀಳುವ ಹಂತದಲ್ಲಿರುವುದರಿಂದ ನೂತನ ಕಟ್ಟಡ ನಿರ್ಮಾಣ ಮಾಡಬೇಕು, ಐದನೇ ತರಗತಿಯ ನಂತರ ವಸತಿ ಶಾಲೆಗಳಿಗೆ ಪ್ರವೇಶಾತಿ ಕೊಡಿಸಲು ಭರವಸೆ ನೀಡಿದರೆ ಮಾತ್ರ ನಾವು ಚುನಾವಣೆಯಲ್ಲಿ ಮತದಾನ ಮಾಡುತ್ತೇವೆ ಇಲ್ಲದಿದ್ದರೆ ಬಹಿಷ್ಕಾರ ಮಾಡುವುದಾಗಿ ತಿಳಿಸಿದರು.

> ನಮಗೆ ಮೂಲ ಸೌಲಭ್ಯಗಳನ್ನು ಕಲ್ಪಿಸಿದರೆ ನಾವು ಖಂಡಿತವಾಗಿಯೂ ಮತದಾನದಲ್ಲಿ ಪಾಲ್ಗೊಳ್ಳುತ್ತೇವೆ, ಭರವಸೆ ಈಡೇರಿಸದಿದ್ದರೆ ಮತದಾನ ಬಹಿಷ್ಕಾರ ಮಾಡುತ್ತೇವೆ.
> –ಮಾದೇಶ್ ಪಡಿಸಲನತ್ತ ಗ್ರಾಮಸ್ಥ

ಗ್ರಾಮಸ್ಥರ ಅಹವಾಲುಗಳನ್ನು ಸ್ವೀಕರಿಸಿ ಉಪವಿಭಾಗಾಧಿಕಾರಿ ಶಿವಮೂರ್ತಿ ಮಾತನಾಡಿ ಪಡಸಲನತ್ತ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಯನ್ನು ಸೋಮವಾರದಿಂದಲೇ ದುರಸ್ತಿ ಪಡಿಸಲು ಸೂಚನೆ ನೀಡುತ್ತೇನೆ. ಕೆಟ್ಟು ಹೋ

website: www.kayakayogi.com

ಕಾಯಕ ಯೋಗಿ

KAYAKA YOGI - Regional Daily

ಪುಟ-5 | 04-04-2024

ಹಾಸನ-ರಾಮನಗರ

13 ಅಭ್ಯರ್ಥಿಗಳಿಂದ ನಾಮಪತ್ರ ಸಲ್ಲಿಕೆ



■ ಕಾಯಕಯೋಗಿ ಸುದ್ದಿ

ರಾಮನಗರ: ಲೋಕಸಭಾ ಸಾರ್ವತ್ರಿಕ ಚುನಾವಣೆ-2024ಕ್ಕೆ ಸಂಬಂಧಿಸಿದಂತೆ 23-ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದಲ್ಲಿ ಇಂದು (ಏ. 3ರಂದು) 13 ನಾಮಪತ್ರ ಸ್ವೀಕರಿಸಲಾಗಿದೆ.

23-ಬೆಂಗಳೂರು ಗ್ರಾಮಾಂತರ ಲೋಕ ಸಭಾ ಕ್ಷೇತ್ರದಲ್ಲಿ ಕರುನಾಡು ಪಕ್ಷದ ಅಭ್ಯರ್ಥಿ ಸುರೇಶ್ ಎಸ್ 1 ನಾಮಪತ್ರ, ಅಖಿಲ ಭಾರತ ಹಿಂದೂ ಮಹಾಸಭಾ ಪಕ್ಷದ ಅಭ್ಯರ್ಥಿ ಹೆಚ್. ರಾಜಣ್ಣ 1 ನಾಮಪತ್ರ, ನವಭಾರತ ಸೇನಾ ಪಕ್ಷದ ಅಭ್ಯರ್ಥಿ ಎನ್. ವಸಂತ್ ರಾವ್ ಜಗತಾಪ್ 1 ನಾಮಪತ್ರ, ಸ್ವತಂತ್ರ ಅಭ್ಯರ್ಥಿ ರಾಜೇಂದ್ರ ಟಿ. 1 ನಾಮಪತ್ರ ಭಾರತೀಯ ಪ್ರಜೆಗಳ ಕಲ್ಯಾಣ ಪಕ್ಷದ ಅಭ್ಯರ್ಥಿ ಕುಮಾರ್ ಎಲ್ 1 ನಾಮಪತ್ರ, ಉತ್ತಮ ಪ್ರಜಾಕೀಯ ಪಕ್ಷದ ಅಭ್ಯರ್ಥಿ ಮನೋಹರ್ ರಾಜ್ ಕೆ.ಎನ್ 1 ನಾಮಪತ್ರ, ಬಹುಜನ ಭಾರತ ಪಕ್ಷದ ಅಭ್ಯರ್ಥಿ ಮಂಜುನಾಥ ಸಿ.ಎನ್ 1 ನಾಮಪತ್ರ, ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷದ ಅಭ್ಯರ್ಥಿ ಮಹಮದ್ ಮುಸದಿಕ್ ಪಾಷ 1 ನಾಮಪತ್ರ, ಸ್ವತಂತ್ರ ಅಭ್ಯರ್ಥಿ ಮಂಜುನಾಥ್ ಸಿ 1 ನಾಮಪತ್ರ, ಬಹುಜನ್ ಸಮಾಜ ಪಕ್ಷದ ಅಭ್ಯರ್ಥಿ ಡಾ. ಚಿನ್ನಪ್ಪ ವೈ ಚಿಕ್ಕಹಾಗಡೆ 1 ನಾಮಪತ್ರ, ಕಂಟ್ರಿಸಿಟಿಜನ್ ಪಕ್ಷದ ಅಭ್ಯರ್ಥಿ ವಸಿಸ್ಟ್ ಜೆ 1 ನಾಮಪತ್ರ, ಸ್ವತಂತ್ರ ಅಭ್ಯರ್ಥಿ ಮಂಜುನಾಥ್ ಎನ್ 1 ನಾಮಪತ್ರ, ಸ್ವತಂತ್ರ ಅಭ್ಯರ್ಥಿ ಮಂಜುನಾಥ್ ಕೆ. 1 ನಾಮಪತ್ರ ಸಲ್ಲಿಸಿರುತ್ತಾರೆ.

ಮಾರ್ಚ್ 28 ರಿಂದ ಏ. 3ರ ವರೆಗೆ 26 ನಾಮಪತ್ರಗಳನ್ನು ಸ್ವೀಕರಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ತಿಳಿಸಿದ್ದಾರೆ.

ಚುನಾವಣಾ ಕಾರ್ಯದಲ್ಲಿ ನಿರ್ಲಕ್ಷ್ಯ ತೋರಿದರೆ ನಿರ್ದಾಕ್ಷಿಣ್ಯ ಕ್ರಮ



■ ಕಾಯಕಯೋಗಿ ಸುದ್ದಿ

ಹಾಸನ: ಲೋಕಸಭಾ ಚುನಾವಣೆ ಕಾರ್ಯದಲ್ಲಿ ನಿಯೋಜಿತರಾದ ಅಧಿಕಾರಿ-ಸಿಬ್ಬಂದಿಗಳು ತಮ್ಮ ಕರ್ತವ್ಯದಲ್ಲಿ ಯಾವುದೇ ನಿರ್ಲಕ್ಷ್ಯ ಮತ್ತು ಲೋಪಸೆಸಗಿದರೆ ಅಂತಹ ವರ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾಧಿಕಾರಿ ಸಿ. ಸತ್ಯಭಾಮಾ ಎಚ್ಚರಿಕೆ ನೀಡಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಲೋಕಸಭಾ ಚುನಾವಣೆ ಸಿದ್ಧತೆಗಳ ಪರಿಶೀಲನೆ ನಡೆಸಿ ಮಾತನಾಡಿದರು. 24 ಗಂಟೆಗಳ ಕಾಲವೂ ಚೆಕ್‌ಪೋಸ್ಟ್‌ಗಳಲ್ಲಿ ವಾಹನಗಳ ತಪಾಸಣೆ ತೀವ್ರಗೊಳಿಸಬೇಕು ಹಾಗೂ ಫ್ಲೈಯಿಂಗ್ ಸ್ಕ್ವಾಡ್ ತಂಡಗಳು ನಿರಂತರವಾಗಿ ನಿಗಾ ಇಡಬೇಕು. ಸಾರ್ವಜನಿಕವಾಗಿ ತಿಳಿಯದಂತೆ ತಪಾಸಣಾ ತಂಡಗಳು ಸಂಚರಿಸಬೇಕು. ಅಕ್ರಮ ವ್ಯವಹಾರಗಳ ನಿಯಂತ್ರಣದಲ್ಲಿ ಯಾವುದೇ ನಿರ್ಲಕ್ಷ್ಯ ಕಂಡುಬಂದರೆ ಅಂತಹವರ ವಿರುದ್ಧ ಶಿಸ್ತುಕ್ರಮ ಕೈಗೊಳ್ಳಲಾಗುವುದು ಎಂದು ಅವರು ತಿಳಿಸಿದರು.

ಸರಕು ಸಾಗಾಟಗಳ ಮೇಲೆ ಜಿಎಸ್‌ಟಿ ಅಧಿಕಾರಿಗಳು ನಿಗಾ ಇಡಬೇಕು. ಮದ್ಯ ಮಾರಾಟವನ್ನು ನಿರಂತರವಾಗಿ ಪರಿಶೀಲಿಸಿ ಬೇಕು. ಬ್ಯಾಂಕ್ ವ್ಯವಹಾರ, ಡಿಜಿಟಲ್ ವ್ಯವಹಾರಗಳನ್ನು ಗಮನಿಸಬೇಕು. ಒಂದೇ ಖಾತೆಯಿಂದ ಹಲವರಿಗೆ ನಿರಂತರವಾಗಿ ಹಣ ವರ್ಗಾವಣೆಯಾಗುತ್ತಿದ್ದರೆ ತಕ್ಷಣವೇ ವರದಿ ನೀಡಲು ಅವರು ಸಂಬಂಧಿಸಿದ ನೋಡಲ್ ಅಧಿಕಾರಿಗಳಿಗೆ ನಿರ್ದೇಶಿಸಿದರು.

ಮತದಾರರಿಗೆ ಬೆದರಿಸುವ ಅಥವ ಹಣದ ಆಮಿಷ ಒಡ್ಡುವ ಸಾಧ್ಯತೆ ಇರುವ ಪ್ರದೇಶಗಳ ಮೇಲೆ ನಿಗಾ ಇಡಬೇಕು. ತಪಾಸಣಾ ತಂಡಗಳು ಇಂತಹ ಪ್ರದೇಶಗಳಲ್ಲಿ ನಿರಂತರವಾಗಿ ಭೇಟಿ ನೀಡಬೇಕು.

ಯಾವುದೇ ಅಕ್ರಮಗಳಿಗೆ ಅವಕಾಶ ನೀಡಬಾರದು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮುಹಮ್ಮದ್ ಸುಜೀತಾ ಮಾತನಾಡಿ, ಚೆಕ್‌ಪೋಸ್ಟ್‌ಗಳ ಕಾರ್ಯಾಚರಣೆಯನ್ನು ವೆಬ್‌ಕಾಸ್ಟ್‌ಗಳ ಮೂಲಕ ಚುನಾವಣಾ ಆಯೋಗ ಗಮನಿಸುತ್ತಿದೆ. ಸಂಶಯಾಸ್ಪದ ಸರಕು ಮತ್ತು ಅಕ್ರಮ ಸಾಗಾಟಗಳನ್ನು ಗಂಭೀರವಾಗಿ ಪರಿಶೀಲಿಸಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಕೆ.ಟಿ. ಶಾಂತಾ, ವಿವಿಧ ನೋಡಲ್ ಅಧಿಕಾರಿಗಳು, ವಿಧಾನಸಭಾ ಕ್ಷೇತ್ರಗಳ ಸಹಾಯಕ ಚುನಾವಣಾಧಿಕಾರಿಗಳು ಉಪಸ್ಥಿತರಿದ್ದರು.

ಇಂದು ಡಾ.ಸಿ.ಎನ್.ಮಂಜುನಾಥ್ ನಾಮಪತ್ರ ಸಲ್ಲಿಕೆ: ಚಿನ್ನಸ್ವಾಮಿ



■ ಕಾಯಕಯೋಗಿ ಸುದ್ದಿ .

ಕನಕಪುರ : ಏ. 4 ರಂದು ಮೈತ್ರಿ ಅಭ್ಯರ್ಥಿ ಡಾ.ಸಿ.ಎನ್.ಮಂಜುನಾಥ್ ನಾಮಪತ್ರ ಸಲ್ಲಿಸಲಿದ್ದಾರೆ ಅಂದು ತಾಲ್ಲೂಕಿನಿಂದ ಸಾವಿರಾರು ಜೆಡಿಎಸ್ ಮತ್ತು ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು ಭಾಗಿಯಾಗಬೇಕು ಎಂದು ಜೆಡಿಎಸ್ ರಾಜ್ಯ ಯುವ ಉಪಾಧ್ಯಕ್ಷ ಚಿನ್ನಸ್ವಾಮಿ ತಿಳಿಸಿದರು.

ನಗರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿ ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಬಿಜೆಪಿ ಮತ್ತು ಜೆಡಿಎಸ್ ಅಭ್ಯರ್ಥಿ ಡಾ' ಸಿ ಎನ್ ಮಂಜುನಾಥ್ ರವರು ರಾಮನಗರದ ಜಿಲ್ಲಾಧಿಕಾರಿಗಳಿಗೆ ನಾಮಪತ್ರ ಸಲ್ಲಿಸಲಿದ್ದಾರೆ.

ಕನಕಪುರ ವಿಧಾನಸಭಾ ಕ್ಷೇತ್ರದ ಎರಡು ಪಕ್ಷದ ಕಾರ್ಯಕರ್ತರು ಮುಖಂಡರು ಅಭಿಮಾನಿಗಳು ನಾಮಪತ್ರ ಸಲ್ಲಿಕೆ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕೆಂದು ಮನವಿ ಮಾಡಿದರು.

ಏ. 4ರ ಗುರುವಾರ ಬೆಳಿಗ್ಗೆ 10 ಗಂಟೆಗೆ ನಾಮಪತ್ರ ಸಲ್ಲಿಸಲಿದ್ದು ತಾಲ್ಲೂಕಿನಿಂದ ಬೆಳಿಗ್ಗೆ ಎಂಟು ಗಂಟೆಗೆ ಹೊರಡುವ ಸಿದ್ಧತೆ ಮಾಡಿಕೊಳ್ಳಬೇಕು. ಕೋಡಿಹಳ್ಳಿ, ಉಯ್ಯಂಬಳ್ಳಿ, ಸಾತನೂರು ಕಸಬಾ ಹಾಗೂ ಕನಕಪುರ ಟೌನ್ ಸೇರಿದಂತೆ ತಾಲ್ಲೂಕಿನಲ್ಲಿ ಎರಡು ಪಕ್ಷದ ಮುಖಂಡರು ಕಾರ್ಯಕರ್ತರು ತಾಲೂಕು ಕಚೇರಿ ಮುಂಭಾಗ ಬಂದು ಜಮಾಯಿಸಬೇಕು ಎಂದರು.

ದ್ವಿಚಕ್ರ ವಾಹನಗಳಲ್ಲಿ ಸಾವಿರಾರು ಯುವಕರು ತೆರಳಲಿದ್ದಾರೆ ಉಳಿದ ಮುಖಂಡರು ಹಾಗೂ ಕಾರ್ಯಕರ್ತರಿಗೆ ಸಾರಿಗೆ ವ್ಯವಸ್ಥೆ ಮಾಡಲಾಗಿದೆ. ತಮ್ಮ ತಮ್ಮ ವಾಹನಗಳಲ್ಲಿ ಹೋಗುವವರು ವಿಕಕಾಲಕ್ಕೆ ಕನಕಪುರದಿಂದ ಹೊರಟು ರಾಮನಗರ ಜಿಲ್ಲಾಧಿಕಾರಿಗಳ ಕಚೇರಿ ಸೇರಿಕೊಳ್ಳಬೇಕು. ನಾಮಪತ್ರ ಸಲ್ಲಿಕೆ ಕಾರ್ಯಕ್ರಮದಲ್ಲಿ ಕನಕಪುರ ತಾಲ್ಲೂಕಿನಿಂದ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಡಾ. ಸಿ.ಎನ್ ಮಂಜುನಾಥ್ ಅವರನ್ನು ಬೆಂಬಲಿಸಿ ಅವರ ಕೈ ಬಲಪಡಿಸಬೇಕೆಂದು ಮನವಿ ಮಾಡಿದರು.

ಲೋಕಸಭಾ ಚುನಾವಣೆ ಮತದಾರರ ಜಾಗೃತಿ ಅಭಿಯಾನ ಕಾರ್ಯಕ್ರಮ



ಚನ್ನರಾಯಪಟ್ಟಣ: ತಾಲೂಕು ಆಡಳಿತ, ತಾಲೂಕು ಸ್ವೀಪ್ ಸಮಿತಿ , ಪುರಸಭೆ ವತಿಯಿಂದ ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಮತದಾರರ ಜಾಗೃತಿ ಆಂದೋಲನ ಜಾಥಾ ಕಾರ್ಯಕ್ರಮವನ್ನು ಆಯೋಜಿಸಿ ಮಾಡಲಾಯಿತು.

ಕಾರ್ಯಕ್ರಮವನ್ನು ಕುರಿತು ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಜಿ ಆರ್ ಹರೀಶ್ ಮಾತನಾಡಿ ಭಾರತ ಚುನಾವಣಾ ಆಯೋಗವು 2024ನೇ ಲೋಕಸಭಾ ಚುನಾವಣೆಯಲ್ಲಿ ಶೇಕಡ 86 ಹೆಚ್ಚು ಮತದಾನವು ಕಡ್ಡಾಯವಾಗಿ ನಡೆಯಬೇಕು ಎಂದು ಆದೇಶ ಮಾಡಿರುವ ಹಿನ್ನೆಲೆಯಲ್ಲಿ ಈ ದಿನ ಚನ್ನರಾಯಪಟ್ಟಣದ ನಗರ ವ್ಯಾಪ್ತಿಯಲ್ಲಿ ಶೇಷಡವಾರು ಕಡಿಮೆ ಮತದಾನವಾಗಿರುವ ಮತಗಟ್ಟೆಗಳಿಗೆ ಭೇಟಿ ನೀಡುವ ಮೂಲಕ ಮತದಾನ ಜಾಗೃತಿ ಅಭಿಯಾನ ಕಾರ್ಯಕ್ರಮವನ್ನು ಆಯೋಜನೆ ಮಾಡುವ ಮೂಲಕ ಮತದಾರರಲ್ಲಿ ಜಾಗೃತಿ ಮೂಡಿಸಿ ಹಾಗೂ ಪ್ರತಿಯೊಬ್ಬ ಮತದಾರರು ಕಡ್ಡಾಯವಾಗಿ ಮತದಾನದಲ್ಲಿ ಪಾಲ್ಗೊಳ್ಳುವ ಮೂಲಕ ಸುಭದ್ರ ಭಾರತವನ್ನು ನಿರ್ಮಾಣ ಮಾಡುವಲ್ಲಿ ಕೈಜೋಡಿಸಬೇಕೆಂದು ಮನವಿ ಮಾಡಿದರು.

ಇದೇ ಸಂದರ್ಭದಲ್ಲಿ ತಾಲೂಕು ಸ್ವೀಪ್ ಸಮಿತಿಯ ಅಧ್ಯಕ್ಷರಾದ ಜಿ ಆರ್ ಹರೀಶ್, ಪುರಸಭೆಯ ಮುಖ್ಯ ಅಧಿಕಾರಿಗಳಾದ ಹೇಮಂತ್ ಕುಮಾರ್, ತಾಲೂಕು ಪಂಚಾಯಿತಿ ಸಹಾಯಕ ನಿರ್ದೇಶಕರಾದ ಗಿರೀಶ್, ಪುರಸಭೆಯ ಸೌಕರರಾದ ಶಾರದಮ್ಮ, ನಟರಾಜ್, ತಾಲೂಕು ಪಂಚಾಯಿತಿ ಸೌಕರರಾದ ದೇವರಾಜು, ಚಿಂದ್ರು, ಬಾಲಕೃಷ್ಣ, ಸೇರಿದಂತೆ ಇತರರು ಹಾಜರಿದ್ದರು.

ಹಾಸನ ಲೋಕಸಭಾ ಕ್ಷೇತ್ರ: 4 ನಾಮಪತ್ರ ಸಲ್ಲಿಕೆ

■ ಕಾಯಕಯೋಗಿ ಸುದ್ದಿ

ಹಾಸನ: ಸಾರ್ವತ್ರಿಕ ಲೋಕಸಭಾ ಚುನಾವಣೆಗೆ ಸಂಬಂಧಿಸಿ ಹಾಸನ ಲೋಕಸಭಾ ಕ್ಷೇತ್ರದ ಚುನಾವಣೆಗೆ ಬುಧವಾರ ನಾಲ್ವರು ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದಾರೆ.

ಸಂತೋಷ್ ಬಿ.ಎನ್(ಅಖಿಲ ಭಾರತ ಹಿಂದೂ ಮಹಾಸಭಾ), ಆರ್.ಜಿ. ಸತೀಶ್(ಪಕ್ಷೇತರ), ಪ್ರತಾಪ ಕೆ.ಎ.(ಉತ್ತಮ ಪ್ರಜಾಕೀಯ ಪಾರ್ಟಿ), ಕೆ.ಆರ್. ಗಂಗಾಧರ(ಪಕ್ಷೇತರ) ಅವರು ಹಾಸನ ಜಿಲ್ಲಾಧಿಕಾರಿ ಕಚೇರಿಯಲ್ಲಿ ಚುನಾವಣಾಧಿಕಾರಿ ಸಿ. ಸತ್ಯಭಾಮಾ ಅವರಿಗೆ ನಾಮಪತ್ರವನ್ನು ಸಲ್ಲಿಸಿದರು.

ಇದುವರೆಗೆ ಹಾಸನ ಲೋಕಸಭಾ ಕ್ಷೇತ್ರದಲ್ಲಿ ಒಟ್ಟು 13 ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದಾರೆ. ನಾಮಪತ್ರ ಸಲ್ಲಿಕೆಗೆ ಏಪ್ರಿಲ್ 4 ಕೊನೆಯ ದಿನವಾಗಿದೆ. ಏ.5ರಂದು ನಾಮಪತ್ರ ಪರಿಶೀಲನೆ, ಏ.8ರಂದು ನಾಮಪತ್ರ ವಾಪಸ್ ಪಡೆಯಲು ಕೊನೆಯ ದಿನ. ಏ.26ರಂದು ಮತದಾನ ನಡೆಯಲಿದೆ. ಜಿಲ್ಲಾಧಿಕಾರಿ ಕಚೇರಿಯಲ್ಲಿ ಪ್ರತಿದಿನ ಬೆಳಿಗ್ಗೆ 11ರಿಂದ ಮಧ್ಯಾಹ್ನ 3 ಗಂಟೆಯೊಳಗೆ ನಾಮಪತ್ರ ಸಲ್ಲಿಕೆ ಮಾಡಬಹುದು.

ಮತದಾರರಲ್ಲಿ ಜಾಗೃತಿ ಕಾರ್ಯಕ್ರಮ



ಕನಕಪುರ : ಸಾರ್ವತ್ರಿಕ ಲೋಕಸಭಾ ಚುನಾವಣೆ ಅಂಗವಾಗಿ ಮತದಾರರಲ್ಲಿ ಜಾಗೃತಿ ಹಾಗೂ ಅರಿವು ಮೂಡಿಸುವ ಕಾರ್ಯಕ್ರಮ ಜರಗಿತು.

ಬುಧವಾರ ತಾಲೂಕು ಕಚೇರಿ ಆವರಣದಲ್ಲಿ ಸಹಾಯಕ ಚುನಾವಣಾ ಅಧಿಕಾರಿ ಟಿ. ರಾಘವೇಂದ್ರ ಅಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಮತದಾನದ ಪ್ರತಿಜ್ಞಾ ವಿಧಿಯನ್ನು ಬೋಧಿಸಿದರು.

ಈ ಸಂದರ್ಭದಲ್ಲಿ ತಹಸೀಲ್ದಾರ್ ಡಾಕ್ಟರ್ ಸ್ಮಿತಾ ರಾಮು, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಬಿ.ಎ. ಮೋಹನ್ ಬಾಬು ತಾಲೂಕು ಪಂಚಾಯಿತಿ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿಗಳು ಹಾಗೂ ಸಾರ್ವಜನಿಕರು ಹಾಜರಿದ್ದರು.

ಸಾರ್ವಜನಿಕರು ತಮ್ಮ ಆರೋಗ್ಯ ಕಾಪಾಡಿಕೊಳ್ಳಿ: ಡಿಸಿ

■ ಕಾಯಕಯೋಗಿ ಸುದ್ದಿ

ರಾಮನಗರ: ಭಾರತೀಯ ಹವಾಮಾನ ಇಲಾಖೆಯು ಪ್ರಸ್ತುತ ಹಾಗೂ ಮೇ ಅಂತ್ಯದವರೆಗೆ ಸೂರ್ಯನ ಬಿಸಿಲು ಮತ್ತು ಬಿಸಿಗಾಳಿ ಹೆಚ್ಚಾಗುವ ಬಗ್ಗೆ ಮುನ್ಸೆಚ್ಚರಿಕೆ ಯನ್ನು ನೀಡಿರುತ್ತದೆ. ಜಿಲ್ಲೆಯಲ್ಲಿ ಸೂರ್ಯನ ಶಾಖವು ದಿನದಿಂದ ದಿನಕ್ಕೆ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಹೀಟ್ ವೇವ್ (ಶಾಖದ ಹೊಡೆತ) ಸ್ಟೋಕ್ ನಿಂದಾಗಿ ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಸಾಧ್ಯತೆಗಳಿರುತ್ತದೆ.

ಆದ್ದರಿಂದ ಎಲ್ಲಾ ಸಾರ್ವಜನಿಕರಿಗೆ ತಮ್ಮ ಆರೋಗ್ಯ ಕಾಪಾಡಿಕೊಳ್ಳಲು ಸಾರ್ವಜನಿಕರು ಬಿಸಿಲು ದಿನಗಳಲ್ಲಿ ಕೊಡೆ/ಛತ್ರಿ ಬಳಸಿರಿ ಹಾಗೂ ಸಾಧ್ಯವಾದಷ್ಟು ತಂಪಾದ ಸ್ಥಳಗಳಲ್ಲಿ ಉಳಿಯುವುದು. ತೆಳುವಾದ ಸಡಿಲವಾದ ಹತ್ತಿಯ ಉಡುಪುಗಳನ್ನು ಧರಿಸುವುದು, ಆದಷ್ಟು ಬಿಳಿ ಬಣ್ಣದ ಬಟ್ಟೆಗಳ ಬಳಕೆ ಒಳ್ಳೆಯದು. ಹತ್ತಿಯ ಅಥವಾ ಬರ್ಲಾಪ್ ಟೋಪಿ ಹಾಗೂ ಕೂಲಿಂಗ್ ಗ್ಲಾಸ್ ಧರಿಸಿರಿ, ಹಿರಿಯ ನಾಗರಿಕರು ಹಾಗೂ ಮಕ್ಕಳು ಹೆಚ್ಚು ನೀರು ಕುಡಿಯುವುದು.

ಬೆಳಿಗ್ಗೆ 11 ರಿಂದ ಸಂಜೆ 4 ರವರೆಗೆ ಹೊರಾಂಗಣ ದೈಹಿಕ ಚಟುವಟಿಕೆಯನ್ನು ಕಡಿಮೆ ಮಾಡಲು ಪ್ರಯತ್ನಿಸಿ. ಸಾಕಷ್ಟು ನೀರು ಕುಡಿಯಿರಿ, ಮಜ್ಜಿಗೆ ಮತ್ತು ಗ್ಲೂಕೋಸ್/ ಓ.ಆರ್.ಎಸ್ ನಂತಹ ದ್ರವ ಪದಾರ್ಥಗಳನ್ನು ಹೆಚ್ಚು ಉಪಯೋಗಿಸಿ. ಕೊಠಡಿಯ ತಾಪಮಾನವನ್ನು ಕಡಿಮೆ ಮಾಡಲು ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳಬೇಕು.

ಹೀಟ್ ಸ್ಟೋಕ್ ಲಕ್ಷಣಗಳನ್ನು ಹೊಂದಿರುವ ವ್ಯಕ್ತಿಯನ್ನು ತಂಪಾದ ಜಾಗಕ್ಕೆ ಸ್ಥಳಾಂತರಿಸಿ. ಶಾಖದ ಹೊಡೆತದಿಂದ ಬಳಲುತ್ತಿರುವ ವ್ಯಕ್ತಿಯು ಕನಿಷ್ಠ ಬಟ್ಟೆಯನ್ನು ಹೊಂದಿರುವಂತೆ ನೋಡಿಕೊಂಡು. ವ್ಯಕ್ತಿಗೆ ತಣ್ಣೆನಿರಿನಿಂದ ಸ್ಪಾಂಜ್ ಬಾತ್ ಮಾಡಬೇಕು ಅಥವಾ ಐಸ್ ಪ್ಯಾಕ್ ಗಳನ್ನು ಉಪಯೋಗಿಸಬಹುದು ಅಥವಾ ವ್ಯಕ್ತಿಯನ್ನು ಐಸ್ ಪ್ಯಾಕ್ ಗಳ ಮಧ್ಯ ಇಡಬಹುದು. ಹೀಟ್ ವೇವ್ ಸ್ಟೋಕ್ ಗೆ ಒಳಗಾದ ವ್ಯಕ್ತಿಗೆ ಯಾವುದೇ ಸುಧಾರಣೆ ಕಂಡುಬರದಿದ್ದರೆ, ಅವರನ್ನು ಕೂಲಿಂಗ್ ವ್ಯವಸ್ಥೆಯೊಂದಿಗೆ ತಕ್ಷಣ ಆಸ್ಪತ್ರೆಗೆ ಸ್ಥಳಾಂತರಿಸಬೇಕು. ಹೊರಾಂಗಣದಲ್ಲಿ ಬಿಸಿಲಿನಲ್ಲಿ ಕೆಲಸ ಮಾಡುವವರಿಗೆ ಕಡ್ಡಾಯ ವಿರಾಮವನ್ನು ನಿಗದಿಪಡಿಸುವುದು. ಆಹಾರದಲ್ಲಿ ಮಸಾಲೆ ಪದಾರ್ಥಗಳನ್ನು ಹೆಚ್ಚು ಬಳಸಬಾರದು ಹಾಗೂ ಬೇಸಿಗೆ ದಿನಗಳಲ್ಲಿ ತಣ್ಣೀರಿ ಸ್ನಾನ ಒಳ್ಳೆಯದು ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮತದಾರರ ಜಾಗೃತಿ ಅಭಿಯಾನ: ಬೈಕ್ ಜಾಥ

ಹಾಸನ: ಸಕಲೇಶಪುರ ತಾಲೂಕು. ತಾಲೂಕು ಮಟ್ಟದ ಸಾರ್ವತ್ರಿಕ 2024 ಲೋಕಸಭಾ ಚುನಾವಣೆ ಅಂಗವಾಗಿ ತಾಲೂಕು ಆಡಳಿತ ಮತ್ತು ತಾಲೂಕು ಪಂಚಾಯಿತಿ ವತಿಯಿಂದ ಸ್ವೀಪ್ ಚಟುವಟಿಕೆ ಅಭಿಯಾನದ ಅಂಗವಾಗಿ ಮಂಗಳವಾರ ಬೃಹತ್ ಬೈಕ್ ಜಾಥ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು. 18 ವರ್ಷ ಮೇಲ್ಪಟ್ಟವರು ಕಡ್ಡಾಯವಾಗಿ ಮತದಾನ ಮಾಡುವುದು. ಒಂದು ಸುಭದ್ರ ರಾಷ್ಟ್ರ ನಿರ್ಮಾಣ ಮಾಡಲು ಮತದಾನದ ಅವಶ್ಯಕತೆ ಎಂಬುದರ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಲಾಯಿತು. ಸಕಲೇಶಪುರ ಉಪವಿಭಾಗಾಧಿಕಾರಿ ಶ್ರುತಿ ಜಾಥಾಗೆ ಚಾಲನೆ ನೀಡಿದರು. ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಪ್ರಜ್ವಲ್‌ರೇವಣ್ಣ ಪರವಾಗಿ ಶಾಸಕ ಬಾಲಕೃಷ್ಣ ಮತಯಾಚನೆ



■ ಕಾಯಕಯೋಗಿ ಸುದ್ದಿ

ಚನ್ನರಾಯಪಟ್ಟಣ: ತಾಲೂಕಿನ ಕಸಬಾ ಹೋಬಳಿಯ ಡಿ ಕಾಳೇನಹಳ್ಳಿ ಗ್ರಾಮದಲ್ಲಿ ಹಾಸನ ಲೋಕಸಭಾ ಕ್ಷೇತ್ರದ ಎನ್‌ಡಿಎ ಮೈತ್ರಿಕೂಟದ ಅಭ್ಯರ್ಥಿ ಪ್ರಜ್ವಲ್ ರೇವಣ್ಣ ಪರವಾಗಿ ಮತಯಾಚನೆ ಮಾಡಿದ ಶ್ರವಣಬೆಳಗೊಳ ವಿಧಾನಸಭಾ ಕ್ಷೇತ್ರದ ಶಾಸಕ ಸಿ.ಎನ್ ಬಾಲಕೃಷ್ಣ ಮತ್ತು ಬೆಂಬಲಿಗರು.

ಕಾಳೇನಹಳ್ಳಿ ಗ್ರಾಮದ ಮತದಾರರನ್ನು ಉದ್ದೇಶಿಸಿ ಮಾತನಾಡಿದ ಶಾಸಕ ಸಿ.ಎನ್ ಬಾಲಕೃಷ್ಣ ಹಾಸನ ಜಿಲ್ಲೆಯ ಅಭಿವೃದ್ಧಿಗೆ ಎಚ್ ಡಿ ದೇವೆಗೌಡರ ಕೊಡುಗೆ ಅಪಾರ ಇದೆ. ಮಾಜಿ ಮುಖ್ಯಮಂತ್ರಿಗಳಾದ ಎಚ್ ಡಿ ಕುಮಾರಸ್ವಾಮಿ ಅವರು ರೈತರ ಬಗ್ಗೆ ವಿಶೇಷ ಕಾಳಜಿಯಿಂದ ಸಾಲ ಮನ್ನಾ ಯೋಜನೆಯನ್ನು ಜಾರಿ ಮಾಡಿದ್ದಾರೆ. ಹಾಗೂ ಮಾಜಿ ಮಂತ್ರಿಗಳಾದ ಎಚ್ ಡಿ ರೇವಣ್ಣನವರು ಹಾಸನ ಜಿಲ್ಲೆಯ ಅಭಿವೃದ್ಧಿಗಾಗಿ ಹಲವಾರು ಜನಪರವಾದ ಯೋಜನೆಗಳನ್ನು ಜಾರಿ ಮಾಡುವಲ್ಲಿ ಸಫಲರಾಗಿದ್ದಾರೆ ಎಂದರು,

ಹಾಸನ ಲೋಕಸಭಾ ಕ್ಷೇತ್ರದ ಸಂಸದರಾದ ಪ್ರಜ್ವಲ್ ಪ್ರಜ್ವಲ್ ರೇವಣ್ಣನವರು ಹಾಸನ ಜಿಲ್ಲೆಯ ಅಭಿವೃದ್ಧಿಗಾಗಿ 16,000 ಕ

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ-6 | 04-04-2024

ಬೆಂಗಳೂರು

ಎಚ್.ಡಿ.ಚೌಡಯ್ಯನವರ ಸಮಾಧಿಗೆ ಎಚ್‌ಡಿಕೆ ಪುಷ್ಪನಮನ

■ ಕಾಯಕಯೋಗಿ ಸುದ್ದಿ

ಮಂಡ್ಯ: ಮಂಡ್ಯ ಲೋಕಸಭಾ ಕ್ಷೇತ್ರದ ಜಾ.ದಳ-ಬಿಜೆಪಿ ಮೈತ್ರಿ ಅಭ್ಯರ್ಥಿಯಾಗಿ ಗುರುವಾರ (ಏ.4) ನಾಮಪತ್ರ ಸಲ್ಲಿಸಲಿರುವ ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಅವರು ನಾಮಪತ್ರ ಸಲ್ಲಿಕೆಯ ಮುನ್ನಾ ದಿನವಾದ ಬುಧವಾರ ತಾಲ್ಲೂಕಿನ ಹೊಳಲು ಗ್ರಾಮಕ್ಕೆ ತೆರಳಿದ ಕುಮಾರಸ್ವಾಮಿ ಅವರು ಮಾಜಿ ಶಾಸಕ ದಿ.ಎಚ್.ಡಿ.ಚೌಡಯ್ಯ ಸಮಾಧಿಗೆ ಪುಷ್ಪ ನಮನ ಸಲ್ಲಿಸಿದರು.

ಈ ವೇಳೆ ಮುಖಂಡರಾದ ಎಚ್.ಎಲ್.ಶಿವಣ್ಣ, ಮಾಜಿ ಶಾಸಕ ಜಿ.ಬಿ.ಶಿವಕುಮಾರ್, ಹರಿಪ್ರಸಾದ್, ಎಚ್.ಸಿ.ಶ್ರೀಧರ್, ಉದಯ್, ಎಚ್.ಎಸ್.ಯೋಗೇಶ್ ಕುಮಾರ್, ಗ್ರಾಪಂ ಅಧ್ಯಕ್ಷೆ ಅರ್ಪಿತ, ಎಚ್.ಪಿ. ಸಚ್ಚಿದಾನಂದ(ಪಪ್ಪಿ), ಎಚ್.ಎಸ್.ಆನಂದ್, ಎಚ್.ಬಿ. ಶಿವಣ್ಣ, ಎಚ್.ಡಿ.ರವಿ, ಎಚ್.ಎಲ್.ಶಿವೆಗೌಡ, ಪ್ರದೀಪ್‌ಕುಮಾರ್, ಜಿ.ಬಿ.ಕೃಷ್ಣ ಪುಟ್ಟಸ್ವಾಮಿ, ಶಂಕರ್ ಪೂಜಾರಿ, ಮಂಜುನಾಥ್ ಧೀಕ್ಷಿತ್ ಮತ್ತಿತರರಿದ್ದರು



ಲೋಕಸಭಾ ಸಾರ್ವತ್ರಿಕ ಚುನಾವಣೆ : ವೀಕ್ಷಕರ ನೇಮಕ

ಚಾಮರಾಜನಗರ:– ಲೋಕಸಭಾ ಸಾರ್ವತ್ರಿಕ ಚುನಾವಣೆಗೆಹಬ್ಬ ಚಾಮರಾಜನಗರ ಲೋಕಸಭಾ ಕ್ಷೇತ್ರ ವ್ಯಾಪ್ತಿಗೆ ಒಳಪಡುವ 8 ವಿಧಾನಸಭಾ ಕ್ಷೇತ್ರಗಳಿಗೆ ಸಂಬಂಧಿಸಿದಂತೆ ಭಾರತ ಚುನಾವಣಾ ಆಯೋಗದಿಂದ ವೆಚ್ಚ ವೀಕ್ಷಕರು, ಸಾಮಾನ್ಯ ವೀಕ್ಷಕರು ಹಾಗೂ ಪೊಲೀಸ್ ವೀಕ್ಷಕರು ನೇಮಕವಾಗಿದ್ದಾರೆ.

ಹೆಚ್.ಡಿ. ಕೋಟೆ, ನಂಜನಗೂಡು, ವರುಣ, ಟಿ. ನರಸೀಪುರ, ಹನೂರು, ಕೊಳ್ಳೇಗಾಲ, ಚಾಮರಾಜನಗರ ಹಾಗೂ ಗುಂಡ್ಲುಪೇಟೆ ವಿಧಾನಸಭಾ ಕ್ಷೇತ್ರಗಳಿಗೆ ವೆಚ್ಚ ವೀಕ್ಷಕರಾಗಿ ಎಂ. ಮೋಹನ್ ಬಾಬು, ಐ.ಆರ್.ಎಸ್ (ಮೊ.ಸಂ 9481687450) (ಇ-ಮೇಲ್ eochnagar2024@gmail.com) ಅವರನ್ನು ನೇಮಕ ಮಾಡಲಾಗಿದೆ.

ಸಾಮಾನ್ಯ ವೀಕ್ಷಕರಾಗಿ ಪಿ.ಸಿ. ಮೀನಾ, ಭಾ.ಆ.ಸೇ. (ಮೊ.ಸಂ 9481624005) (ಇ-ಮೇಲ್ generalobserverchnagar@gmail.com) ಹಾಗೂ ಪೊಲೀಸ್ ವೀಕ್ಷಕರಾಗಿ ಮನೋಜ್ ಶಿವಾರಿ ಭಾ.ಪೊ.ಸೇ (ಮೊ.ಸಂ 9482316650) (ಇ-ಮೇಲ್ policeobserverchnagar@gmail.com) ಅವರನ್ನು ನೇಮಕ ಮಾಡಲಾಗಿದೆ.

ಮೇಲ್ಕಂಡ ಅಧಿಕಾರಿಗಳು ಸರ್ಕಾರಿ ವಸತಿ ಗೃಹದಲ್ಲಿ ವಾಸ್ತವ್ಯ ಹೂಡಲಿದ್ದಾರೆ. ಸಾರ್ವಜನಿಕರು ಲೋಕಸಭಾ ಕ್ಷೇತ್ರದ ಸಾರ್ವತ್ರಿಕ ಚುನಾವಣೆ ಕುರಿತು ಮಾದರಿ ನೀತಿ ಸಂಹಿತೆ ಉಲ್ಲಂಘನೆ ಚುನಾವಣೆ ಸಂಬಂಧ ದೂರುಗಳನ್ನು ದೂರವಾಣಿ ಮೂಲಕ ಅಥವಾ ಖುದ್ದಾಗಿ ಸಲ್ಲಿಸಬಹು ದಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ಹಾಗೂ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದ್ದಾರೆ.

ದೇವನಹಳ್ಳಿ ಪುರಸಭಾ ಪೌರ ಕಾರ್ಮಿಕರಿಂದ ಮತದಾನ ಜಾಗೃತಿ

ಶೇ.100ರಷ್ಟು ಮತದಾನದ ಮೂಲಕ ರಾಷ್ಟ್ರ ನಿರ್ಮಾಣಕ್ಕೆ ಮುಂದಾಗಿ :ದೊಡ್ಡ ಮಲುವಯ್ಯ

■ ಕಾಯಕಯೋಗಿ ಸುದ್ದಿ



ದೇವನಹಳ್ಳಿ: ತಾಲ್ಲೂಕಿನ ಜನರಿಗೆ ಚುನಾವಣಾ ಕುರಿತು ಎಂ.ಸಿ.ಸಿ ಕಾರ್ಯ ಚಟುವಟಿಕೆಗಳ ಮತ್ತು ಸ್ವೀಪ್ ಕಾರ್ಯ ಕ್ರಮಗಳು ಮಾಡಿ ಮತದಾರರಲ್ಲಿ ಅರಿವು ಮೂಡಿಸಿ ಶೇ.100 ರಷ್ಟು ಪ್ರತಿಯೊಬ್ಬರೂ ಮತದಾನ ಮಾಡಿ ರಾಷ್ಟ್ರ ನಿರ್ಮಾಣಕ್ಕೆ ಮುಂದಾಗಬೇಕು ಎಂದು ಪುರಸಭಾ ಮುಖ್ಯ ಆಡಳಿತ ಅಧಿಕಾರಿ ದೊಡ್ಡ ಮಲುವಯ್ಯ ಹೇಳಿದರು.

ದೇವನಹಳ್ಳಿ ತಾಲೂಕಿನ ಪುರಸಭಾ ಕಾರ್ಯಾಲಯದ ಪೌರ ಕಾರ್ಮಿಕರ ವತಿಯಿಂದ 'ಚುನಾವಣಾ ಪರ್ವ ದೇಶದ ಗರ್ವ' ಎಂಬ ತತ್ವದಡಿ ಜನರಲ್ಲಿ ಮತದಾನ ಕುರಿತು ಅರಿವು ಮೂಡಿಸಿದ್ದಾರೆ,ಪಟ್ಟಣದ ಬೀದಿಗಳಲ್ಲಿ ಸಂಚರಿಸಿ ಮತದಾನದ ಅರಿವು ಮೂಡಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ ಮತ್ತು ಜಿಲ್ಲಾ ಸ್ವೀಪ್ ಸಮಿತಿ , ತಾಲ್ಲೂಕು ಆಡಳಿತ, ತಾಲ್ಲೂಕು ಸ್ವೀಪ್ ಸಮಿತಿ ಸಹಯೋಗದಲ್ಲಿ ಸಾರ್ವತ್ರಿಕ ಲೋಕಸಭಾ ಚುನಾವಣೆ ಹಿನ್ನೆಲೆ ಸಾರ್ವಜನಿಕರಿಗೆ ಮತದಾನ ಕುರಿತು ಅರಿವು ಮತ್ತು ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳ ಲಾಗಿತ್ತು.

ಇಂದು ದೇವನಹಳ್ಳಿ ವಿಧಾನಸಭಾ ಕ್ಷೇತ್ರದ ಮತದಾನವನ್ನು ಪ್ರತಿಯೊಬ್ಬ ಸಾರ್ವಜನಿಕ ಹಕ್ಕಾಗಿದ್ದು ಚಾಚೂ ತಪ್ಪದೇ ಮತದಾನ ಮಾಡಿ ರಾಷ್ಟ್ರ ನಿರ್ಮಾಣಕ್ಕೆ ಎಲ್ಲರೂ ಕೊಡುಗೆ ನೀಡಬೇಕು. ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಮತದಾನದ ಅರಿವನ್ನು ಜಾಗೃತಿಯನ್ನು ಮೂಡಿಸುತ್ತಿದ್ದೇವೆ. ಚುನಾವಣೆಗೆ ಸಂಬಂ ಧಿಸಿದ ನಾಯಕರ , ಪಕ್ಷದ ಚಿನ್ಹೆಗಳ ಬ್ಯಾನರ್ ಮತ್ತು ಬಿತ್ತಿಪತ್ರಗಳನ್ನು ಮರೆಮಾಚಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಬೇರೆ ಎಲ್ಲಾದರೂ ಕಂಡುಬಂದಲ್ಲಿ ತಿಳಿಸಿದರೆ ಅಧಿಕಾರಿಗಳು ಅದನ್ನು ತೆರವುಗೊಳಿಸುವ ಕೆಲಸ ಮಾಡಿತ್ತಾರೆ ಎಂದರು. ದೇವನಹಳ್ಳಿ ತಾಲೂಕು ಐಇಸಿ ಪ್ರಕಾರ್, ಪುರಸಭಾ ಪೌರಕಾರ್ಮಿಕರು, ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಭಾಗವಹಿಸಿದ್ದರು.

ಬಿಜೆಪಿ–ಜೆಡಿಎಸ್ ಮೈತ್ರಿಗೆ ಬೆಂಬಲ: ಸುಮಲತಾ ಘೋಷಣೆ

■ ಕಾಯಕಯೋಗಿ ಸುದ್ದಿ



ಮಂಡ್ಯ : ಲೋಕಸಭೆ ಚುನಾವಣೆಯ ಕುರಿತಂತೆ ತಮ್ಮ ನಿರ್ಧಾರವನ್ನು ಬುಧವಾರ ಪ್ರಕಟಿಸುವುದಾಗಿ ಘೋಷಿಸಿದ್ದ ಮಂಡ್ಯ ಕ್ಷೇತ್ರದ ಪಕ್ಷೇತರ ಸಂಸದೆ ಸುಮಲತಾ ಅಂಬರೀಷ್ ಅವರು ಚುನಾವಣಾ ಕಣದಿಂದ ದೂರ ಉಳಿದು, ಬಿಜೆಪಿ–ಜೆಡಿಎಸ್ ಮೈತ್ರಿಗೆ ಬೆಂಬಲ ನೀಡುವುದಾಗಿ ಘೋಷಿಸಿದ್ದಾರೆ.

ನಗರದ ಕಾಳಿಕಾಂಬ ಸಮುದಾಯಭವನದಲ್ಲಿ ಬುಧವಾರ ಸುಮಲತಾ ಅಂಬರೀಷ್ ಅವರು ಬೆಂಬಲಿಗರ ಸಭೆ ಕರೆದು ನಟ ದರ್ಶನ್ ಹಾಗೂ ಪುತ್ರ ಅಭಿಷೇಕ್ ಸಮ್ಮುಖದಲ್ಲಿ ಬಿಜೆಪಿಯ ಮೋದಿ ನಾಯಕತ್ವ ಬೆಂಬಲಿಸುವುದಾಗಿ ತಿಳಿಸಿದರು.

"ನಾನು ಈ ಒಂದು ಚುನಾವಣೆಯಲ್ಲಿ ಮಾತ್ರ ಸ್ಪರ್ಧಿಸುತ್ತಿಲ್ಲ. ಮಂಡ್ಯಬಿಟ್ಟು ನಾನು ಎಲ್ಲಿಗೂ ಹೋಗುವುದಿಲ್ಲ. ಬಿಜೆಪಿ ಸೇರುವ ನಿರ್ಧಾರ ಮಾಡಿದ್ದೇನೆ. ನರೇಂದ್ರ ಮೋದಿ ಅವರು ನನ್ನನ್ನು ವಿಶ್ವಾಸಕ್ಕೆ ತೆಗೆದುಕೊಂಡು ಮಂಡ್ಯ ಕ್ಷೇತ್ರದ ನಿರ್ಧಾರವನ್ನು ತೆಗೆದುಕೊಂಡಿದ್ದಾರೆ. ಅವರ ಗೌರವ ನಾನು ಉಳಿಸಿಕೊಳ್ಳುವೆ" ಎಂದರು.

ಕಳೆದ 2019ರ ಲೋಕಸಭಾ ಚುನಾವಣೆಯಲ್ಲಿ ಸ್ಪಾಧಿಮಾನದ ಹೆಸರಿನಲ್ಲಿ ಸೆರೆಗೊಡ್ಡಿ ಮತಗಳೋನ್ನು ಕೇಳಿ ಅಂದಿನ ಪ್ರತಿಸ್ಪರ್ಧಿ ಹೆಚ್.ಡಿ.ಕುಮಾರಸ್ವಾಮಿ ಅವರ ಪುತ್ರ ನಿಖಿಲ್ ಕುಮಾರಸ್ವಾಮಿ ವಿರುದ್ಧ ಪಕ್ಷೇತರವಾಗಿ ಗೆಲುವು ಸಾಧಿಸಿದ್ದ ಸುಮಲತಾ ಅವರು, ಇಂದು ಹಳೆಯ ಎದುರಾಳಿಗಳಿಗೆ ಬೆಂಬಲ ನೀಡುವುದಾಗಿ ತಿಳಿಸಿದ್ದಾರೆ.

ಪ್ರತಿ ವಿಷಯದಲ್ಲೂ ತಮ್ಮನ್ನು ವಿಶ್ವಾಕ್ಷೆ ಪಡೆದು ನನ್ನ ನಾಯಕತ್ವವನ್ನು ಬೆಂಬಲಿಸಿರುವ ಹಿನ್ನೆಲೆಯಲ್ಲಿ ಭವಿಷ್ಯತ್ತಿನ ರಾಜಕಾರಣವನ್ನು ಎನ್‌ಡಿಎ ಸಖ್ಯದಲ್ಲಿ ಉಳಿಸಿಕೊಳ್ಳುವುದಾಗಿ ತಿಳಿಸಿದ ಅವರು, ದೇಶ ಸಮೃದ್ಧವಾಗಿದ್ದರೆ ರಾಜ್ಯ ಹಾಗೂ ಜಿಲ್ಲೆ ಚೆನ್ನಾಗಿರುತ್ತದೆ. ನಾನು ಮಂಡ್ಯದ ಸ್ವಾಭಿಮಾನವನ್ನು ಎತ್ತಿ ಹಿಡಿಯುವ ಕೆಲಸವನ್ನು ಕಳೆದ 5 ವರ್ಷದಲ್ಲಿ ಮಾಡಿದ್ದೇನೆ. ಕ್ಷೇತ್ರದ ಅಭಿವೃದ್ಧಿಗೆ ಹಲವಾರು ಸ್ತರಗಳಲ್ಲಿ ಕೆಲಸ ನಿರ್ವಹಿಸಿದ್ದು, ರೈಲ್ವೆ ಕೆಳಸೇತುವೆ, ಎಸ್ಕಲೇಟರ್ ಅಳವಡಿಕೆ, ಮಳವಳ್ಳಿ ಸಿಆರ್‌ಪಿ ಎಫ್ ಮಹಿಳಾ ತರಬೇತಿ ಕೇಂದ್ರ ಸೇರಿದಂತೆ ಹಲವು ಮಹತ್ತರ ಕಾರ್ಯಗಳು ನನ್ನ ಅವಧಿಯಲ್ಲಿ ಜಾರಿಯಾಗಿವೆ ಎಂದರು.

ನನ್ನ ಅಧಿಕಾರಾವಧಿಯಲ್ಲಿ ಜಿಲ್ಲೆಯ ಘನತೆಯನ್ನು ಇಂಡಿಯಾದಲ್ಲಿ ಎತ್ತಿ ಹಿಡಿದಿರುವ ಕೀರ್ತಿ ನನ್ನದಾಗಿದೆ. ಮಂಡ್ಯ ಜಿಲ್ಲೆಯ ಸೊಸೆಯಾಗಿ ಮತ ಕೇಳಿ. ಮಾವ ಹಾಗೂ ಪತಿ ಅಂಬರೀಶ್ ಅವರ ಹೆಸರಿಗೆ ಚ್ಯುತಿಬಾರದಂತೆ ಕಾರ್ಯನಿರ್ವಹಿಸಿದ್ದೇನೆಂದು ಹೇಳಿದರು.

ಪ್ರಸ್ತುತ ಎದುರಾಗಿರುವ ಲೋಕಸಭಾ ಚುನಾವಣೆ ಮತ್ತೊಂದು ಸವಾಲು ಸೃಷ್ಟಿಸಿದೆ. 2019ರಂದು ಪ್ರಧಾನಿ ನರೇಂದ್ರ ಮೋದಿಯವರು ಪತಿ ಅಂಬರೀಶ್ ಹೆಸರೇಳಿ. ನನ್ನ ಪರ ಮತಯಾಚಿಸಿದರು. ಬಿಜೆಪಿ ಬಾಹ್ಯ ಬೆಂಬಲ ಘೋಷಿಸಿತು. ಅದಕ್ಕಾಗಿ 2023ರ ವಿಧಾನಸಭಾ ಚುನಾಬಣೆಯಲ್ಲಿ ಆ ಪಕ್ಷದ ಪರವಾಗಿ ಪ್ರಚಾರ ಮಾಡಿದ್ದೇನೆ ಎಂದು ವಿವರಿಸಿದರು.

ಇದೇ 26ರಂದು ನಡೆಯಲಿರುವ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ–ಜೆಡಿಎಸ್ ಪಕ್ಷಗಳು ಮೈತ್ರಿಗೆ ಮುಂದಾಗಿ ಸ್ಪರ್ಧೆ ನಡೆಸುತ್ತಿವೆ. ಮಂಡ್ಯ ಲೋಕಸಭಾ ಕ್ಷೇತ್ರವನ್ನು ಬಿಜೆಪಿ ತೆಕ್ಕೆಯಲ್ಲೇ ಉಳಿಸಿಕೊಳ್ಳಲು ನನ್ನ ಹೋರಾಟ ಮುಂದುವರೆದಿತ್ತು. ಆದರೆ ಮೈತ್ರಿ ಕಾರಣಕ್ಕಾಗಿ ನನಗೆ ಅನ್ಯ ಕ್ಷೇತ್ರಗಳಲ್ಲಿ ಸ್ಪರ್ಧಿಸುವ ಅವಕಾಶ ಒದಗಿ ಬಂತು. ಆದರೆ ನಾನು ಮಂಡ್ಯ ಜಿಲ್ಲೆಯ ಬಾಂಧವ್ಯವನ್ನು ಕಳೆದುಕೊಳ್ಳಲು ಇಷ್ಟವಿಲ್ಲದ ಕಾರಣ, ನಾನು ಚುನಾಯಿತಳಾಗಿದ್ದ ಕ್ಷೇತ್ರದ ಸ್ಪರ್ಧೆಯನ್ನೇ ತೊರೆಯುವಂತಾಯಿತು ಎಂದರು.

ಕಾಂಗ್ರೆಸ್ ಪಕ್ಷದ ಹಿರಿಯ ನಾಯಕರೊಬ್ಬರು ಸುಮಲತಾ ಅವಶ್ಯಕತೆ ನ ವುಗಿಲ್ಲವೆಂದಿದ್ದಾರೆ. ನನ್ನ ಅವಶ್ಯಕತೆಯಿಲ್ಲದವರ ಪಕ್ಷಕ್ಕೆ ನಾನು ತೆರಳುವ ಅವಕಶ್ಯಕತೆ ಇಲ್ಲ. ಇದು ನನಗೆ ಅಂಬರೀಶ್ ಅವರಿಂದ ಬಂದಿರುವ ಸ್ಪಾಭಿಮಾನ ಎಂದು ಪರೋಕ್ಷವಾಗಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕಾಲೆಳೆದರು.

ನನಗೆ ಸ್ಪಾರ್ಧ ರಾಜಕಾರಣ ಗೊತ್ತಿಲ್ಲ. ಅಧಿಕಾರಕ್ಕೆ ನಾನಾಗಲಿ, ಅಂಬರೀಶ್ ಆಗಲಿ ಎಂದು ಆಸೆಪಟ್ಟಿಲ್ಲ. ನಮ್ಮ ಆಪ್ತ ಬೆಂಬಲಿಗರು, ಹಿತೈಷಿಗಳನ್ನು ಕಡೆಗಣಿಸುವುದಿಲ್ಲ. ನನಗೆ ಭವಿಷ್ಯದಲ್ಲಿ ಉತ್ತಮ ಸ್ಥಾನಮಾನ ದೊರೆಯಲಿದ್ದು, ಅಂದು ಸಹ ನಾನು ನನ್ನ ಜನರೊಟ್ಟಿಗೆ ಇರುತ್ತೇನೆ ಎಂದು ತಿಳಿಸಿದರು.

ಸಭೆಯಲ್ಲಿ ನಿರ್ಮಾಪಕ ರಾಕ್‌ಲೈನ್ ವೆಂಕಟೇಶ್, ಬೇಲೂರು ಸೋಮಶೇಖರ್, ಹಾಕಿ ಶರಿಕುಮಾರ್ ಸೇರಿದಂತೆ ಹಲವರಿದ್ದರು.

ಏ.6 ರಿಂದ 30 ರವರೆಗೆ ಉದರ ದರ್ಶಕ ಶಸ್ತ್ರ ಚಿಕಿತ್ಸಾ ಶಿಬಿರ

ಮಂಡ್ಯ: ಮಂಡ್ಯ ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವತಿಯಿಂದ ಏಪ್ರಿಲ್ 2024 ರ ಮಾಹೆಯ ಏಪ್ರಿಲ್ 06 ರಿಂದ 30ರವರೆಗೆ ಉದರ ದರ್ಶಕ ಶಸ್ತ್ರ ಚಿಕಿತ್ಸಾ ಶಿಬಿರವನ್ನು ಆಯೋಜಿಸಲಾಗಿದೆ.


ಏ.6 ರಂದು ಕೀಲಾರ ಸರ್ಕಾರಿ ಆರೋಗ್ಯ ಕೇಂದ್ರ, ಏಪ್ರಿಲ್ 16 ರಂದು ಬಿಂಡಿಗನವಿಲೆ ಸರ್ಕಾರಿ ಆರೋಗ್ಯ ಕೇಂದ್ರ ಹಾಗೂ ಮಧ್ಯಾಹ್ನ 1.00 ಗಂಟೆಗೆ ನಾಗಮಂಗಲ ಸಾರ್ವಜನಿಕ ಆಸ್ಪತ್ರೆಯಲ್ಲಿ, ಏಪ್ರಿಲ್ 17 ರಂದು ಶಿವಳ್ಳಿ ಸರ್ಕಾರಿ ಆರೋಗ್ಯ ಕೇಂದ್ರ, ಏಪ್ರಿಲ್ 18 ರಂದು ಮದ್ದೂರು ತಾಲೂಕಿನ ಸರ್ಕಾರಿ ಆರೋಗ್ಯ ಕೇಂದ್ರ, ಏಪ್ರಿಲ್ 19 ರಂದು ಅರಕೆರೆ ಸರ್ಕಾರಿ ಆರೋಗ್ಯ ಕೇಂದ್ರ, ಏಪ್ರಿಲ್ 20 ರಂದು ಬಸರಾಳು ಪ್ರಾಥಮಿಕ ಆರೋಗ್ಯ ಕೇಂದ್ರ, ಏಪ್ರಿಲ್ 23 ರಂದು ಕೆ.ಎಂ.ದೊಡ್ಡಿ ಸರ್ಕಾರಿ ಆರೋಗ್ಯ ಕೇಂದ್ರ, ಏಪ್ರಿಲ್ 24 ರಂದು ಕೆ. ಆರ್. ಪೇಟೆ ತಾಲ್ಲೂಕು ಆಸ್ಪತ್ರೆ, ಏಪ್ರಿಲ್ 25 ರಂದು ಕಿರುಗಾವಲು ಸರ್ಕಾರಿ ಆರೋಗ್ಯ ಕೇಂದ್ರ, ಏಪ್ರಿಲ್ 30 ರಂದು ಪಾಂಡವಪುರ ಉಪ ವಿಭಾಗ ಆಸ್ಪತ್ರೆಗಳಲ್ಲಿ ಬೆಳಿಗ್ಗೆ 10 ಗಂಟೆಗೆ ಉದರ ದರ್ಶಕ ಶಸ್ತ್ರ ಚಿಕಿತ್ಸಾ ಶಿಬಿರ ನಡೆಯಲಿದೆ ಎಂದು ಜಿಲ್ಲಾ ಪಂಚಾಯತ್‌ನ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಏ.5 ರಂದು ಡಾ॥ ಬಾಬು ಜಗಜೀವನರಾಂ ಜಯಂತಿ

ಮಂಡ್ಯ : ಹಸಿರು ಹರಿಕಾರ ಡಾ॥ ಬಾಬು ಜಗಜೀವನರಾಂರವರ 117ನೇ ಜನ್ಮ ದಿನಾಚರಣೆಯ ಅಂಗವಾಗಿ ಏಪ್ರಿಲ್ 5 ರಂದು ಮಂಡ್ಯ ಜಿಲ್ಲಾಧಿಕಾರಿಗಳ ಕಛೇರಿಯ ಮುಂಭಾಗದ ಉದ್ಯಾನವನದಲ್ಲಿರುವ ಡಾ॥ ಬಾಬು ಜಗಜೀವನರಾಂರವರ ಪ್ರತಿಮೆಗೆ ಮಾಲಾರ್ಪಣೆ ಕಾರ್ಯಕ್ರಮವನ್ನು ಬೆಳಿಗ್ಗೆ 9.00 ಗಂಟೆಗೆ ನಂತರ ವೇದಿಕೆ ಕಾರ್ಯಕ್ರಮವನ್ನು ಬೆಳಿಗ್ಗೆ 9.30 ರಿಂದ 10.30 ರವರೆಗೆ ಜಿಲ್ಲಾ ಪಂಚಾಯತ್ ನ ಕಾವೇರಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಸದರಿಜಯಂತಿಗೆ ಇಲಾಖಾಧಿಕಾರಿಗಳು ಮತ್ತು ಸಾರ್ವಜನಿಕರು ಹಾಜರಾಗುವಂತೆ ಮಂಡ್ಯ ಸಮಾಜಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕುಮಾರಸ್ವಾಮಿರನ್ನು 2 ಲಕ್ಷಕ್ಕೂ ಹೆಚ್ಚು ಮತಗಳ ಅಂತರದಿಂದ ಗೆಲ್ಲಿಸಲು ಸಾರಾ ಮನವಿ

■ ಕಾಯಕಯೋಗಿ ಸುದ್ದಿ



ಸಾಲಿಗ್ರಾಮ:ದುರಹಂಕಾರಿ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಬುದ್ಧಿ ಕಲಿಸಲು ಈ ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷವನ್ನು ಬುಡ ಸಮೇತ ಕಿತ್ತಿ ಹಾಕಲು ಮಂಡ್ಯ ಲೋಕಸಭಾ ಅಭ್ಯರ್ಥಿ ವಾಜಿ ಮುಖ್ಯಮಂತ್ರಿ ಎಚ್ ಡಿ ಕುಮಾರಸ್ವಾಮಿ ಅವರನ್ನು 2 ಲಕ್ಷಕ್ಕೂ ಹೆಚ್ಚು ಮತಗಳ ಅಂತರದಿಂದ ಗೆಲ್ಲಿಸುವಂತೆ ಮಾಜಿ ಸಚಿವ ಸಾ ರಾ ಮಹೇಶ್ ಕಾರ್ಯಕರ್ತರಲ್ಲಿ ಮನವಿ ಮಾಡಿದರು.

ಪಟ್ಟಣದ ಎಚ್ ಡಿ ದೇವೇಗೌಡ ಸಮುದಾಯ ಭವನದಲ್ಲಿ ಬಿಜೆಪಿ ಮತ್ತು ಜೆಡಿಎಸ್ ಪಕ್ಷದ ಸಮ್ಮಿಲನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ನನ್ನ 15 ವರ್ಷದ ಶಾಸಕರ ಅವಧಿಯಲ್ಲಿ ಯಾವತ್ತೂ ಯಾವುದೇ ಒಬ್ಬ ಅಧಿಕಾರಿಯ ವರ್ಗಾವಣೆಯಿಂದ ಹಾಗೂ ಗುತ್ತಿಗೆದಾರ ಮತ್ತು ಆಕ್ರಯ ಮನೆಗಳ ಹಂಚಿಕೆಯಲ್ಲಿ ಹಣ ಪಡೆದಿಲ್ಲ. ಇವರಿಂದ ಹಣ ಪಡೆಯುವ ಬದಲು ಬೀದಿಯಲ್ಲಿ ನಿಂತು ಬಿಕ್ಷೆ ಬೇಡುವುದು ಲೇಸು ಎಂದು ಹಾಲಿ ಶಾಸಕ ಡಿ ರವಿಶಂಕರ್ ವಿರುದ್ಧ ಆಕ್ರೋಶ ಹೊರ ಹಾಕಿದರು.

15 ವರ್ಷ ಶಾಸಕನಾಗಿ ಕೆಲಸ ಮಾಡಿಲ್ಲ, ಜನಸೇವೆ ಮಾಡಿದ್ದೇನೆ. ನನ್ನ ಸ್ವಂತ ಹಣ 400 ಕೋಟಿಯನ್ನು ಬಡವರ ದ್ವನಿ ಇಲ್ಲದವರ ಸೂಕ್ಷಾತಿ ಸೂಕ್ಷ್ಮ ಸಮಾಜದ ಅಭಿವೃದ್ಧಿಗಾಗಿ ಜನಸೇವೆ ಮಾಡಿದ್ದು ಮನೆಯಿಂದ ಊಟವನ್ನು ತಂದು ತಿಂದಿದ್ದೇನೆ. ಈಗಿನ ಶಾಸಕರು ಹಾಗೆ ಅಧಿಕಾರಿಗಳು ಮತ್ತು ಕಾರ್ಯಕರ್ತರನ್ನು ನಮ್ಮ ತಂದೆಯನ್ನು ಹೋಗಿ ನೋಡಿ ತೋಟದ ಮನೆಗೆ ಹೋಗಿ ಎಂದು ಯಾರಿಗೂ ಕಳಿಸಿರಲಿಲ್ಲ. ಇಂಥವರಿಗೆ ಬುದ್ಧಿ ಕಲಿಸಲು ಜೆಡಿಎಸ್ ಪಕ್ಷದ ಅಭ್ಯರ್ಥಿ ಕುಮಾರಸ್ವಾಮಿಯವರಿಗೆ ಮತ ನೀಡುವಂತೆ ತಿಳಿಸಿದರು.

ಕೆ ಆರ್ ನಗರ ತಾಲ್ಲೂಕಿನ 60 ಹಳ್ಳಿಗಳಿಗೆ ರೈತರ ಬೆಳೆ ಬೆಳೆಯಲು ಕಾಲುವೆಯ ಕಾಮಗಾರಿ ಮಾಡಿಸುವ ಮೂಲಕ ನೀರಾವರಿಯನ್ನು ತಂದು ಕೊಟ್ಟಂತ ಮಾಜಿ ಪ್ರಧಾನಮಂತ್ರಿ ಎಚ್ ಡಿ ದೇವೇಗೌಡರು ಕೆ ಆರ್ ನಗರಕ್ಕೆ ಕೇಂದ್ರದಿಂದ ರೈಲ್ವೆ ಸ್ಟೇಷನ್ ತಂದು, ಹಲವು ಯೋಜನೆಗಳನ್ನು ಜಾರಿಗೆ ತಂದಂತಹ ಈ ಮಣ್ಣಿನ ಮಗ ಮಾಜಿ ಪ್ರಧಾನಮಂತ್ರಿ ಎಚ್ ಡಿ ದೇವೇಗೌಡರು ಹಾಗೂ 28000 ಕೋಟಿ ರೈತರ ಸಾಲ ಮನ್ನಾ ಮಾಡಿದ ಮಾಜಿ ಮುಖ್ಯಮಂತ್ರಿ ಎಚ್ ಡಿ ಕುಮಾರಸ್ವಾಮಿ ಅವರನ್ನು ಗೆಲ್ಲಿಸುವಂತೆ ತಿಳಿಸಿದರು.

2018 ರಲ್ಲಿ ಕಾಂಗ್ರೆಸ್ ಜೆಡಿಎಸ್ ನ ನಾಯಕರು ಹೊಂದಾಣಿಕೆ ಮಾಡಿಕೊಂಡು ಒಳಗಡೆ ಚೂರಿ ಹಾಕಿದ ಕಾಂಗ್ರೆಸ್ ನಾಯಕರಿಗೆ ಬುದ್ಧಿ ಕಲಿಸಲು ಕಳೆದ ಬಾರಿ ಸೋತ ಸೋಲಿನ ಸೇಡನ್ನು ತೀರಿಸಿಕೊಳ್ಳಲು ಬುದ್ಧಿ ಭ್ರ ಮಣಿಯಂತೆ ಮಾತನಾಡುತ್ತಿರುವ ಶಾಸಕರಿಗೆ ಬುದ್ಧಿ ಕಲಿಸಲು, ಈ ಚುನಾವಣ